VOLUME: 16 | 01 JUNE 2026 | ಶನಿವಾರ | RS: 2 | PAGE: 06 ISSUE: 111 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಕೇನ್ಸ್ 2026 ಚಲನಚಿತ್ರೋತ್ಸವದಲ್ಲಿ ಕಾಣಿಸಿಕೊಂಡ ಬಳಿಕ ನಟಿ ಐಶ್ವರ್ಯಾ ರೈ ಬಚ್ಚನ್ ವಿರುದ್ಧ ನಡೆದ ಬಾಡಿ ಶೇಮಿಂಗ್ ಮತ್ತು ಟ್ರೋಲಿಂಗ್‌ಗೆ ನಟಿ ಮಾಧುರಿ ದೀಕ್ಷಿತ್ ಬೇಸರ ವ್ಯಕ್ತಪಡಿಸಿದ್ದಾರೆ. ಐಶ್ವರ್ಯಾ ಕಳೆದ 20 ವರ್ಷಗಳಿಂದ ಕೇನ್ಸ್ ವೇದಿಕೆಯಲ್ಲಿ ಭಾರತವನ್ನು ಪ್ರತಿನಿಧಿಸುತ್ತಿದ್ದಾರೆ.



BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಆರ್‌ಸಿಬಿಗೆ ಮತ್ತೊಂದು ಕಪ್

ಎಐ ಚಿತ್ರ




ಕಳೆದ ವರ್ಷ ಚೊಚ್ಚಲ ಕಪ್ ಗೆದ್ದು ಮನೆ ಮಾತಾಗಿದ್ದ ಆರ್‌ಸಿಬಿ ಇದೀಗ 2026ರ ಐಪಿಎಲ್ ಕಪ್‌ನ್ನು ಸಹ ಗೆಲ್ಲುವ ಮೂಲಕ 2ನೇ ಭಾರಿ ತಮ್ಮ ಗೆಲುವಿನ ನಾಗಾಲೋಟವನ್ನು ಮುನ್ನಡೆಸಿದೆ. ಆರ್‌ಸಿಬಿ ಕಪ್ ಗೆಲ್ಲುತ್ತಿದ್ದಂತೆಯೇ ದೇಶದಾದ್ಯಂತ ಪಟಾಕಿ ಹೊಡೆಯುವ ಮೂಲಕ ಸಂಭ್ರಮಾಚರಣೆಯಲ್ಲಿ ತೊಡಗಿದ್ದರು.

# ಭೀಕರ ಅಪಘಾತ: ಐವರು ಬಲಿ



ಚಿಕ್ಕಬಳ್ಳಾಪುರ: ಆಟೋಗೆ ಕಾರು ಡಿಕ್ಕಿಯಾದ ಪರಿಣಾಮ ಐವರು ಸಾವನ್ನಪ್ಪಿದ ಘಟನೆ ಬಾಗೇಪಲ್ಲಿ ತಾಲೂಕಿನ ಸುಂಕಲಮ್ಮ ದೇವಾಲಯದ ಬಳಿ ನಡೆದಿದೆ. ಮುಂದೆ ಸಾಗುತ್ತಿದ್ದ ಆಟೋಗೆ ಹಿಂಬದಿಯಿಂದ ಥಾರ್ ಕಾರು ಡಿಕ್ಕಿಯಾಗಿದೆ. ಡಿಕ್ಕಿ ರಭಸಕ್ಕೆ ಮುಂದೆ ನಿಂತಿದ್ದ ಲಾರಿ ಆಟೋ ಡಿಕ್ಕಿಯಾಗಿ ಅಪ್ಪಚ್ಚಿಯಾಗಿದೆ. ಅಪಘಾತದಲ್ಲಿ 3–4 ಮಂದಿ ಗಾಯಾಗೊಂಡಿದ್ದಾರೆ. ಗಾಯಾಳುಗಳನ್ನು ಬಾಗೇಪಲ್ಲಿ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಾಗೇಪಲ್ಲಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಪಘಾತ ಸಂಭವಿಸಿದೆ.

ಮೃತಪಟ್ಟವರು: ಆಟೋ ಚಾಲಕ ಅಂಜನಪ್ಪ ಸೇರಿ ವರ್ಷದ ಉಮಾದೇವಿ (55) ವಿಜಯಾ (40) ಲಕ್ಷ್ಮಮ್ಮ (50) ವರ್ಷದ ಸರೋಜಮ್ಮ (35) ಮೃತಪಟ್ಟಿದ್ದಾರೆ.

ಗಂಗಾದೇವಿ, ಲಕ್ಷ್ಮಿದೇವಿ, ರತ್ನಮ್ಮ, ಅರುಣಮ್ಮ ಹಾಗೂ ರಾಜಮ್ಮ ಎಂಬವರು ಗಂಭೀರವಾಗಿ ಗಾಯಗೊಂಡಿದ್ದು, ಬಾಗೇಪಲ್ಲಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗೆ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಮೇಲ್ನೋಟಕ್ಕೆ ಥಾರ್ ಕಾರು ಚಾಲಕ ಅತಿ ವೇಗವೇ ಅಪಘಾತಕ್ಕೆ ಕಾರಣ ಎನ್ನಲಾಗುತ್ತಿದೆ.

ನಿಗದಿಗಿಂತ ಹೆಚ್ಚಿನ ಜನರನ್ನು ಸಾಗಿಸುವ ಮೂಲಕ ಆಟೋ ಚಾಲಕನೂ ಕಾನೂನು ಉಲ್ಲಂಘನೆ ಮಾಡಿದ್ದಾನೆ.

ಮತ್ತೊಂದೆಡೆ ಸಂಚಾರಿ ನಿಮಯಮಗಳನ್ನ ಉಲ್ಲಂಘಿಸಿ ರಸ್ತೆ ಬದಿ ಲಾರಿ ನಿಲ್ಲಿಸಿ ಲಾರಿ ಚಾಲಕನೂ ಎಡವಟ್ಟು ಮಾಡಿದ್ದು, ಲಾರಿ ಇಲ್ಲದೇ ಹೋಗಿದ್ರೆ ಜಮೀನಿಗೆ ಆಟೋ ನುಗ್ಗಿ ಸಾವಿನ ಸಂಖ್ಯೆ ಕಡಿಮೆ ಆಗುವ ಸಾಧ್ಯತೆಗಳಿತ್ತು.

## ಶಾಲೆಯಲ್ಲಿ ಅಗ್ನಿ ಅವಘಡ: ತಪ್ಪಿದ ಅನಾಹುತ

ಬೆಂಗಳೂರು: ರಾಜಧಾನಿ ಬೆಂಗಳೂರಿನ ಖಾಸಗಿ ಶಾಲೆಯಲ್ಲಿ ಶನಿವಾರ ಬೆಳಗ್ಗೆ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, ಇಡೀ ಕಟ್ಟಡ ಹೊತ್ತಿ ಉರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬೆಳಗ್ಗೆ 9.30ರ ಸುಮಾರಿಗೆ ನಾಗದೇವನ ಹಳ್ಳಿಯ ಖಾಸಗಿ



ಶಾಲೆಯೊಂದರಲ್ಲಿ ಈ ಅಗ್ನಿ ಅವಘಡ ಸಂಭವಿಸಿದ್ದು, ಶಾಲೆಗೆ ರಜೆ ಇದ್ದಿದ್ದರಿಂದ ಯಾವುದೇ ಪ್ರಾಣ ಹಾನಿಯಾಗಿಲ್ಲ ಎಂದು ಪೊಲೀಸರು ಹೇಳಿದ್ದಾರೆ.

ಘಟನೆಯಲ್ಲಿ ಯಾವುದೇ ಗಾಯಗಳು ಅಥವಾ ಸಾವುನೋವುಗಳು ವರದಿಯಾಗಿಲ್ಲ. ಬೆಂಕಿಯನ್ನು ನಂದಿಸಲು ಮೂರು ಅಗ್ನಿಶಾಮಕ ದಳದ ವಾಹನಗಳು ಸ್ಥಳಕ್ಕೆ ಧಾವಿಸಿ, ಬೆಂಕಿ ನಂದಿಸಿದವು ಎಂದು ಪೊಲೀಸರು ತಿಳಿಸಿದ್ದಾರೆ.


ಶಾಲೆಯ ನಾಲ್ಕನೇ ಮಹಡಿಯಲ್ಲಿರುವ ಸಭಾಂಗಣದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ನಂತರ ಅದು ಇಡೀ ಕಟ್ಟಡಕ್ಕೆ ವ್ಯಾಪಿಸಿದೆ. ದಟ್ಟವಾದ ಹೊಗೆ ಇಡೀ ಕಟ್ಟಡವನ್ನು ಆವರಿಸಿತು. ಶನಿವಾರವಾಗಿದ್ದರಿಂದ, ಶಾಲೆಯ ನಿಯಮಿತ ತರಗತಿಗಳಿಗೆ ರಜೆ ನೀಡಲಾಗಿತ್ತು. ಆದಾಗ್ಯೂ, ಕೆಲವು ವಿದ್ಯಾರ್ಥಿಗಳು ಓರಿಯಂಟೇಶನ್ ಸೆಷನ್‌ಗೆ ಹಾಜರಾಗಲು ಬಂದಿದ್ದರು. ಶಾಲಾ ಸಿಬ್ಬಂದಿ ಜೊತೆಗೆ ಅವರನ್ನು ಸುರಕ್ಷಿತವಾಗಿ ಸ್ಥಳಾಂತರಿಸಲಾಯಿತು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಾಥಮಿಕ ತನಿಖೆಯ ಪ್ರಕಾರ ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ಕಾಣಿಸಿಕೊಂಡಿದೆ ಎಂದು ಹೇಳಲಾಗಿದ್ದು, ನಿಖರವಾದ ಕಾರಣವನ್ನು ಕಂಡುಹಿಡಿಯಲು ವಿವರವಾದ ತನಿಖೆ ನಡೆಯುತ್ತಿದೆ.

# ರೆಡ್ಡಿಗೆ ಬಿಗ್‌ರಿಲೀಫ್

ಬೆಂಗಳೂರು: ಅಕ್ರಮ ಅದಿರು ಸಾಗಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿಗೆ ದೊಡ್ಡ ರಿಲೀಫ್ ಸಿಕ್ಕಿದೆ. ಲೋಕಾಯುಕ್ತ ಎಸ್‌ಐಟಿ ದಾಖಲಿಸಿದ್ದ ಎರಡು ಪ್ರಮುಖ ಪ್ರಕರಣಗಳಲ್ಲಿ ಜನಾರ್ದನ ರೆಡ್ಡಿ ಸೇರಿದಂತೆ ಹಲವರನ್ನು ಕೈಬಿಟ್ಟು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇಂದು ಆದೇಶ ಹೊರಡಿಸಿದೆ.

ಮಾಜಿ ಸಚಿವ, ಗಂಗಾವತಿ ಕ್ಷೇತ್ರದ ಶಾಸಕ ಗಾಲಿ ಜನಾರ್ದನ ರೆಡ್ಡಿ ವಿರುದ್ಧದ ಅಕ್ರಮ ಅದಿರು ಸಾಗಾಟ ಪ್ರಕರಣಕ್ಕೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ಲೋಕಾಯುಕ್ತ ವಿಶೇಷ ತನಿಖಾ ದಳ ದಾಖಲಿಸಿದ್ದ ಎರಡು ಪ್ರಮುಖ ಕೇಸ್‌ಗಳಲ್ಲಿ ಜನಾರ್ದನ ರೆಡ್ಡಿಗೆ ರಿಲೀಫ್ ಸಿಕ್ಕಿದೆ. ಪ್ರಕರಣದಿಂದ ತಮ್ಮನ್ನು ಮುಕ್ತಗೊಳಿಸುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿ



ವಿಚಾರಣೆ ಮಾಡಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಜನಾರ್ದನ ರೆಡ್ಡಿ ಸೇರಿದಂತೆ ಇತರ ಆರೋಪಿಗಳನ್ನು ಪ್ರಕರಣದಿಂದ ಕೈಬಿಟ್ಟು ಮಹತ್ವದ ಆದೇಶ ಹೊರಡಿಸಿದೆ.

ಜನಾರ್ದನ ರೆಡ್ಡಿ ಅವರೊಂದಿಗೆ ಮೆಹಫೂಜ್ ಅಲಿ ಖಾನ್, ಉದ್ಯಮಿಗಳಾದ ಹೊತ್ತೂರ್ ಅಬ್ದುಲ್ ವಹಾಬ್, ಹೊತ್ತೂರ್ ನೂರ್ ಅಹಮದ್, ಹೊತ್ತೂರ್ ಮೊಹಮ್ಮದ್ ಇಕ್ಬಾಲ್ ಹಾಗೂ ಟ್ರೈಡೆಂಟ್ ಮೈನಿಂಗ್ ಕಂಪನಿ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನೂ ಸಹ ಕೋರ್ಟ್ ವಜಾಗೊಳಿಸಿದೆ.

ಈ ಹಿಂದೆ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಅವಧಿಯಲ್ಲಿ ಜನಾರ್ದನ ರೆಡ್ಡಿ ಅಕ್ರಮ ಗಣಿಗಾರಿಕೆ ಮತ್ತು ಅದಿರು ಸಾಗಾಟಕ್ಕೆ ಪಿತೂರಿ ನಡೆಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆಯಲ್ಲಿ ಸಿಆರ್‌ಪಿಸಿ ಸೆಕ್ಷನ್ 227 ಅಡಿಯಲ್ಲಿ ಪ್ರಕರಣದಿಂದ ಕೈಬಿಡುವಂತೆ ಆರೋಪಿಗಳ ಪರ ವಕೀಲರು ಕೋರ್ಟ್‌ಗೆ ಮನವಿ ಮಾಡಿದ್ದರು. ವಾದ–ಪ್ರತಿವಾದ ಆಲಿಸಿದ ವಿಶೇಷ ನ್ಯಾಯಾಲಯವು ಇದೀಗ ಇವರೆಲ್ಲರಿಗೂ ಕ್ಲೀನ್ ಚೀಟ್ ನೀಡಿದೆ.

## ಬುಧವಾರವೇ ಕಾಂಗ್ರೆಸ್ ಕಚೇರಿಗೆ ಭೂಮಿಪೂಜೆ

ಬೆಂಗಳೂರು: ಮುಖ್ಯಮಂತ್ರಿ ಆಗಿ ಪದಗ್ರಹಣ ಮಾಡಿದ ದಿನವೇ ಕಾಂಗ್ರೆಸ್ ಪಕ್ಷದ ನೂತನ ಕಚೇರಿ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಲು ನಿಯೋಜಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಿದ್ಧತೆ ನಡೆಸಿದ್ದಾರೆ.

ರೇಸ್ ಕೋರ್ಸ್ ರಸ್ತೆಯಲ್ಲಿರುವ ಕಾಂಗ್ರೆಸ್ ಭವನವನ್ನು ಸಂಪೂರ್ಣವಾಗಿ ಹೊಸದಾಗಿ ನಿರ್ಮಿಸಲು ನಿರ್ಧರಿಸಲಾಗಿದೆ. ಮುಖ್ಯಮಂತ್ರಿ ಆಗಿ ಪ್ರಮಾಣವಚನ ಸ್ವೀಕರಿಸಿದ ಬಳಿಕ ಅದೇ ಸಂಜೆ ರಾಹುಲ್ ಗಾಂಧಿ ಸಮ್ಮುಖದಲ್ಲಿ ನೂತನ ಭವನಕ್ಕೆ ಭೂಮಿ ಪೂಜೆ ನೆರವೇರಿಸುವ ಯೋಜನೆ ರೂಪಿಸಲಾಗಿದೆ.

ರೇಸ್ ಕೋರ್ಸ್ ರಸ್ತೆಯ ಕಾಂಗ್ರೆಸ್ ಭವನದ ಜಾಗಕ್ಕೆ ಭೇಟಿ ನೀಡಿದ ಡಿಕೆ ಶಿವಕುಮಾರ್, ಸಿದ್ಧತೆಗಳ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು. ಈ ವೇಳೆ ಎಲ್ಲೆಲ್ಲಿ ಯಾವ ವ್ಯವಸ್ಥೆ ಮಾಡಬೇಕು, ಎಷ್ಟು ಕುರ್ಚಿಗಳ ವ್ಯವಸ್ಥೆ ಇರಬೇಕು ಹಾಗೂ ಪ್ರಮಾಣವಚನ ಕಾರ್ಯಕ್ರಮದ ನೇರ ಪ್ರಸಾರದ ವ್ಯವಸ್ಥೆ ಹೇಗಿರಬೇಕು ಎಂಬ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಜ್ಯದಾದ್ಯಂತ 100 ಪಕ್ಷದ ಕಚೇರಿಗಳನ್ನು ನಿರ್ಮಿಸುವ ಗುರಿಯನ್ನು ಕಾಂಗ್ರೆಸ್ ಹಾಕಿಕೊಂಡಿದ್ದು, ಅವುಗಳಿಗೂ ಮತ್ತೊಂದು ದಿನ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದು ಡಿಕೆಶಿ ತಿಳಿಸಿದರು.

ಗುದ್ದಲಿ ಪೂಜೆ ಕಾರ್ಯಕ್ರಮಕ್ಕೆ ನಾಲ್ಕು ವಿವಿಐಪಿ ವಾಹನಗಳಿಗೆ ಮಾತ್ರ ಅವಕಾಶ ನೀಡಬೇಕು. ಉಳಿದ ವಾಹನಗಳಿಗೆ ಅವಕಾಶ ನೀಡಬಾರದು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ಇದು ಐತಿಹಾಸಿಕ ಕಾರ್ಯಕ್ರಮ. ರೇಸ್ ಕೋರ್ಸ್ ಕಾಂಗ್ರೆಸ್ ಕಚೇರಿ ಹಾಗೂ ಕ್ವೀನ್ಸ್ ರಸ್ತೆಯ ಕಚೇರಿಗೆ ಭೂಮಿ ಪೂಜೆ ಮಾಡುತ್ತೇವೆ. ಪ್ರಮಾಣವಚನ ಮುಗಿದ ಬಳಿಕ ಇಲ್ಲಿ ಕಾರ್ಯಕ್ರಮ ನಡೆಸುವ ಯೋಜನೆ ಇದೆ ಎಂದು ಹೇಳಿದರು.

## ಬಸ್ ಪಲ್ಟಿ: 21 ಜನರಿಗೆ ಗಾಯ

**ಕಾರವಾರ/ಅಂಕೋಲಾ:** ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನಲ್ಲಿ ಇಂದು ಶನಿವಾರ ಬೆಳಗಿನ ಜಾವ ಭೀಕರ ರಸ್ತೆ ಅಪಘಾತವೊಂದು ಸಂಭವಿಸಿದೆ. ಬಳ್ಳಾರಿಯಿಂದ ಗೋವಾ ಕಡೆಗೆ ಸಾಗುತ್ತಿದ್ದ ಸೀಬರ್ಡ್ ಸಂಸ್ಥೆಗೆ ಸೇರಿದ ಖಾಸಗಿ ಲಕ್ಸುರಿ ಬಸ್, ಚಾಲಕನ ನಿಯಂತ್ರಣ ತಪ್ಪಿ ರಾಷ್ಟ್ರೀಯ ಹೆದ್ದಾರಿ 52ರ ಕಂಚಿನಬಾಗಿಲು (ಅಡ್ಲೂರು) ಬಳಿ ರಸ್ತೆಗೆ ಅಡ್ಡಲಾಗಿ ಪಲ್ಟಿಯಾಗಿದೆ. ಈ ಭೀಕರ ದುರಂತದಲ್ಲಿ ಓರ್ವ ಪ್ರಯಾಣಿಕ ಸ್ಥಳದಲ್ಲೇ ಸಾವನ್ನಪ್ಪಿದ್ದು, ಬಸ್ಸಿನಲ್ಲಿದ್ದ ಒಟ್ಟು 36 ಪ್ರಯಾಣಿಕರ ಪೈಕಿ 21 ಜನರು ತೀವ್ರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳ ಪೈಕಿ 9 ಜನರ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

ನಿದ್ರೆ ತೂಕಡಿಸಿದ ಕಾರಣ ಚಾಲಕನಿಗೆ ನಿಯಂತ್ರಣ ತಪ್ಪಿರಬಹುದು ಎಂದು ಶಂಕಿಸಲಾಗಿದೆ. ವೇಗವಾಗಿ ಬಂದ ಬಸ್ ಹೆದ್ದಾರಿಯ ಮಧ್ಯದಲ್ಲೇ ಉರುಳಿಬಿದ್ದ ಪರಿಣಾಮ, ಹೆದ್ದಾರಿಯ ಎರಡೂ ಬದಿಗಳಲ್ಲಿ ನೂರಾರು ವಾಹನಗಳು ಸಾಲುಗಟ್ಟಿ ನಿಂತು ಭಾರಿ ಟ್ರಾಫಿಕ್ ಜಾಮ್ ಉಂಟಾಗಿತ್ತು.

ಘಟನಾ ಸ್ಥಳಕ್ಕೆ ಅಂಕೋಲಾ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಹಾಗೂ ಸಿಬ್ಬಂದಿ ತಕ್ಷಣವೇ ಧಾವಿಸಿ ಭರದಿಂದ ರಕ್ಷಣಾ ಕಾರ್ಯಾಚರಣೆ ನಡೆಸಿದರು. ಬಸ್ಸಿನ ಕಿಟಕಿ ಗಾಜುಗಳನ್ನು ಒಡೆದು ಒಳಗಿದ್ದ ಪ್ರಯಾಣಿಕರನ್ನು ಹೊರತರಲಾಯಿತು.

ಗಾಯಗೊಂಡ 21 ಜನರನ್ನು ತಕ್ಷಣವೇ ಅಂಕೋಲಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ಕೊಡಿಸಲಾಗಿದೆ. ಅವರಲ್ಲಿ ತಲೆ ಮತ್ತು ಎದೆಗೆ ಬಲವಾದ ಪೆಟ್ಟು ಬಿದ್ದು ಪರಿಸ್ಥಿತಿ ಗಂಭೀರವಾಗಿದ್ದ 9 ಮಂದಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಕಾರವಾರದ ಕ್ರಿಮ್ಸ್ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ.

# ಡಿಕೆಶಿಗೆ ಸಾಲು ಸಾಲು ಸವಾಲುಗಳು...!

ಬೆಂಗಳೂರು: ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಡಿ.ಕೆ. ಶಿವಕುಮಾರ್ ಅವರನ್ನು ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಲಾಗಿದೆ. ಬಯಸಿದ ಸಿಎಂ ಸ್ಥಾನ ಸಿಕ್ಕರೂ ಡಿಕೆಶಿ ಮುಂದಿರುವ ಹಾದಿ ಹೂವಿನ ಹಾಸಿಗೆಯಲ್ಲ. ಸಾಲು ಸಾಲು ಸವಾಲುಗಳೇ ನೂತನ ಮುಖ್ಯಮಂತ್ರಿಯ ಎದುರಿವೆ.

ರಾಜಕೀಯ, ಆಡಳಿತಾತ್ಮಕ ಮತ್ತು ಆರ್ಥಿಕ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸವಾಲುಗಳು ಕಾದಿವೆ. ರಾಜ್ಯದ ಆರ್ಥಿಕ ಸ್ಥಿತಿಯ ನಡುವೆ ಗ್ಯಾರಂಟಿ ಯೋಜನೆಗಳನ್ನು ಮುನ್ನಡೆಸುವುದರ ಜೊತೆಗೆ ಕೆಲ ಜಲ ವಿವಾದಗಳನ್ನು ಬಗೆಹರಿಸುವ ಹೊಣೆಯೂ ಡಿಕೆಶಿ ಹೆಗಲೇರಲಿದೆ.

ಪ್ರಭಾವಿ ಜಾತಿ ಸಮುದಾಯಗಳು, ವಿವಿಧ ಪ್ರದೇಶಗಳು ಮತ್ತು ಪಕ್ಷದ ಒಳಗಿನ ಗುಂಪುಗಳನ್ನು....

ಪ್ರತಿನಿಧಿಸುವ ಹಿರಿಯ ಶಾಸಕರಿಂದ ಸಚಿವ ಸ್ಥಾನಕ್ಕಾಗಿ ಒತ್ತಡ ಹೆಚ್ಚಿರುವ ಕಾರಣ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮುಂದೆ ಸಾಗಬೇಕಿರುವುದು ಡಿಕೆಶಿ ಎದುರಿಗಿರುವ ಮೊದಲ ಸವಾಲಾಗಿದೆ. ಸಿದ್ದರಾಮಯ್ಯ ಬೆಂಬಲಿಗರು ತಮ್ಮ ಪ್ರಭಾವ ಮುಂದುವರಿಯಬೇಕೆಂದು ನಿರೀಕ್ಷಿಸುತ್ತಿದ್ದರೆ, ಡಿ.ಕೆ. ಶಿವಕುಮಾರ್ ಬಣ ಹೆಚ್ಚಿನ ಪ್ರಾತಿನಿಧ್ಯವನ್ನು ಬಯಸುತ್ತಿದೆ. ಇದರಿಂದ ಖಾತೆ ಹಂಚಿಕೆ ಪ್ರಕ್ರಿಯೆ ಸಂಕೀರ್ಣವಾಗುವ ಸಾಧ್ಯತೆ ಇದೆ.

ಸಿದ್ದರಾಮಯ್ಯ ಅವರು ಕಟ್ಟಿಕೊಟ್ಟ ಅಹಿಂದಾ (ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು ಮತ್ತು ದಲಿತರು) ಮತಬ್ಯಾಂಕ್ ಅನ್ನು ಉಳಿಸಿಕೊಳ್ಳುವ ಜವಾಬ್ದಾರಿಯೂ ಡಿಕೆಶಿಗಿದೆ. 2023ರ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಮರಳಲು ಅಹಿಂದಾ ಸಮುದಾಯಗಳ ಬೆಂಬಲ ಪ್ರಮುಖ ಪಾತ್ರವಹಿಸಿತ್ತು. ಹೀಗಾಗಿ ಒಕ್ಕಲಿಗ ಸಮುದಾಯ ಹಾಗೂ ಪಕ್ಷದ ಸಂಘಟನೆಯ ಮೇಲಿನ ಹಿಡಿತ ಹೊಂದಿರುವ ಶಿವಕುಮಾರ್, ಅಹಿಂದಾ ಸಮುದಾಯಗಳ ಹಿತಾಸಕ್ತಿಗಳನ್ನು ಕೂಡ ರಕ್ಷಿಸುವ ಭರವಸೆ ನೀಡಬೇಕಿದೆ. ಈ ಸಮುದಾಯಗಳಲ್ಲಿ ಅಸಮಾಧಾನ ಉಂಟಾದರೆ ಬಿಜೆಪಿ–ಜೆಡಿಎಸ್ ಮೈತ್ರಿಗೆ ರಾಜಕೀಯ ಲಾಭವಾಗುವ ಸಾಧ್ಯತೆ ಇದೆ.



ಕಾಂಗ್ರೆಸ್ ಸರ್ಕಾರದ ಐದು ಪ್ರಮುಖ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ, ಶಕ್ತಿ, ಅನ್ನಭಾಗ್ಯ, ಯುವನಿಧಿ ಹಾಗೂ ಗೃಹಜ್ಯೋತಿಗೆ ವಾರ್ಷಿಕ ಸುಮಾರು 51,000 ಕೋಟಿ ವೆಚ್ಚವಾಗುತ್ತಿದೆ.

ಈ ಯೋಜನೆಗಳು ಜನಪ್ರಿಯವಾಗಿದ್ದರೂ, ರಾಜ್ಯದ ಹಣಕಾಸಿನ ಮೇಲೆ ಹೆಚ್ಚುತ್ತಿರುವ ಒತ್ತಡ ಮತ್ತು ಅಭಿವೃದ್ಧಿ ವೆಚ್ಚದ ಮೇಲೆ ಅದರ ಪರಿಣಾಮದ ಬಗ್ಗೆ ಆರ್ಥಿಕ ತಜ್ಞರು ಹಾಗೂ ಪ್ರತಿಪಕ್ಷಗಳು ಪ್ರಶ್ನೆ ಎತ್ತುತ್ತಿವೆ. ಹೀಗಾಗಿ ಆದಾಯ ಸಂಗ್ರಹಣೆ ಹೆಚ್ಚಿಸುವುದು, ಹೂಡಿಕೆಗಳನ್ನು ಆಕರ್ಷಿಸುವುದು ಹಾಗೂ ವೆಚ್ಚಗಳಿಗೆ ಆದ್ಯತೆ ನಿಗದಿಪಡಿಸುವುದು ಹೊಸ ಸರ್ಕಾರದ ಪ್ರಮುಖ ಜವಾಬ್ದಾರಿಯಾಗಲಿದೆ.

ಮೇಕೆದಾಟು ಯೋಜನೆ ಹಾಗೂ ಕಾವೇರಿ ನೀರು ಹಂಚಿಕೆ ವಿವಾದವು ಶಿವಕುಮಾರ್ ಅವರ ಆಡಳಿತಕ್ಕೆ ಸೂಕ್ಷ್ಮ ರಾಜಕೀಯ ಸವಾಲಾಗಿ ಪರಿಣಮಿಸುವ ಸಾಧ್ಯತೆ ಇದೆ. 2023ರ ಚುನಾವಣೆಗೆ ಮುನ್ನ ಕನಕಪುರದಿಂದ ಬೆಂಗಳೂರಿನವರೆಗೆ ಪಾದಯಾತ್ರೆ ನಡೆಸಿ ಮೇಕೆದಾಟು ಯೋಜನೆಗೆ ಬಲವಾದ ಬೆಂಬಲ ವ್ಯಕ್ತಪಡಿಸಿದ್ದ ಶಿವಕುಮಾರ್, ಮುಖ್ಯಮಂತ್ರಿಯಾದ ಬಳಿಕ ಯೋಜನೆಯನ್ನು ಮುಂದಕ್ಕೆ ಕೊಂಡೊಯ್ಯುವ ಒತ್ತಡವನ್ನು ಎದುರಿಸಲಿದ್ದಾರೆ. ಯೋಜನೆ ಸಂಬಂಧ ತಮಿಳುನಾಡಿನ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಈಗಾಗಲೇ ಕಠಿಣ ನಿಲುವು ತಳೆದಿರುವ ಕಾರಣ ವಿಚಾರ ಮತ್ತಷ್ಟು ಪ್ರಾಮುಖ್ಯತೆ ಪಡೆದುಕೊಂಡಿದೆ.

ಬೆಂಗಳೂರು ನಗರಕ್ಕೆ ಮಾತ್ರ ಸೀಮಿತವಾಗಿರುವ ಅಭಿವೃದ್ಧಿಯನ್ನು ರಾಜ್ಯದ ಇತರೆ ಭಾಗಗಳಿಗೆ ವಿಸ್ತರಿಸುವುದು ಮತ್ತೊಂದು ದೊಡ್ಡ ಸವಾಲಾಗಿದೆ. ಉತ್ತರ ಕರ್ನಾಟಕ ಮತ್ತು ಗ್ರಾಮೀಣ ಪ್ರದೇಶಗಳ ಜನಪ್ರತಿನಿಧಿಗಳು ತಮ್ಮ ಭಾಗಗಳಿಗೆ ಹೆಚ್ಚಿನ ಗಮನ ನೀಡುವಂತೆ ನಿರಂತರವಾಗಿ ಆಗ್ರಹಿಸುತ್ತಿದ್ದಾರೆ. ಬರ, ನೀರಾವರಿ ಕೊರತೆ, ಬೆಳೆ ನಷ್ಟ ಮತ್ತು ಮಾರುಕಟ್ಟೆ ಬೆಲೆಗಳ ಏರಿಳಿತದಂತಹ ಸಮಸ್ಯೆಗಳನ್ನು ರೈತರು ಎದುರಿಸುತ್ತಿದ್ದಾರೆ.

ಕೆ. ಜಯಪ್ರಕಾಶ್ ಹೆಗ್ಡೆ ನೇತೃತ್ವದ ಆಯೋಗ ಈ ಹಿಂದೆ ನೀಡಿದ್ದ ಜಾತಿ ಗಣತಿಯ ವರದಿ ಪ್ರಕಾರ ರಾಜ್ಯದ ಒಟ್ಟಾರೆ ಜನಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ ಮೊದಲ ಸ್ಥಾನದಲ್ಲಿದ್ದರೆ, ಎರಡನೆಯ ಸ್ಥಾನದಲ್ಲಿ ಲಿಂಗಾಯತರು, ಮೂರನೇ ಸ್ಥಾನದಲ್ಲಿ ಇತರ ಹಿಂದುಳಿದ ವರ್ಗ (ಒಬಿಸಿ) ಹಾಗೂ ನಾಲ್ಕನೆಯ ಸ್ಥಾನದಲ್ಲಿ ಮುಸ್ಲಿಮರು, ಐದನೆಯ ಸ್ಥಾನದಲ್ಲಿ ಒಕ್ಕಲಿಗರು ಇದ್ದರು. ಆದರೆ ರಾಜೀನಾಮೆಗೂ ಮುನ್ನ ಸಿದ್ದರಾಮಯ್ಯನವರಿಗೆ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ನಾಯ್ಕ್ ಸಲ್ಲಿಸಿರುವ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ವರದಿಯ ಅಂಕಿ–ಅಂಶಗಳೇ ಬೇರೆ ಹೇಳುತ್ತಿವೆ. ಸಿದ್ದರಾಮಯ್ಯ ಅವರು ಕಟ್ಟಿಕೊಟ್ಟ ಅಹಿಂದಾ (ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು ಮತ್ತು ದಲಿತರು) ಮತಬ್ಯಾಂಕ್ ಅನ್ನು ಉಳಿಸಿಕೊಳ್ಳುವ ಜವಾಬ್ದಾರಿಯೂ ಡಿಕೆಶಿಗಿದೆ. 2023ರ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಮರಳಲು ಅಹಿಂದಾ ಸಮುದಾಯಗಳ ಬೆಂಬಲ ಪ್ರಮುಖ ಪಾತ್ರವಹಿಸಿತ್ತು. ಹೀಗಾಗಿ ಒಕ್ಕಲಿಗ ಸಮುದಾಯ ಹಾಗೂ ಪಕ್ಷದ ಸಂಘಟನೆಯ ಮೇಲಿನ ಹಿಡಿತ ಹೊಂದಿರುವ ಶಿವಕುಮಾರ್, ಅಹಿಂದಾ ಸಮುದಾಯಗಳ ಹಿತಾಸಕ್ತಿಗಳನ್ನು ಕೂಡ ರಕ್ಷಿಸುವ ಭರವಸೆ ನೀಡಬೇಕಿದೆ.

ವೀರಶೈವ ಲಿಂಗಾಯತ ಶೇ.11ರಷ್ಟು 60 ರಿಂದ 65 ಲಕ್ಷ ಜನಸಂಖ್ಯೆ ಹೊಂದಿದ್ದು ಕರ್ನಾಟಕದಲ್ಲಿ ಎರಡನೇ ಅತಿ ದೊಡ್ಡ ಸಮುದಾಯವಾಗಿದ್ದರೆ, ಶೇ.10ರೊಂದಿಗೆ ಒಕ್ಕಲಿಗರು 55 ರಿಂದ 60 ಲಕ್ಷ ಜನಸಂಖ್ಯೆ ಹೊಂದಿದ 3ನೇ ಸಮುದಾಯವಾಗಿದೆ. ಇನ್ನು ಕುರುಬರು ಸಮುದಾಯ ಶೇ.8ರಷ್ಟು ಇದ್ದು, 40 ರಿಂದ 45 ಲಕ್ಷ ಜನಸಂಖ್ಯೆ ಹೊಂದಿಗೆ ರಾಜ್ಯದ 4ನೇ ದೊಡ್ಡ ಸಮುದಾಯವಾಗಿದೆ ಎಂದು ಸರ್ಕಾರಕ್ಕೆ ಸಲ್ಲಿಸಿದ ವರದಿಯಲ್ಲಿ ಜಾತಿವಾರು ಜನಸಂಖ್ಯೆ ಬಗ್ಗೆ ಉಲ್ಲೇಖವಾಗಿದೆ. ಹೀಗಾಗಿ ಜಾತಿ ಗಣತಿ ಸಂಬಂಧ ನಿರ್ಧಾರವೂ ಸರ್ಕಾರದ ಮುಂದಿರುವ ಮತ್ತೊಂದು ದೊಡ್ಡ ಸವಾಲಾಗಿದೆ.

# ತಿರುಪತಿ: ಕೇಶ ಸಮರ್ಪಣೆಯಲ್ಲಿ ಈ ವರ್ಷ ಹೊಸ ದಾಖಲೆ

ತಿರುಮಲ

ತಿರುಮಲ ತಿರುಪತಿ ದೇವಸ್ಥಾನಂ ಆಡಳಿತ ಮಂಡಳಿ ಸದಸ್ಯ ಎಸ್ ನರೇಶ್ ಕುಮಾರ್ ಅವರು ನೀಡಿದ ಮಾಹಿತಿಯ ಪ್ರಕಾರ, ಮೇ ತಿಂಗಳಲ್ಲಿ ಶ್ರೀ ವೆಂಕಟೇಶ್ವರ ಸ್ವಾಮಿಗೆ ಭಕ್ತರು ಸಲ್ಲಿಸುವ ಕೇಶ ಸಮರ್ಪಣೆಯಲ್ಲಿ ಈ ವರ್ಷ ಹೊಸ ದಾಖಲೆ ನಿರ್ಮಾಣವಾಗಿದೆ. ಮೇ ತಿಂಗಳಲ್ಲಿ ಮಾತ್ರ 12 ಲಕ್ಷಕ್ಕೂ ಅಧಿಕ ಭಕ್ತರು ಕೇಶ ಸಮರ್ಪಣೆ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭಕ್ತರಿಗೆ ಸುಗಮ ಹಾಗೂ ತಡೆರಹಿತ ಸೇವೆ ನೀಡಲು ತಿರುಮಲ ತಿರುಪತಿ ದೇವಸ್ಥಾನಂ ವ್ಯಾಪಕ ವ್ಯವಸ್ಥೆಗಳನ್ನು ಮಾಡಿಕೊಂಡಿದೆ ಎಂದು ಹೇಳಿದ್ದಾರೆ. ದಿನದ 24 ಗಂಟೆಗಳ ಕಾಲ ನಿರಂತರವಾಗಿ ಕೇಶ ಮುಂಡನ ಸೇವೆ ಲಭ್ಯವಾಗುವಂತೆ ವ್ಯವಸ್ಥೆ ಕಲ್ಪಿಸಲಾಗಿದೆ.

ಮೇ 27ರವರೆಗೆ 12,43,063 ಭಕ್ತರು ತಿರುಮಲೆಯಲ್ಲಿ ಕೇಶ ಮುಂಡನ ಮಾಡಿಸಿಕೊಂಡು ಸ್ವಾಮಿಗೆ ತಮ್ಮ ಹರಕೆ ಸಲ್ಲಿಸಿದ್ದಾರೆ. ಮೇ 2024ರಲ್ಲಿ 10,65,729 ಹಾಗೂ ಮೇ 2025ರಲ್ಲಿ 10,18,370 ಭಕ್ತರು ಕೇಶ ಸಮರ್ಪಣೆ ಮಾಡಿದ್ದರು. ಹೋಲಿಕೆಯಲ್ಲಿ ಈ ವರ್ಷ ಭಕ್ತರ ಸಂಖ್ಯೆಯಲ್ಲಿ ಗಣನೀಯ ಏರಿಕೆ ಕಂಡುಬಂದಿದೆ ಎಂದು ಅವರು ವಿವರಿಸಿದ್ದಾರೆ.

ಬೇಸಿಗೆ ರಜೆ ಹಾಗೂ ಸತತ ವಾರಾಂತ್ಯ ರಜೆಗಳ ಕಾರಣ ತಿರುಮಲದಲ್ಲಿ ಭಕ್ತರ ದಟ್ಟಣೆ ಹೆಚ್ಚಾಗಿದೆ. ಮೇ 18ರಿಂದ ಮೇ 23ರವರೆಗೆ ಪ್ರತಿ ದಿನ 50,000ಕ್ಕೂ ಹೆಚ್ಚು ಭಕ್ತರು ಕೇಶ ಸಮರ್ಪಣೆ ಮಾಡಿದ್ದಾರೆ. ಮೇ 23ರಂದು ಒಂದೇ ದಿನ ದಾಖಲೆಯ 57,580 ಭಕ್ತರು ಕೇಶ ಸಮರ್ಪಣೆ ಮಾಡಿರುವುದು ದಾಖಲಾಗಿದೆ.

ಭಕ್ತರ ಸುಗಮ ಸೇವೆಗಾಗಿ ತಿರುಮಲೆಯಲ್ಲಿ ಮುಖ್ಯ ಕಲ್ಯಾಣಕಟ್ಟೆಯ ಜೊತೆಗೆ ಕಂಅ–1, ಕಂಅ–2, ಕಂಅ–3, ಕಂಅ–5, ಉಓಅ, ಊಗಿಅ ಸೇರಿದಂತೆ 11 ಮಿನಿ ಕೇಶ ಮುಂಡನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಜೊತೆಗೆ ಸಪ್ತಗಿರಿ ಅತಿಥಿಗೃಹ, ನಂದಕಂ, ಕೌಸ್ತುಭಂ, ಶ್ರೀ ವೆಂಕಟೇಶ್ವರ ಅತಿಥಿಗೃಹ ಹಾಗೂ ಶ್ರೀ ಪದ್ಮಾವತಿ ಅತಿಥಿಗೃಹಗಳಲ್ಲಿ ಸೇವೆ ಲಭ್ಯವಿದೆ.

ಪ್ರಸ್ತುತ ತಿರುಮಲೆಯಲ್ಲಿ 269 ಮಹಿಳಾ ಕ್ಷೌರಿಕರು ಸೇರಿದಂತೆ ಒಟ್ಟು 1,152 ಕ್ಷೌರಿಕರು ನಿರಂತರ ಸೇವೆ ಸಲ್ಲಿಸುತ್ತಿದ್ದಾರೆ. ಸಾಮಾನ್ಯವಾಗಿ ಪ್ರತಿ ಕ್ಷೌರಿಕರು ಆರು ಗಂಟೆಗಳ ಪಾಳಿಯಲ್ಲಿ ಸುಮಾರು 40 ಭಕ್ತರಿಗೆ ಸೇವೆ ನೀಡುತ್ತಾರೆ.

ಭಕ್ತರ ದಟ್ಟಣೆ ಹೆಚ್ಚಾದ ಹಿನ್ನೆಲೆಯಲ್ಲಿ ಸುಮಾರು 250 ಕ್ಷೌರಿಕರ ಪಾಳಿಯನ್ನು ವಿಸ್ತರಿಸಿ ಹೆಚ್ಚುವರಿ 50 ಭಕ್ತರಿಗೆ ಸೇವೆ ನೀಡುವ ವ್ಯವಸ್ಥೆ ಮಾಡಲಾಗಿದೆ ಎಂದು ಟಿಟಿಡಿ ತಿಳಿಸಿದೆ.

ಭಕ್ತರು ಹಾಗೂ ಸಿಬ್ಬಂದಿಯ ಆರೋಗ್ಯ ದೃಷ್ಟಿಯಿಂದ ಕಠಿಣ ನೈರ್ಮಲ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಬ್ಲೇಡ್‌ಗಳನ್ನು ಸೋಡಿಯಂ ದ್ರಾವಣದಲ್ಲಿ ಕ್ರಿಮಿನಾಶಗೊಳಿಸಿ, ನಂತರ ಡೆಟ್ಟಾಲ್‌ನಿಂದ ಶುದ್ಧಗೊಳಿಸಿ ಬಳಸಲಾಗುತ್ತಿದೆ.

## ಎಲ್‌ಜಿಟಿ ಗ್ಲೋಬಲ್ ಹಾಸ್ಪಿಟಾಲಿಟಿ ಆದಾಯ ವೃದ್ಧಿ

ನವದೆಹಲಿ

2026ರ ಮಾರ್ಚ್ 31ಕ್ಕೆ ಅಂತ್ಯವಾದ ವಿತ್ತೀಯ ವರ್ಷದಲ್ಲಿ ಎಲ್‌ಜಿಟಿ ಗ್ಲೋಬಲ್ ಹಾಸ್ಪಿಟಾಲಿಟಿ ಲಿಮಿಟೆಡ್ ಉತ್ತಮ ಆರ್ಥಿಕ ಸಾಧನೆ ದಾಖಲಿಸಿದ್ದು, ವರ್ಷದಿಂದ ವರ್ಷಕ್ಕೆ ಶೇ. 34.9ರಷ್ಟು ಆದಾಯ ವೃದ್ಧಿಯನ್ನು ಸಾಧಿಸಿದೆ ಎಂದು ಕಂಪನಿ ಪ್ರಕಟಿಸಿದೆ.

ಈ ಹಿಂದೆ ಬ್ಯುಸಿನೆಸ್ ಕನೆಕ್ಷನ್ಸ್ ಲಿಮಿಟೆಡ್ ಎಂದು ಪರಿಚಿತವಾಗಿದ್ದ ಈ ಕಂಪನಿಯು, ಕಾರ್ಪೊರೇಟ್ ಪ್ರಯಾಣ, ಎಂಐಸಿಇ ಮತ್ತು ಆತಿಥ್ಯ ಸೇವೆಗಳ ವಿಸ್ತರಣೆಯಿಂದ ಬಲವಾದ ಬೆಳವಣಿಗೆ ಕಂಡಿದೆ ಎಂದು ವರದಿ ತಿಳಿಸಿದೆ.




ಕಂಪನಿಯು ತಾಂತ್ರಿಕ ಸಹಭಾಗಿತ್ವ, ಖರೀದಿ ಮತ್ತು ವಿಸ್ತರಣಾ ಕ್ರಮಗಳ ಮೂಲಕ ತನ್ನ ವ್ಯವಹಾರ ಮಾದರಿಯನ್ನು ಬಲಪಡಿಸಿದ್ದು, ದೇಶೀಯ ಹಾಗೂ ಅಂತಾರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ತನ್ನ ಹಾಜರಾತಿಯನ್ನು ಹೆಚ್ಚಿಸಿಕೊಂಡಿದೆ. ಪ್ರಯಾಣ ಸೇವೆಗಳ ಏಕೀಕರಣ, ಗ್ರಾಹಕ ನಿರ್ವಹಣಾ ವ್ಯವಸ್ಥೆಗಳ ಸುಧಾರಣೆ ಹಾಗೂ ಡಿಜಿಟಲ್ ವೇದಿಕೆಗಳ ಬಳಕೆ ಆದಾಯ ವೃದ್ಧಿಗೆ ಪ್ರಮುಖ ಕಾರಣಗಳಾಗಿವೆ ಎಂದು ತಿಳಿಸಲಾಗಿದೆ.

ಪ್ರಸಕ್ತ ವಿತ್ತೀಯ ವರ್ಷದಲ್ಲಿ ಕಂಪನಿಯು ತನ್ನ ಸೇವಾ ಸಾಮರ್ಥ್ಯವನ್ನು ಹೆಚ್ಚಿಸುವ ಜೊತೆಗೆ ಮಾರುಕಟ್ಟೆ ವಿಸ್ತರಣೆಗೆ ಹೆಚ್ಚಿನ ಒತ್ತು ನೀಡಲಿದೆ ಎಂದು ಹೇಳಿದೆ. ಕಾರ್ಪೊರೇಟ್ ಮತ್ತು ಲೀಶರ್ ಟ್ರಾವೆಲ್ ವಿಭಾಗಗಳಲ್ಲಿ ಹೆಚ್ಚುತ್ತಿರುವ ಬೇಡಿಕೆ, ಸಂಯೋಜಿತ ಪ್ರಯಾಣ ಸೇವೆಗಳು ಹಾಗೂ ಗಮ್ಯಸ್ಥಾನ ನಿರ್ವಹಣೆ ಸೇವೆಗಳು ಬೆಳವಣಿಗೆಗೆ ಸಹಕಾರಿಯಾಗಿವೆ.

## ಪ್ಲಾಟಿನಮ್‌ಆರ್‌ಎಕ್ಸ್ 10 ಲಕ್ಷ ಬಳಕೆದಾರರ ಮೈಲಿಗಲ್ಲು




ಬೆಂಗಳೂರು: ಕೈಗೆಟುಕುವ ದರದಲ್ಲಿ ಬ್ರಾಂಡೆಡ್ ಜೆನೆರಿಕ್ ಔಷಧಿಗಳನ್ನು ಒದಗಿಸುವ ಪ್ಲಾಟಿನಮ್‌ಆರ್‌ಎಕ್ಸ್ ಸಂಸ್ಥೆ ದೇಶಾದ್ಯಂತ 10 ಲಕ್ಷಕ್ಕೂ ಹೆಚ್ಚು ಬಳಕೆದಾರರಿಗೆ ಸೇವೆ ನೀಡುವ ಮೂಲಕ ಮಹತ್ವದ ಮೈಲಿಗಲ್ಲನ್ನು ದಾಟಿದೆ. ಈ ವೇದಿಕೆಯ ಮೂಲಕ ಭಾರತೀಯ ರೋಗಿಗಳು ಒಟ್ಟು 128 ಕೋಟಿಗೂ ಹೆಚ್ಚು ಔಷಧ ವೆಚ್ಚವನ್ನು ಉಳಿಸಿಕೊಂಡಿದ್ದಾರೆ.

ದೀರ್ಘಕಾಲದ ಮಧುಮೇಹ, ರಕ್ತದೊತ್ತಡ ಮತ್ತು ಹೃದಯ ಸಂಬಂಧಿತ ರೋಗಗಳಿಂದ ಬಳಲುವ ಲಕ್ಷಾಂತರ ರೋಗಿಗಳಿಗೆ ಮಾಸಿಕ ಔಷಧ ವೆಚ್ಚ ದೊಡ್ಡ ಹೊರೆ ಆಗಿರುವ ಸಂದರ್ಭದಲ್ಲಿ, ಪ್ಲಾಟಿನಮ್‌ಆರ್‌ಎಕ್ಸ್ ಬ್ರಾಂಡೆಡ್ ಜೆನೆರಿಕ್ ಪರ್ಯಾಯಗಳ ಮೂಲಕ 50 ರಿಂದ 60 ಶೇಕಡಾ ವೆಚ್ಚ ಕಡಿತವನ್ನು ಸಾಧ್ಯವಾಗಿಸಿದೆ ಎಂದು ಸಂಸ್ಥೆ ತಿಳಿಸಿದೆ.

ಈ ಪ್ಲಾಟ್‌ಫಾರಂ ಪ್ರತಿಯೊಂದು ಔಷಧಕ್ಕೆ ಪರಿಶೀಲಿತ ಹಾಗೂ ಪ್ರಮಾಣೀಕೃತ ಜೆನೆರಿಕ್ ಪರ್ಯಾಯವನ್ನು ಒದಗಿಸುತ್ತಿದ್ದು, ಗುಣಮಟ್ಟದಲ್ಲಿ ಯಾವುದೇ ರಾಜಿ ಇಲ್ಲದೆ ನೇರವಾಗಿ ಮಾನ್ಯತೆ ಪಡೆದ ಔಷಧ ಕಂಪನಿಗಳಿಂದ ಪೂರೈಕೆ ಮಾಡಲಾಗುತ್ತದೆ. ದೇಶದಾದ್ಯಂತ 20,000ಕ್ಕೂ ಹೆಚ್ಚು ಪಿನ್ ಕೋಡ್‌ಗಳಿಗೆ ಸೇವೆ ವಿಸ್ತರಿಸಲಾಗಿದ್ದು, ಮಹಾನಗರಗಳಲ್ಲಿ ಒಂದು ದಿನದಲ್ಲೇ ಹಾಗೂ ಇತರ ಪ್ರದೇಶಗಳಲ್ಲಿ 1 ರಿಂದ 3 ದಿನಗಳಲ್ಲಿ ಡೆಲಿವರಿ ನೀಡಲಾಗುತ್ತಿದೆ.

# ಭರ್ಜರಿ ಫಿಟ್ನೆಸ್ ಈವೆಂಟ್ 'ಪರ್ಫಾರ್ಮ್ ಬೈ ಪ್ರೊಸಪ್ಸ್' ಯಶಸ್ವಿ ಸಮಾಪ್ತಿ

ಬೆಂಗಳೂರು: ಐರನ್ ಅಸಿಲಮ್ ಆಯೋಜಿಸಿದ ಪ್ರಮುಖ ಫಿಟ್ನೆಸ್ ಕಾರ್ಯಕ್ರಮ 'ಪರ್ಫಾರ್ಮ್ ಬೈ ಪ್ರೊಸಪ್ಸ್ ದಿ ಹೈಡ್ ಎಡಿಷನ್' ಹೈಫಿಟ್ ಫಿಟ್ನೆಸ್ ಕ್ಲಬ್, ಊಖಖ ಲೇಔಟ್‌ನಲ್ಲಿ ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಶಕ್ತಿ, ಸಹಿಷ್ಣುತೆ ಮತ್ತು ಸ್ಪರ್ಧಾತ್ಮಕ ಮನೋಭಾವವನ್ನು ಒಟ್ಟುಗೂಡಿಸಿದ ಈ ಈವೆಂಟ್‌ಗೆ ಬೆಂಗಳೂರಿನ ಫಿಟ್ನೆಸ್ ಸಮುದಾಯದಿಂದ ಭಾರೀ ಪ್ರತಿಕ್ರಿಯೆ ದೊರಕಿತು.

10,900 ಚದರ ಅಡಿ ವಿಸ್ತೀರ್ಣದ ಸ್ಪರ್ಧಾ ಮಹಡಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಆರು ಸ್ಲಾಟ್‌ಗಳಲ್ಲಿ 500 ರಿಂದ 700 ಜನರು ಭಾಗವಹಿಸಿದ್ದರು. ದಿನವಿಡೀ ಸುಮಾರು 2,000ಕ್ಕೂ ಹೆಚ್ಚು ಜನರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ ಎಂದು ಅಂದಾಜಿಸಲಾಗಿದೆ.

ಮೊದಲ ಬಾರಿಗೆ ಬಹು–ಶಿಸ್ತಿನ ಫಿಟ್ನೆಸ್ ಚಾಂಪಿಯನ್‌ಶಿಪ್ ರೂಪದಲ್ಲಿ ಆಯೋಜಿಸಲಾದ ಈ ಸ್ಪರ್ಧೆಯಲ್ಲಿ ಪುಲ್ ಅಪ್ಸ್, ಡೆಡ್ ಹ್ಯಾಂಗ್, ಪುಷ್ ಅಪ್ಸ್, ಪ್ಲೇಟ್ ಹೋಲ್ಡ್, ಆರ್ಮ್ ವ್ರೆಸ್ಲಿಂಗ್, ವೇಯ್ಟೆಡ್ ಸ್ಯಾಕ್ ರನ್ ಹಾಗೂ ಟೈರ್ ಫ್ಲಿಪ್ ಮತ್ತು ಡ್ರ್ಯಾಗ್ ಸೇರಿದಂತೆ ಏಳು ಸ್ಪರ್ಧಾತ್ಮಕ ಕೇಂದ್ರಗಳು ಇದ್ದವು. ಅಂತಿಮ ಹಂತದ ಅಬ್ಸ್ಟಾಕಲ್ ರನ್‌ನಲ್ಲಿ 12 ಫೈನಲಿಸ್ಟ್‌ಗಳು ಚಾಂಪಿಯನ್‌ಶಿಪ್ ಪ್ರಶಸ್ತಿಗಾಗಿ ಸ್ಪರ್ಧಿಸಿದರು.




2,92,000 ಬಹುಮಾನ ನಿಧಿಯೊಂದಿಗೆ ನಡೆದ ಈ ಸ್ಪರ್ಧೆಯಲ್ಲಿ 97 ವಿಭಿನ್ನ ವಿಜೇತ ಕ್ಷಣಗಳು ದಾಖಲಾಗಿದ್ದು, ವೃತ್ತಿಪರ ಕ್ರೀಡಾಪಟುಗಳ ಜೊತೆಗೆ ಸಾಮಾನ್ಯ ಜಿಮ್ ಅಭ್ಯಾಸಿಗಳಿಗೆ ಸಹ ಅವಕಾಶ ನೀಡುವ ಮೂಲಕ ಸ್ಪರ್ಧಾತ್ಮಕ ಫಿಟ್ನೆಸ್ ಅನ್ನು ಹೆಚ್ಚು ಜನರಿಗೆ ತಲುಪಿಸಿದೆ.

ಈ ಕಾರ್ಯಕ್ರಮದಲ್ಲಿ ಕ್ರೀಡಾ ಪೌಷ್ಟಿಕತೆಯ ಹೊಸ ಉತ್ಪನ್ನ 'ಹೈಡ್ ಸಿಗ್ನೇಚರ್' ಅನ್ನು ಪರಿಚಯಿಸಲಾಯಿತು. ಡ್ಯುಯಲ್ ಟಬ್ ತಂತ್ರಜ್ಞಾನ ಹೊಂದಿರುವ ಈ ನವೀನ ಉತ್ಪನ್ನದಲ್ಲಿ ಎರಡು ವಿಭಿನ್ನ ಫ್ಲೇವರ್‌ಗಳನ್ನು ಒಂದೇ ಪಾತ್ರೆಯಲ್ಲಿ ನೀಡಲಾಗಿದ್ದು, ಬಳಕೆದಾರರು ಅವನ್ನು ಪ್ರತ್ಯೇಕವಾಗಿ ಅಥವಾ ಮಿಶ್ರಣವಾಗಿ ಸೇವಿಸಬಹುದು ಎಂದು ತಿಳಿಸಲಾಗಿದೆ.

ಐರನ್ ಅಸಿಲಮ್ ಸಂಸ್ಥಾಪಕ ವಿಷ್ಣು ಮೆನನ್ ಮಾತನಾಡಿ, ಭಾರತದಲ್ಲಿ ಫಿಟ್ನೆಸ್ ಸ್ಪರ್ಧೆಗಳ ಅನುಭವವನ್ನು ಹೆಚ್ಚು ಒಳಗೊಂಡ, ಆಕರ್ಷಕ ಮತ್ತು ಫಲಪ್ರದವಾಗಿ ಮರು ವಿನ್ಯಾಸಗೊಳಿಸುವುದೇ ಈ ಕಾರ್ಯಕ್ರಮದ ಉದ್ದೇಶ ಎಂದು ಹೇಳಿದರು. ಬೆಂಗಳೂರಿನ ಫಿಟ್ನೆಸ್ ಸಮುದಾಯದ ಭಾರೀ ಪಾಲ್ಗೊಳ್ಳುವಿಕೆ ಈ ದೃಷ್ಟಿಕೋನವನ್ನು ದೃಢಪಡಿಸಿದೆ ಎಂದು ಅವರು ಅಭಿಪ್ರಾಯಪಟ್ಟರು.

# ಪಂಜಾಬ್ ಗ್ರಿಲ್‌ನ 60ನೇ ಶಾಖೆ ಉದ್ಘಾಟನೆ

ಬೆಂಗಳೂರು: ತನ್ನ ಅಪ್ಪಟ ಉತ್ತರ ಭಾರತೀಯ ಶೈಲಿಯ ಸ್ವಾದಿಷ್ಟ ಖಾದ್ಯಗಳು ಹಾಗೂ ರಾಜಾತಿಥ್ಯದ ಭೋಜನದ ಅನುಭವಕ್ಕೆ ದೇಶಾದ್ಯಂತ ಖ್ಯಾತಿ ಗಳಿಸಿರುವ ಪ್ರಮುಖ ಫೈನ್–ಡೈನಿಂಗ್ ರೆಸ್ಟೋರೆಂಟ್ ಸರಪಳಿ ಪಂಜಾಬ್ ಗ್ರಿಲ್ ಇದೀಗ ಬೆಂಗಳೂರಿನ ಪ್ರಮುಖ ತಂತ್ರಜ್ಞಾನ ಮತ್ತು ವಾಣಿಜ್ಯ ಕೇಂದ್ರವಾದ ಬಾಗ್ಮನೆ ಸೋಲೇರಿಯಂ ಸಿಟಿಯಲ್ಲಿ ತನ್ನ 60ನೇ ಶಾಖೆಯನ್ನು ಅದ್ದೂರಿಯಾಗಿ ಉದ್ಘಾಟಿಸಿದೆ.

ಇದು ಬೆಂಗಳೂರು ನಗರದಲ್ಲಿರುವ ಪಂಜಾಬ್ ಗ್ರಿಲ್ ನ 10ನೇ ಶಾಖೆಯಾಗಿದೆ. ದೇಶದಾದ್ಯಂತ ಆಹಾರ ಪ್ರಿಯರಿಗೆ ಅತ್ಯುತ್ತಮ ಗುಣಮಟ್ಟದ ಆಹಾರವನ್ನು ಉಣಬಡಿಸುವ ಸಂಸ್ಥೆಯ ಯಶಸ್ವಿ ಪಯಣದಲ್ಲಿ ಈ ನೂತನ ಶಾಖೆಯ ಉದ್ಘಾಟನೆಯು ಒಂದು ಮಹತ್ವದ ಮೈಲಿಗಲ್ಲಾಗಿದೆ. ಬೆಂಗಳೂರಿನ ಅತ್ಯಂತ ಜನನಿಬಿಡ ವಾಣಿಜ್ಯ ವಲಯದಲ್ಲಿ ಆಯಕಟ್ಟಿನ ಜಾಗದಲ್ಲಿ ಈ ಹೊಸ ರೆಸ್ಟೋರೆಂಟ್ ತಲೆಎತ್ತಿದೆ. ಇದು ಐಟಿ ಹಬ್ ನ ಉದ್ಯೋಗಿಗಳು, ಕಾರ್ಪೊರೇಟ್ ಗ್ರಾಹಕರು ಹಾಗೂ ವೈವಿಧ್ಯಮಯ ಆಹಾರ ಪ್ರೇಮಿಗಳನ್ನು ಸೆಳೆಯುವ ದೃಷ್ಟಿಯಿಂದ ವಿನ್ಯಾಸಗೊಂಡಿದೆ.




ಉತ್ತರ ಭಾರತದ ಶ್ರೀಮಂತ ಪರಂಪರೆ ಮತ್ತು ಭವ್ಯತೆಯನ್ನು ನೆನಪಿಸುವ ರಾಜವೈಭೋಗದ ವಾತಾವರಣದೊಂದಿಗೆ, ಸಾಂಪ್ರದಾಯಿಕ ಪಂಜಾಬಿ ರೆಸಿಪಿಗಳಿಗೆ ಆಧುನಿಕ ಸ್ಪರ್ಶ ನೀಡಿ ತಯಾರಿಸಿದ ಪಂಜಾಬ್ ಗ್ರಿಲ್ ನ ವಿಶಿಷ್ಟ ಖಾದ್ಯಗಳು ಇಲ್ಲಿ ಲಭ್ಯವಿರಲಿವೆ.

ದೇಶದ ಪ್ರಮುಖ ಮೆಟ್ರೋ ನಗರಗಳು ಹಾಗೂ ಪ್ರಥಮ ದರ್ಜೆ ನಗರಗಳಲ್ಲಿ ಗುಣಮಟ್ಟ, ರುಚಿ ಮತ್ತು ಅತ್ಯುತ್ತಮ ಸೇವೆಗೆ ಹೆಸರಾಗಿರುವ ಪಂಜಾಬ್ ಗ್ರಿಲ್, ಭಾರತದಲ್ಲಿ ಫೈನ್–ಡೈನಿಂಗ್ ಕ್ಷೇತ್ರಕ್ಕೆ ಹೊಸ ಭಾಷ್ಯ ಬರೆದಿದೆ.

ಈ ಯಶಸ್ಸಿನ ಕುರಿತು ಲೈಟ್ ಬೈಟ್ ಫುಡ್ಸ್ ಪ್ರೈವೇಟ್ ಲಿಮಿಟೆಡ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ರಂಜಿತ್ ಪಾಲಿಯಾತ್ ಅವರು ಮಾತನಾಡಿ,"60ನೇ ಶಾಖೆಯ ಮೈಲಿಗಲ್ಲನ್ನು ತಲುಪಿರುವುದು ನಮ್ಮ ಇಡೀ ತಂಡಕ್ಕೆ ಅತ್ಯಂತ ಹೆಮ್ಮೆಯ ಸಂಗತಿಯಾಗಿದೆ. ಬೆಂಗಳೂರು ಯಾವಾಗಲೂ ಉತ್ತಮ ಆಹಾರ ಸಂಸ್ಕೃತಿಯನ್ನು ಪ್ರೋತ್ಸಾಹಿಸುವ ಮತ್ತು ಪ್ರೀತಿಸುವ ನಗರ. ಬಾಗ್ಮನೆ ಸೋಲೇರಿಯಂ ಸಿಟಿಯು ನಮಗೆ ನಗರದ ಕ್ರಿಯಾತ್ಮಕ ಮತ್ತು ವೈವಿಧ್ಯಮಯ ಗ್ರಾಹಕರನ್ನು ತಲುಪಲು ಉತ್ತಮ ವೇದಿಕೆ ಕಲ್ಪಿಸಿದೆ.

# ಯೂನಿವರ್ಸಿಟಿ ಬಿ.ಡಿ.ಟಿ. ಎಂಜಿನಿಯರಿಂಗ್ ಕಾಲೇಜಿನ ಅಮೃತ ಮಹೋತ್ಸವದಲ್ಲಿ ಉಪರಾಷ್ಟ್ರಪತಿ ಭಾಗಿ

ದಾವಣಗೆರೆ

ಭಾರತದ ಉಪರಾಷ್ಟ್ರಪತಿ ಸಿ. ಪಿ. ರಾಧಾಕೃಷ್ಣನ್ ಅವರು ಇಂದು ದಾವಣಗೆರೆಯ ಯೂನಿವರ್ಸಿಟಿ ಬಿ.ಡಿ.ಟಿ. ಕಾಲೇಜ್ ಆಫ್ ಎಂಜಿನಿಯರಿಂಗ್‌ನ ಅಮೃತ ಮಹೋತ್ಸವ ಸಮಾರಂಭದಲ್ಲಿ ಭಾಗವಹಿಸಿ, ಭಾರತವನ್ನು ತಾಂತ್ರಿಕವಾಗಿ ಸ್ವಾವಲಂಬಿ ಹಾಗೂ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವ ಪಯಣದಲ್ಲಿ ಯುವಜನತೆ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಇಂಜಿನಿಯರಿಂಗ್ ಶಿಕ್ಷಣ ಸಂಸ್ಥೆಗಳು ಕೇವಲ ತಾಂತ್ರಿಕ ಪರಿಣಿತರನ್ನು ಮಾತ್ರವಲ್ಲದೆ, ಸಮಸ್ಯೆ ಪರಿಹಾರಕರು, ನಾವೀನ್ಯಕಾರರು, ನೈತಿಕ ನಾಯಕರು ಹಾಗೂ ರಾಷ್ಟ್ರ ನಿರ್ಮಾತೃಗಳನ್ನು ರೂಪಿಸುವ ಜವಾಬ್ದಾರಿಯನ್ನು ಹೊಂದಿವೆ ಎಂದು ಹೇಳಿದರು.

ಭಾರತವು ತಂತ್ರಜ್ಞಾನ, ನಾವೀನ್ಯತೆ ಮತ್ತು ಯುವಶಕ್ತಿಯ ಮೂಲಕ ಪರಿವರ್ತನೆಯ ಹೊಸ ಯುಗದತ್ತ ಸಾಗುತ್ತಿದೆ ಎಂದು ತಿಳಿಸಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ, ಸ್ಟಾರ್ಟ್‌ಅಪ್ ಇಂಡಿಯಾ, ಸ್ಕಿಲ್ ಇಂಡಿಯಾ, ಸೆಮಿಕಂಡಕ್ಟರ್ ತಯಾರಿಕೆ, ಹಸಿರು ಇಂಧನ ಮತ್ತು ಆತ್ಮನಿರ್ಭರ ಭಾರತ ಉಪಕ್ರಮಗಳು ಯುವ ಇಂಜಿನಿಯರ್‌ಗಳು ಹಾಗೂ ಉದ್ಯಮಿಗಳಿಗೆ ಅಪಾರ ಅವಕಾಶಗಳನ್ನು ಸೃಷ್ಟಿಸಿವೆ ಎಂದು ಹೇಳಿದರು.

2047ರೊಳಗೆ ವಿಕಸಿತ ಭಾರತ ನಿರ್ಮಾಣದಲ್ಲಿ ಎಂಜಿನಿಯರ್‌ಗಳು, ವಿಜ್ಞಾನಿಗಳು, ಸಂಶೋಧಕರು ಮತ್ತು ಉದ್ಯಮಿಗಳ ಪಾತ್ರ ಮಹತ್ತರವಾಗಿರಲಿದೆ ಎಂದು ಅವರು ಅಭಿಪ್ರಾಯಪಟ್ಟರು. ಕಾಲೇಜಿನಲ್ಲಿ ಸ್ಥಾಪಿಸಲಾದ ಎಐಸಿಟಿಇ ಐಡಿಯಾ ಲ್ಯಾಬ್, ಡ್ರೋನ್ ತಂತ್ರಜ್ಞಾನ ಪ್ರಯೋಗಾಲಯ ಹಾಗೂ ಸಂಶೋಧನಾ ಮೂಲಸೌಕರ್ಯಗಳನ್ನು ಅವರು ಶ್ಲಾಘಿಸಿದರು.



ಅಮೃತ ಮಹೋತ್ಸವವನ್ನು ಪರಂಪರೆ ಮತ್ತು ಭವಿಷ್ಯದ ಆಶಯಗಳ ಸಂಭ್ರಮ ಎಂದು ಬಣ್ಣಿಸಿದ ಉಪರಾಷ್ಟ್ರಪತಿ, ಸಂಸ್ಥೆಯ 75 ವರ್ಷಗಳ ಪಯಣವು ಶೈಕ್ಷಣಿಕ ಶ್ರೇಷ್ಠತೆ, ಪರಿಶ್ರಮ ಮತ್ತು ಸಮಾಜ ಸೇವೆಯ ಪ್ರತಿಬಿಂಬವಾಗಿದೆ ಎಂದು ಹೇಳಿದರು.

ಸಂಸ್ಥೆಯ ಸ್ಥಾಪನೆಗೆ ಮಹತ್ವದ ಕೊಡುಗೆ ನೀಡಿದ ಶ್ರೀ ಬ್ರಹ್ಮಪ್ಪ ದೇವೇಂದ್ರಪ್ಪ ತವನಪ್ಪನವರ್ ಹಾಗೂ ಮಹಾರಾಜ ಶ್ರೀ ಜಯಚಾಮರಾಜೇಂದ್ರ ಒಡೆಯರ್ ಅವರನ್ನು ಅವರು ಸ್ಮರಿಸಿದರು.

ವಿದ್ಯಾರ್ಥಿಗಳಿಗೆ ಸಂದೇಶ ನೀಡಿದ ಉಪರಾಷ್ಟ್ರಪತಿ, ಜ್ಞಾನವನ್ನು ವಿನಯ, ಪ್ರಾಮಾಣಿಕತೆ ಮತ್ತು ಸಹಾನುಭೂತಿಯೊಂದಿಗೆ ಬಳಸಬೇಕೆಂದು ಕರೆ ನೀಡಿದರು. "ತಂತ್ರಜ್ಞಾನವು ಮಾನವತೆಗೆ ಸೇವೆ ಸಲ್ಲಿಸಬೇಕು" ಎಂದು ಅವರು ಹೇಳಿ, ವೈಜ್ಞಾನಿಕ ಪ್ರಗತಿ ಸಾರ್ವಜನಿಕ ಹಿತಾಸಕ್ತಿ ಮತ್ತು ಮಾನವೀಯ ಮೌಲ್ಯಗಳಿಂದ ಮಾರ್ಗದರ್ಶನ ಹೊಂದಿರಬೇಕು ಎಂದು ಅಭಿಪ್ರಾಯಪಟ್ಟರು.

ಮಾದಕ ದ್ರವ್ಯ ವ್ಯಸನದ ವಿರುದ್ಧವೂ ಕಠಿಣ ಸಂದೇಶ ನೀಡಿದ ಅವರು, ವಿದ್ಯಾರ್ಥಿಗಳು "ಮಾದಕ ದ್ರವ್ಯಗಳಿಗೆ ಇಲ್ಲ ಎಂದು ಹೇಳಿ" ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ನಿರ್ಮಲಾನಂದನಾಥ ಸ್ವಾಮೀಜಿ, ಮಾಜಿ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್, ಸಂಸದರಾದ ಯದುವೀರ್ ಒಡೆಯರ್ ಹಾಗೂ ಡಾ. ಪ್ರಭಾ ಮಲ್ಲಿಕಾರ್ಜುನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 'ದಾವಣಗೆರೆ ರೈಲು ನಿಲ್ದಾಣದಲ್ಲಿ ಕಾಮಗಾರಿ'

ಬೆಂಗಳೂರು

ದಾವಣಗೆರೆ ರೈಲು ನಿಲ್ದಾಣದ ಯಾರ್ಡ್‌ನಲ್ಲಿ ಪಾದಚಾರಿ ಮೇಲ್ಸೇತುವೆ ಕಾಮಗಾರಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ಹಲವು ರೈಲುಗಳ ಸಂಚಾರವನ್ನು ನಿಯಂತ್ರಣ, ಮರು–ವೇಳಾಪಟ್ಟಿ ಹಾಗೂ ಮಾರ್ಗ ಬದಲಾವಣೆ ಮಾಡಲಾಗಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಮೇ 30 ರಿಂದ ಜೂನ್ 8ರವರೆಗೆ ವಾಸ್ಕೋ–ಡ–ಗಾಮಾದಿಂದ ಹೊರಡುವ ರೈಲು ಸಂಖ್ಯೆ 17310 ವಾಸ್ಕೋ–ಡ–ಗಾಮಾ ಯಶವಂತಪುರ ದೈನಂದಿನ ಎಕ್ಸ್‌ಪ್ರೆಸ್ ರೈಲು ಮಾರ್ಗ ಮಧ್ಯೆ 100 ನಿಮಿಷಗಳ ಕಾಲ ನಿಯಂತ್ರಣಕ್ಕೆ ಒಳಪಡಲಿದೆ.

ಜೂನ್ 1ರಂದು ಉದಯಪುರ ಸಿಟಿಯಿಂದ ಹೊರಡುವ ರೈಲು ಸಂಖ್ಯೆ 19667 ಉದಯಪುರ ಸಿಟಿ – ಮೈಸೂರು ಹಮ್ಸಫರ್ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲು 120 ನಿಮಿಷಗಳ ಕಾಲ ನಿಯಂತ್ರಣಕ್ಕೆ ಒಳಪಡಲಿದೆ.

ಮೇ 31ರಿಂದ ಜೂನ್ 9ರವರೆಗೆ ಧಾರವಾಡದಿಂದ ಹೊರಡುವ ರೈಲು ಸಂಖ್ಯೆ 12726 ಧಾರವಾಡ – ಕೆಎಸ್‌ಆರ್ ಬೆಂಗಳೂರು ಸಿದ್ದಗಂಗಾ ದೈನಂದಿನ ಎಕ್ಸ್‌ಪ್ರೆಸ್ ರೈಲು 50 ನಿಮಿಷಗಳ ಕಾಲ ನಿಯಂತ್ರಿಸಲಾಗುತ್ತದೆ.

# ಫೋನ್–ಇನ್ ಕಾರ್ಯಕ್ರಮದಲ್ಲಿ 64 ಅಹವಾಲುಗಳ ಸ್ವೀಕಾರ

ಬೆಂಗಳೂರು

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯ ನಾಗರಿಕರ ಸಮಸ್ಯೆಗಳನ್ನು ಆಲಿಸಿ ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಆಯೋಜಿಸಲಾದ "ಫೋನ್–ಇನ್ ಕಾರ್ಯಕ್ರಮ"ದಲ್ಲಿ 64 ಅಹವಾಲುಗಳು ದಾಖಲಾಗಿದ್ದು, ಅವುಗಳನ್ನು ಶೀಘ್ರ ಇತ್ಯರ್ಥಪಡಿಸುವಂತೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಮೃತಹಳ್ಳಿ ಮುಖ್ಯ ರಸ್ತೆಯಲ್ಲಿರುವ ನಗರ ಪಾಲಿಕೆಯ ಆಯುಕ್ತರ ಕಚೇರಿಯ ಸಭಾಂಗಣದಲ್ಲಿ ಇಂದು ಬೆಳಿಗ್ಗೆ 7 ಗಂಟೆಯಿಂದ ನಡೆದ ಕಾರ್ಯಕ್ರಮದಲ್ಲಿ ನಾಗರಿಕರಿಂದ ನೇರವಾಗಿ ಕರೆಗಳನ್ನು ಸ್ವೀಕರಿಸಿ ರಸ್ತೆ ನಿರ್ವಹಣೆ, ಘನತ್ಯಾಜ್ಯ ವಿಲೇವಾರಿ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಆಯುಕ್ತರು ಅಹವಾಲುಗಳನ್ನು ಆಲಿಸಿದರು.

ಕಾರ್ಯಕ್ರಮದಲ್ಲಿ ಒಟ್ಟು 55 ಕರೆಗಳು ಸ್ವೀಕರಿಸಲ್ಪಟ್ಟು 64 ಅಹವಾಲುಗಳು ದಾಖಲಾಗಿವೆ. ರಸ್ತೆ ದುರಸ್ತಿ ಸಂಬಂಧಿತ 30 ದೂರುಗಳು ಹಾಗೂ ಘನತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದ 15 ದೂರುಗಳು ಪ್ರಮುಖವಾಗಿದ್ದವು. ಇದಲ್ಲದೆ ಅಪಾಯಕಾರಿ ಮರಗಳು ಮತ್ತು ರೆಂಬೆ–ಕೊಂಬೆಗಳ ತೆರವು, ಇ–ಖಾತಾ ಸೇವೆಗಳು, ವಿದ್ಯುತ್ ಮತ್ತು ಇತರೆ ವಿಭಾಗಗಳಿಗೆ ಸಂಬಂಧಿಸಿದ ದೂರುಗಳೂ ದಾಖಲಾಗಿವೆ.

ಎಲ್ಲಾ ಅಹವಾಲುಗಳನ್ನು ಪರಿಶೀಲಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಆಯುಕ್ತರು ತಿಳಿಸಿದ್ದಾರೆ.

ಸೆಪ್ಟೆಂಬರ್ 26ರಿಂದ ಆರಂಭಿಸಿರುವ ಫೋನ್–ಇನ್ ಕಾರ್ಯಕ್ರಮಕ್ಕೆ ನಾಗರಿಕರಿಂದ ಉತ್ತಮ ಸ್ಪಂದನೆ ದೊರೆಯುತ್ತಿದ್ದು, ಇದುವರೆಗೆ ಒಟ್ಟು 1648 ಕರೆಗಳು ಸ್ವೀಕರಿಸಲ್ಪಟ್ಟು 2116 ಅಹವಾಲುಗಳು ದಾಖಲಾಗಿವೆ. ಅವುಗಳಲ್ಲಿ 1625 ಅಹವಾಲುಗಳಿಗೆ ಕ್ರಮ ಕೈಗೊಂಡು ಇತ್ಯರ್ಥಪಡಿಸಲಾಗಿದೆ.

ಉಳಿದ 491 ಅಹವಾಲುಗಳ ಪೈಕಿ 94 ದೂರುಗಳು ಪುನರಾವರ್ತಿತವಾಗಿದ್ದು, 37 ದೂರುಗಳು ಇತರೆ ಇಲಾಖೆಗಳ ವ್ಯಾಪ್ತಿಗೆ ಸೇರಿವೆ. ಅವುಗಳನ್ನು ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ತಂದು ಪರಿಹರಿಸಲಾಗುವುದು ಎಂದು

ಅದೇ ಅವಧಿಯಲ್ಲಿ ಅರಸೀಕೆರೆ

# ಮುಂಗಾರು: ರೈತರಿಗೆ ಅನುಕೂಲವಾಗುವಂತೆ ಸಿದ್ಧತೆ

ಮಾಲೂರು

ತಾಲ್ಲೂಕಿನಲ್ಲಿ 2026–27ನೇ ಸಾಲಿನ ಪೂರ್ವ ಖರೀಫ್ ಹಂಗಾಮಿಗಾಗಿ ಕೃಷಿ ಇಲಾಖೆಯಿಂದ ಅಗತ್ಯ ಪೂರ್ವಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ರೈತರಿಗೆ ಗುಣಮಟ್ಟದ ಬೀಜ, ರಸಗೊಬ್ಬರ ಮತ್ತು ಕೃಷಿ ಪರಿಕರಗಳು ಸಮರ್ಪಕವಾಗಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ್ ತಿಳಿಸಿದ್ದಾರೆ.

ತಾಲ್ಲೂಕಿನ ವಿವಿಧ ರೈತ ಸಂಪರ್ಕ ಕೇಂದ್ರಗಳು ಹಾಗೂ ಖಾಸಗಿ ಮಾರಾಟ ಮಳಿಗೆಗಳಲ್ಲಿ ಬಿತ್ತನೆ ಬೀಜಗಳಾದ ರಾಗಿ, ಜೋಳ, ಮೆಕ್ಕೆಜೋಳ, ತೊಗರಿ, ನೆಲಗಡಲೆ ಹಾಗೂ ತರಕಾರಿ ಬೀಜಗಳ ಸಮರ್ಪಕ ದಾಸ್ತಾನು ಇಡಲಾಗಿದೆ ಸಾವಯವ ಪೋಷಕಾಂಶಗಳ ಗೊಬ್ಬರುಗಳು ಸಹ ಲಭ್ಯವಿದೆ, ರಸಗೊಬ್ಬರಗಳಾದ ಯೂರಿಯಾ, ಡಿಎಪಿ, ಎಂಒಪಿ ಹಾಗೂ ಕಾಂಪ್ಲೆಕ್ಸ್ ಗೊಬ್ಬರಗಳ ಲಭ್ಯತೆ ಕುರಿತು ನಿಯಮಿತ ಪರಿಶೀಲನೆ ನಡೆಸಲಾಗುತ್ತಿದೆ. ಕೃಷಿ ಇಲಾಖೆಯ ಅಧಿಕಾರಿಗಳು ಗ್ರಾಮ ಮಟ್ಟದಲ್ಲಿ ರೈತರ ಸಭೆಗಳನ್ನು ನಡೆಸಿ, ಮಳೆ ಆಧಾರಿತ ಬೆಳೆ ಯೋಜನೆ, ನೀರಿನ ಸಂರಕ್ಷಣೆ, ಕೃಷಿ ಹೊಂಡಗಳ ಸುರಕ್ಷತೆ, ಸಮತೋಲನ ಗೊಬ್ಬರ ಬಳಕೆ ಹಾಗೂ ಸಮಗ್ರ ಕೀಟ ನಿರ್ವಹಣೆ ಕುರಿತು ಜಾಗೃತಿ ಮೂಡಿಸುತ್ತಿದ್ದಾರೆ.



ಪ್ರಸ್ತುತ ತಾಲ್ಲೂಕಿನಲ್ಲಿ ಮುಂಗಾರು ಪೂರ್ವ ಮಳೆಯು ಸಾಧಾರಣ ಪ್ರಮಾಣದಲ್ಲಿ ದಾಖಲಾಗಿದ್ದು, ಕೆಲವೊಂದು ಗ್ರಾಮಗಳಲ್ಲಿ ಉತ್ತಮ ಮಳೆಯಾಗಿರುವುದರಿಂದ ಭೂಮಿಯಲ್ಲಿ ತೇವಾಂಶ ಹೆಚ್ಚಾಗಿ ಬಿತ್ತನೆ ಕಾರ್ಯಗಳಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ. ಕಳೆದ ವರ್ಷದ ಹೋಲಿಕೆಯಲ್ಲಿ ಈ ಬಾರಿ ಮಳೆಯ ಪ್ರಮಾಣ ಸುಧಾರಣೆಯಾಗಿದ್ದು, ರೈತರು ಬಿತ್ತನೆಗೆ ಅಗತ್ಯ ಸಿದ್ಧತೆಗಳನ್ನು ಆರಂಭಿಸಿದ್ದಾರೆ.

ಮಳೆಯ ಹಂಚಿಕೆ ಸಮಾನವಾಗಿಲ್ಲದ ಕಾರಣ ರೈತರು ಸ್ಥಳೀಯ ಹವಾಮಾನ ಮಾಹಿತಿ ಆಧರಿಸಿ ಬೆಳೆ ಆಯ್ಕೆ ಮಾಡಿಕೊಳ್ಳಬೇಕು. ಮಳೆಯ ಪ್ರಮಾಣ ಹೆಚ್ಚಾದ ಸಂದರ್ಭದಲ್ಲಿ ನೀರು ಹರಿದು ಹೋಗದಂತೆ ಕೃಷಿ ಭೂಮಿಯಲ್ಲಿ ಮಣ್ಣಿನ ಮತ್ತು ನೀರಿನ ಸಂರಕ್ಷಣಾ ಕ್ರಮಗಳನ್ನು ಅನುಸರಿಸಲು ಕೃಷಿ ಇಲಾಖೆ ಸಲಹೆ ನೀಡಿದೆ.

ರೈತರು ಅಧಿಕೃತ ಮಾರಾಟ ಮಳಿಗೆಗಳಿಂದಲೇ ಬೀಜ ಮತ್ತು ಗೊಬ್ಬರ ಖರೀದಿಸಿ ಕಡ್ಡಾಯವಾಗಿ ಬಿಲ್ ಪಡೆಯಬೇಕು. ಯಾವುದೇ ಸಮಸ್ಯೆಗಳಿದ್ದಲ್ಲಿ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಕೃಷಿ ಇಲಾಖೆಯನ್ನು ಸಂಪರ್ಕಿಸಲು ಕೋರಲಾಗಿದೆ.

ರೈತರ ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ರಸಗೊಬ್ಬರಗಳ ಕೊರತೆ ಇಲ್ಲ ನಗರದ ಎಲ್ಲಾ ರಸಗೊಬ್ಬರ ಮಾರಾಟ ಅಂಗಡಿ ಮಳಿಗೆಗಳಲ್ಲಿ ರಿಯಾಯಿತಿ ದರದಲ್ಲಿ ಎಂ ಆರ್ ಪಿ ದರದಂತೆ ಮಾರಾಟ ಮಾಡಲು ಸೂಚಿಸಲಾಗಿದೆ ರಸಗೊಬ್ಬರ ಅಗತ್ಯವಿರುವ ರೈತರು ಪಹಣಿ ಹಾಗೂ ಆಧಾರ್ ಕಾರ್ಡ್ ನೀಡಿ ರಸಗೊಬ್ಬರಗಳನ್ನು ಪಡೆಯಬಹುದಾಗಿದೆ.

ಮಾಲೂರು ತಾಲ್ಲೂಕಿನ ರೈತರು ತಮ್ಮ ಜಮೀನುಗಳಲ್ಲಿ ಕೃಷಿ ಚಟುವಟಿಕೆಗಳಿಗಾಗಿ ಕೃಷಿ ಹೊಂಡಗಳನ್ನು ನಿರ್ಮಿಸಿಕೊಂಡವರು ಇತ್ತೀಚಿನ ದಿನಗಳಲ್ಲಿ ಕೃಷಿ ಹೊಂಡಗಳಲ್ಲಿ ಸಂಭವಿಸುತ್ತಿರುವ ಅಪಘಾತಗಳು ಹಾಗೂ ಜೀವಹಾನಿ ಪ್ರಕರಣಗಳನ್ನು ಗಮನದಲ್ಲಿಟ್ಟುಕೊಂಡು, ಕೃಷಿ ಹೊಂಡಗಳಿಗೆ ಕಡ್ಡಾಯವಾಗಿ ಸುರಕ್ಷತಾ ತಂತಿ ಬೇಲಿ ನಿರ್ಮಿಸುವುದು ಅತ್ಯಾವಶ್ಯಕವಾಗಿದೆ.

ಕೃಷಿ ಹೊಂಡಗಳು ರೈತರ ನೀರಾವರಿ ಅವಶ್ಯಕತೆಗಾಗಿ ನಿರ್ಮಿಸಲ್ಪಟ್ಟಿದ್ದರೂ, ಸೂಕ್ತ ಸುರಕ್ಷತಾ ಕ್ರಮಗಳಿಲ್ಲದೆ ಇದ್ದಲ್ಲಿ ಸಾರ್ವಜನಿಕರು, ಮಕ್ಕಳು ಹಾಗೂ ಜಾನುವಾರುಗಳಿಗೆ ಅಪಾಯ ಉಂಟಾಗುವ ಸಾಧ್ಯತೆ ಹೆಚ್ಚಾಗಿದೆ. ಈ ಹಿನ್ನೆಲೆ ಎಲ್ಲಾ ಕೃಷಿ ಹೊಂಡಗಳ ಸುತ್ತಲೂ ಶೀಘ್ರವಾಗಿ ತಂತಿ ಬೇಲಿ ನಿರ್ಮಿಸುವಂತೆ ರೈತರಿಗೆ ಸೂಚಿಸಲಾಗಿದೆ.

ಕೃಷಿ ಇಲಾಖೆ ವತಿಯಿಂದ ಈಗಾಗಲೇ ವಿವಿಧ ಗ್ರಾಮಗಳಲ್ಲಿ ವ್ಯಾಪಕ ಜಾಗೃತಿ ಕಾರ್ಯಕ್ರಮಗಳು, ಸಾರ್ವಜನಿಕ ಪ್ರಕಟಣೆಗಳು ಹಾಗೂ ವಿಡಿಯೋ ಪ್ರಚಾರಗಳ ಮೂಲಕ ಸುರಕ್ಷತಾ ಕುರಿತು ಮಾಹಿತಿ ನೀಡಲಾಗಿದೆ.

ಆದಾಗ್ಯೂ ಇನ್ನೂ ಬೇಲಿ ನಿರ್ಮಿಸದಿರುವ ರೈತರು ತಕ್ಷಣವೇ ಕ್ರಮ ಕೈಗೊಳ್ಳಬೇಕು. ಸುರಕ್ಷತಾ ದೃಷ್ಟಿಯಿಂದ ಬೇಲಿ ನಿರ್ಮಿಸದ ಕೃಷಿ ಹೊಂಡಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಮಾನವೀಯ ನೆಲೆಯಲ್ಲಿ ಎಲ್ಲಾ ರೈತರು ಇಲಾಖೆಯೊಂದಿಗೆ ಸಹಕರಿಸುವಂತೆ ಹೇಳಿದರು.

## ಮೆಟ್ರೋ ರೈಲು ಕೊರತೆ: ಪರದಾಟ

ಬೆಂಗಳೂರು

ರಾಜಧಾನಿ ಬೆಂಗಳೂರಿನ ಟ್ರಾಫಿಕ್ ಸಮಸ್ಯೆ ನಿವಾರಸುವ ನಿಟ್ಟಿನಲ್ಲಿನ ಪ್ರಮುಖ ಯೋಜನೆಗಳ ಪೈಕಿ ನಮ್ಮ ಮೆಟ್ರೋ ಕೂಡ ಒಂದು. ಹಸಿರು, ನೇರಳೆ ಮತ್ತು ಹಳದಿ ಸೇರಿ ಒಟ್ಟು ಮೂರು ಮಾರ್ಗಗಳಲ್ಲಿ ಈಗಾಗಲೇ ಮೆಟ್ರೋ ರೈಲುಗಳು ಪ್ರಯಾಣಿಕರಿಗೆ ಸೇವೆ ಒದಗಿಸುತ್ತಿವೆ.

ಹೀಗಿದ್ದರೂ ಪ್ರಯಾಣಿಕರು ಮಾತ್ರ ಬಿಎಂಆರ್‌ಸಿಎಲ್ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿದ್ದಾರೆ. ಇದಕ್ಕೆ ಕಾರಣವಾಗಿರೋದು ಹಳದಿ ಮಾರ್ಗದಲ್ಲಿ ಸಂಚರಿಸುವ ರೈಲುಗಳ ನಡುವೆ ಇರುವ ಸಮಯದ ಅಂತರ.

ಹೌದು, ಪ್ರಧಾನಿ ನರೇಂದ್ರ ಮೋದಿ ಅವರಿಂದ 2025ರ ಆಗಸ್ಟ್ 10ರಂದು ನಮ್ಮ ಮೆಟ್ರೋದ ಯೆಲ್ಲೋ ಮಾರ್ಗಕ್ಕೆ ಚಾಲನೆ ಸಿಕ್ಕಿದ್ದು, ಆಗಸ್ಟ್ 11ರಿಂದ ವಾಣಿಜ್ಯ ಕಾರ್ಯಾಚರಣೆ ಆರಂಭವಾಗಿತ್ತು.

ನಿಲ್ದಾಣದಿಂದ ಹೊರಡುವ ರೈಲು

# ‘ಜನನ ಮರಣ ನೋಂದಣಿಯನ್ನು ಶೇಕಡ ನೂರರಷ್ಟು ಸಾಧಿಸಿ’

ರಾಮನಗರ

ಜಿಲ್ಲೆಯಲ್ಲಿ ಜನನ – ಮರಣ ನೋಂದಣಿಯನ್ನು ಶೇ. 100ರಷ್ಟು ಸಾಧಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಸೂಚಿಸಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನನ ಮರಣ ನೋಂದಣಿ ಕುರಿತು ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾನತಾಡಿದರು.

ಜನನ, ಮರಣ ಘಟನೆಗಳನ್ನು ಘಟಿಸಿದ 21 ದಿನಗಳೊಳಗಾಗಿ ವಿಳಂಬಕ್ಕೆ ಆಸ್ಪದವಿಲ್ಲದಂತೆ ನೋಂದಾಯಿಸಿಕೊಳ್ಳಲು ಪಟ್ಟಣ ಹಾಗೂ ಗ್ರಾಮೀಣ ಪ್ರದೇಶದ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದವರು ತಾಕೀತು ಮಾಡಿದರು.



ಜಿಲ್ಲೆಯಲ್ಲಿ 2024ರ ಸಾಲಿನಲ್ಲಿ 9,493 ಜನನ ಘಟನೆಗಳು 10,486 ಮರಣ ಘಟನೆಗಳು 2025 ಸಾಲಿನಲ್ಲಿ 10,207 ಜನನ ಘಟನೆಗಳು, 10,514 ಮರಣ ಘಟನೆಗಳು ಹಾಗೂ 2026ರ ಜನವರಿಯಿಂದ ಏಪ್ರಿಲ್ ಮಾಹೆಯವರೆಗೆ 3,153 ಜನನ ಘಟನೆಗಳು, 3,393 ಮರಣ ಘಟನೆಗಳಾಗಿವೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಸುನೀಲ್ ಕುಮಾರ್ ಅವರು ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 2025ನೇ ಸಾಲಿನಲ್ಲಿ 1,722 ಹಾಗೂ 2026 ಜನವರಿಯಿಂದ ಮಾರ್ಚ್ ವರೆಗೆ 312 ಜನನ ಘಟನೆಗಳು ತಡವಾಗಿ ನೋಂದಣಿಯಾಗಿದೆ. 2025ನೇ ಸಾಲಿನಲ್ಲಿ 3,378 ಹಾಗೂ 2026 ಜನವರಿಯಿಂದ ಮಾರ್ಚ್ ವರೆಗೂ 674 ಮರಣ ಘಟನೆಗಳು ತಡವಾಗಿ ನೋಂದಣಿ ಆಗಿವೆ. ಜನನ–ಮರಣ ಘಟನೆಗಳು ತಡವಾಗಿ ನೋಂದಣಿಯಾಗದಂತೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ ಸಿಬ್ಬಂದಿ, ಗ್ರಾಮ ಲೆಕ್ಕಾಧಿಕಾರಿಗಳು, ಸಾಂಖಿಕ ನಿರೀಕ್ಷಕರು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಯವರು ಸೂಚಿಸಿದರು.

ಸರ್ಕಾರಿ ಆಸ್ಪತ್ರೆಗಳು, ಖಾಸಗಿ ಆಸ್ಪತ್ರೆಗಳ ವೈದ್ಯಾಧಿಕಾರಿಗಳು ತಮ್ಮ ಆಸ್ಪತ್ರೆಗಳಲ್ಲಿ ಘಟಿಸುವ ಜನನ, ಮರಣ ಘಟನೆಗಳನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಲು ಅಗತ್ಯ ಕ್ರಮವಹಿಸಬೇಕು, ಈ ಸಂದರ್ಭದಲ್ಲಿ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದಂತೆ ಎಚ್ಚರಿಕೆ ವಹಿಸಬೇಕು, ಜಿಲ್ಲೆಯ ಎಲ್ಲಾ ತಹಶೀಲ್ದಾರರು ಜನನ–ಮರಣ ಘಟನೆಗಳ ನೋಂದಣಿಯ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಗಳನ್ನು ನಿಯಮಿತವಾಗಿ ನಡೆಸುವಂತೆ ಸೂಚಿಸಿದರು.

ಮಾಗಡಿ ತಾಲೂಕು ಯೋಜನಾಧಿಕಾರಿ ವೆಂಕಟರಾಮು, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕರಾದ ಮಹೇಶ್, ಕಾವ್ಯ, ಸಂಬಂಧಿಸಿದ ಅಧಿಕಾರಿಗಳು ಸಭೆಯಲ್ಲಿದ್ದರು.

# ಕೆಟ್ಟು ನಿಂತ ಶುದ್ಧ ಕುಡಿಯುವ ನೀರಿನ ಘಟಕ



ಬೇತಮಂಗಲ

ಟಿ. ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐಸಂದ್ರ ಗ್ರಾಮದಲ್ಲಿ ಕಳೆದ ಮೂರು ವರ್ಷಗಳಿಂದ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿದ್ದು, ಶುದ್ಧ ನೀರಿಗಾಗಿ ಗ್ರಾಮಸ್ಥರು ಮೈಲುಗಟ್ಟಲೆ ಅಲೆಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಜನಪ್ರತಿನಿಧಿಗಳ ಭರವಸೆಗಳು ಹುಸಿಯಾಗಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಐಸಂದ್ರ ಗ್ರಾಮದಲ್ಲಿ 200ಕ್ಕೂ ಹೆಚ್ಚು ಮನೆಗಳಿದ್ದು, ಸಾವಿರಾರು ಜನಸಂಖ್ಯೆ ಇದೆ. ಗ್ರಾಮದಲ್ಲಿ ಲಭ್ಯವಿರುವ ನೀರು ಫ್ಲೋರೈಡ್ ಮಿಶ್ರಿತವಾಗಿದ್ದು, ಇದನ್ನು ಕುಡಿದ ವೃದ್ಧರು ಹಾಗೂ ಮಕ್ಕಳು ಪದೇ ಪದೇ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಈ ಬಗ್ಗೆ ಪಂಚಾಯಿತಿ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಜನರು ಅಳಲು ತೋಡಿಕೊಂಡಿದ್ದಾರೆ.

ಗ್ರಾಮದಲ್ಲಿ ಶುದ್ಧ ನೀರಿನ ಘಟಕ ಇಲ್ಲದ ಕಾರಣ, ನಿವಾಸಿಗಳು ಪ್ರತಿದಿನ ಪಕ್ಕದ ಕದಿರೇಗೌಡನಕೋಟೆ ಹಾಗೂ ರೆಡ್ಡಿಹಳ್ಳಿಯಂತಹ ಗ್ರಾಮಗಳಿಗೆ ಹೋಗಿ ನೀರು ತರುವಂತಾಗಿದೆ. “ಚುನಾವಣೆಯ ಸಮಯದಲ್ಲಿ ಮಾತ್ರ ವೋಟು ಕೇಳಲು ಬರುವ ನಾಯಕರು, ಗೆದ್ದ ಮೇಲೆ ನಮ್ಮ ಕಷ್ಟ ಕೇಳಲು ಬರುತ್ತಿಲ್ಲ” ಎಂದು ಗ್ರಾಮಸ್ಥರು ಕಿಡಿ ಕಾರಿದ್ದಾರೆ.

ಅಂಬೇಡ್ಕರ್ ಯುವ ವೇದಿಕೆಯ ಕೋಲಾರ ಜಿಲ್ಲಾ ಅಧ್ಯಕ್ಷ ಐಸಂದ್ರ ಗೋವಿಂದಪ್ಪ ಮಾತನಾಡಿ, “ರಾಜ್ಯದ ಇತರೆ ಕ್ಷೇತ್ರಗಳ ಶಾಸಕರು ಪ್ರತಿ ಪಂಚಾಯಿತಿ ಮಟ್ಟದಲ್ಲಿ ಕುಂದುಕೊರತೆ ಸಭೆ ನಡೆಸಿ ಜನರ ಸಮಸ್ಯೆ ಆಲಿಸುತ್ತಿದ್ದಾರೆ. ಆದರೆ ನಮ್ಮ ಕ್ಷೇತ್ರದಲ್ಲಿ ಶಾಸಕರು ಚುನಾವಣೆಯಾದ ಮೇಲೆ ಗ್ರಾಮಕ್ಕೆ ಭೇಟಿ ನೀಡಿಲ್ಲ, ಸಾರ್ವಜನಿಕರ ಸಮಸ್ಯೆಗಳನ್ನು ಕೇಳುವ ಸಭೆಗಳೂ ನಡೆಯುತ್ತಿಲ್ಲ” ಎಂದು ಗಂಭೀರವಾಗಿ ಆರೋಪಿಸಿದರು.

ಪಂಚಾಯಿತಿ ಅಧಿಕಾರಿಗಳು ತಕ್ಷಣವೇ ಎಚ್ಚೆತ್ತು ಐಸಂದ್ರ ಗ್ರಾಮಕ್ಕೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸದಿದ್ದರೆ ಮುಂಬರುವ ದಿನಗಳಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಗ್ರಾಮಸ್ಥರು ಎಚ್ಚರಿಸಿದ್ದಾರೆ.

# ಬಿಎಸ್‌ವೈ ಅಭಿಮಾನೋತ್ಸವಕ್ಕೆ ಬಳ್ಳಾರಿ ಸಜ್ಜು



ಬಳ್ಳಾರಿ

ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರ ಜನಪರ ಆಡಳಿತ, ರೈತಪರ ಯೋಜನೆಗಳು ಹಾಗೂ ಪಕ್ಷ ಸಂಘಟನೆಗೆ ನೀಡಿದ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ಆಯೋಜಿಸಿರುವ ‘ಬಿಎಸ್‌ವೈ ಅಭಿಮಾನೋತ್ಸವ’ ಕಾರ್ಯಕ್ರಮಕ್ಕೆ ಬಳ್ಳಾರಿ ಜಿಲ್ಲೆಯಿಂದ ಬಿಜೆಪಿಯ ಕಾರ್ಯಕರ್ತರು, ಅಭಿಮಾನಿಗಳು ಭಾಗವಹಿಸಲಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ ತಿಳಿಸಿದರು.

ಮೋಕಾ ರಸ್ತೆಯ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯ ರಾಜಕಾರಣದಲ್ಲಿ ಯಡಿಯೂರಪ್ಪ ಅವರು ವಿಶಿಷ್ಟ ಸ್ಥಾನ ಹೊಂದಿದ್ದಾರೆ. ಸಾಮಾನ್ಯ ಕಾರ್ಯಕರ್ತನಾಗಿ ರಾಜಕೀಯ ಪ್ರವೇಶಿಸಿ, ಮುಖ್ಯಮಂತ್ರಿ ಹುದ್ದೆಯವರೆಗೆ ಏರಿದ ಅವರ ಜೀವನ ಎಲ್ಲರಿಗೂ ಮಾದರಿಯಾಗಿದೆ. ರೈತಪರ ಯೋಜನೆಗಳು, ನೀರಾವರಿ ಅಭಿವೃದ್ಧಿ, ಗ್ರಾಮೀಣ ಭಾಗಗಳ ಪ್ರಗತಿ ಹಾಗೂ ಬಡವರ ಕಲ್ಯಾಣಕ್ಕಾಗಿ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವರ ಆಡಳಿತಾವಧಿಯಲ್ಲಿ ಕರ್ನಾಟಕದ ಅಭಿವೃದ್ಧಿಗೆ ಹೊಸ ದಿಕ್ಕು ದೊರೆತಿದೆ. ಬಿಜೆಪಿ ಪಕ್ಷವನ್ನು ರಾಜ್ಯದ ಪ್ರತಿಯೊಂದು ಹಳ್ಳಿಗೂ ತಲುಪಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ.

‘ಬಿ.ಎಸ್.ವೈ. ಅಭಿಮಾನೋತ್ಸವ’ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲು ಪಕ್ಷದ ವತಿಯಿಂದ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಎಲ್ಲ ತಾಲೂಕುಗಳು ಹಾಗೂ ಗ್ರಾಮೀಣ ಭಾಗಗಳಿಂದ ಸಾವಿರಾರು ಕಾರ್ಯಕರ್ತರು, ಮುಖಂಡರು ಹಾಗೂ ಅಭಿಮಾನಿಗಳು ಭಾಗವಹಿಸಲಿದ್ದಾರೆ. ಕಾರ್ಯಕ್ರಮ ಯಶಸ್ವಿಗೊಳಿಸಲು ಈಗಾಗಲೇ ವ್ಯಾಪಕ ತಯಾರಿ ನಡೆಯುತ್ತಿದೆ. ಈ ಕಾರ್ಯಕ್ರಮದಲ್ಲಿ ಬಿಜೆಪಿ ಹಿರಿಯ ಮುಖಂಡರು, ಜನಪ್ರತಿನಿಧಿಗಳು, ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಯುವ ಕಾರ್ಯಕರ್ತರು ಭಾಗವಹಿಸಲಿದ್ದು, ಪಕ್ಷದ ಬಲವರ್ಧನೆ ಹಾಗೂ ಸಂಘಟನೆ ಕುರಿತು ವಿಶೇಷ ಚರ್ಚೆಗಳು ನಡೆಯಲಿವೆ. ಯಡಿಯೂರಪ್ಪ ಅವರು ಅಪಾರ ಅನುಭವ ಹೊಂದಿದ ನಾಯಕರು. ಅವರ ಮಾರ್ಗದರ್ಶನದಲ್ಲಿ ಪಕ್ಷ ಇನ್ನಷ್ಟು ಬಲಿಷ್ಠವಾಗುತ್ತಿದ್ದು, ಮುಂದಿನ ದಿನಗಳಲ್ಲಿ ಬಿಜೆಪಿ ಸಂಘಟಿತವಾಗಿ ಕಾರ್ಯನಿರ್ವಹಿಸಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು. ಪಕ್ಷದ ಮುಖಂಡರಾದ ಕೆ.ರಾಮಾಂಜಿನಿ, ಅಡವಿಸ್ವಾಮಿ, ಗುತ್ತಿಗನೂರು ವಿರೂಪಾಕ್ಷಗೌಡ ಸೇರಿದಂತೆ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸುದ್ದಿಗೋಷ್ಠಿಯಲ್ಲಿ ಇದ್ದರು.

# ಮಾಲೂರು ಶಿಕ್ಷಕರ ಸಂಘಕ್ಕೆ ಅವಿರೋಧ ಆಯ್ಕೆ: ಶಾಸಕರ ಸೂಚನೆಯಂತೆ ಒಮ್ಮತದ ನಾಮಪತ್ರ ಸಲ್ಲಿಕೆ

ಮಾಲೂರು

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಲೂರು ತಾಲ್ಲೂಕು ಘಟಕದ ವಿವಿಧ ಪದಾಧಿಕಾರಿಗಳ ಹುದ್ದೆಗಳಿಗೆ ಮಂಗಳವಾರ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಎಲ್ಲಾ 9 ಸ್ಥಾನಗಳಿಗೆ ತಲಾ ಒಂದೊಂದು ನಾಮಪತ್ರ ಸಲ್ಲಿಕೆಯಾಗುವ ಮೂಲಕ ಚುನಾವಣೆ ‘ಅವಿರೋಧ’ದ ಹಾದಿ ಹಿಡಿದಿದೆ.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಚುನಾವಣಾಧಿಕಾರಿ ವೀರಭದ್ರಾಚಾರ್ಯ ಅವರಿಗೆ ವಿವಿಧ ಹುದ್ದೆಗಳ ಆಕಾಂಕ್ಷಿಗಳು ತಮ್ಮ ನಾಮಪತ್ರಗಳನ್ನು ಸಲ್ಲಿಸಿದರು. 14 ಮಂದಿ ನಿರ್ದೇಶಕ ಸ್ಥಾನಗಳಿಗೆ ಈಗಾಗಲೇ ಚುನಾವಣೆ ನಡೆದಿದ್ದು, ಈ ಪೈಕಿ ಸಂಘದ ಆಡಳಿತ ಮಂಡಳಿಯ ಪದಾಧಿಕಾರಿಗಳ ಆಯ್ಕೆಗಾಗಿ ಮಂಗಳವಾರ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿತ್ತು.



ನೂತನ ಪದಾಧಿಕಾರಿಗಳ ವಿವರ:

ಅಧ್ಯಕ್ಷರು: ಸಿ.ಎಂ. ನಾರಾಯಣಸ್ವಾಮಿ

ಉಪಾಧ್ಯಕ್ಷರು: ಜಿ. ಮುನಿಯಪ್ಪ (ಸಾಮಾನ್ಯ), ವಿ. ಕಾಂತಮ್ಮ (ಮಹಿಳಾ ಮೀಸಲು)

ತಾಲ್ಲೂಕು ಪ್ರಧಾನ ಕಾರ್ಯದರ್ಶಿ: ರವಿಕುಮಾರ್ ಕೆ.

ಸಹ ಕಾರ್ಯದರ್ಶಿ: ಶಶಿಧರ

ಖಜಾಂಚಿ: ಸುರೇಶ್ ಎಚ್.ಇ.

ಸಂಘಟನಾ ಕಾರ್ಯದರ್ಶಿ: ಶ್ರೀನಾಥ್ ಪಿ.

ಮಹಿಳಾ ಸಂಘಟನಾ ಕಾರ್ಯದರ್ಶಿ: ಕೆ. ಚಂದ್ರಕಲಾ (ಟೇಕಲ್) ಹಾಗೂ ಲಕ್ಷ್ಮಿ ಎನ್.

ಒಗ್ಗಟ್ಟಿನ ಪ್ರದರ್ಶನ: ಈ ಸಂದರ್ಭದಲ್ಲಿ ಮಾತನಾಡಿದ ಭಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಎಂ. ಮುನಿನಾರಾಯಣ, “ಶಾಸಕ ಕೆ.ವೈ. ನಂಜೇಗೌಡ ಹಾಗೂ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ವಿ. ಮುನೇಗೌಡ ಅವರ ಮಾರ್ಗದರ್ಶನದಂತೆ ಎಲ್ಲಾ 14 ಮಂದಿ ನಿರ್ದೇಶಕರು ಒಮ್ಮತದ ತೀರ್ಮಾನ ಕೈಗೊಂಡಿದ್ದೇವೆ. ಯಾವುದೇ ಪೈಪೋಟಿ ಇಲ್ಲದೆ ಒಗ್ಗಟ್ಟಿನಿಂದ 9 ಹುದ್ದೆಗಳಿಗೆ 9 ನಾಮಪತ್ರಗಳನ್ನು ಸಲ್ಲಿಸಲಾಗಿದೆ. ಕೇವಲ ಅಧಿಕೃತ ಘೋಷಣೆಯಷ್ಟೇ ಬಾಕಿ ಇದೆ” ಎಂದು ತಿಳಿಸಿದರು.

ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಲು ಕರೆ: ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದ ಹಿರಿಯ ಮುಖಂಡರು, ಸಂಘವು ಶಿಕ್ಷಕರ ಸಮಸ್ಯೆಗಳಿಗೆ ಕಾಲಕಾಲಕ್ಕೆ ಸ್ಪಂದಿಸಬೇಕು. ಇಲಾಖೆಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಸಂಘವನ್ನು ಕ್ರಿಯಾಶೀಲವಾಗಿ ಮುನ್ನಡೆಸಬೇಕು ಎಂದು ಆಶಿಸಿದರು.

ಮೇ 5 ರಂದು ನಾಮಪತ್ರ ಹಿಂಪಡೆಯಲು ಅವಕಾಶವಿದ್ದು, ಇದೇ 6ರಂದು ಚುನಾವಣಾಧಿಕಾರಿಗಳು ಅಧಿಕೃತವಾಗಿ ಫಲಿತಾಂಶ ಪ್ರಕಟಿಸಲಿದ್ದಾರೆ. ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ಮುಖಂಡರಾದ ನಂದೀಶ್, ನಾಗರಾಜ್, ಎಂ. ರವಿ, ವೆಂಕಟೇಶ್ ಗೌಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 12ಕ್ಕೆ ಗಂಗಾತಾಯಿ ಜಾತ್ರಾ ಮಹೋತ್ಸವ

ವಿಜಯಪುರ

ಪಟ್ಟಣದ ಗ್ರಾಮದೇವತೆ ಗಂಗಾತಾಯಿ ದೇವಾಲಯದಲ್ಲಿ ಮೇ. 12ರಂದು ನಡೆಯಲಿರುವ 56ನೇ ವರ್ಷದ ಜಾತ್ರಾಮಹೋತ್ಸವದ ಹಿನ್ನೆಲೆಯಲ್ಲಿ ಮಂಗಳವಾರ ಗಂಗಾತಾಯಿ ದೇವಾಲಯದಲ್ಲಿ ಸಾಟಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಗಂಗಾದೇವಿ ದೇವಾಲಯದಲ್ಲಿ ಪ್ರಥಮ ದಿನದ ಪೂಜಾ ಕಾರ್ಯಕ್ರಮಗಳನ್ನು ನೆರವೇರಿಸಿದ ನಂತರ ಸಾಟಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.


ಈ ವೇಳೆ ಮಾತನಾಡಿದ ಪುರಸಭೆ ಸದಸ್ಯ ಎಂ.ಸತೀಶ್ ಕುಮಾರ್ ಅವರು, ಪಟ್ಟಣದಲ್ಲಿ ಸಾಂಪ್ರದಾಯಿಕವಾಗಿ ನಡೆದುಕೊಂಡು ಬಂದಿರುವ, ಜಾತ್ರಾಮಹೋತ್ಸವದ ಆಚರಣೆಯಲ್ಲಿ, ಜಾತಿ, ಧರ್ಮದ ಹಂಗಿಲ್ಲದೆ, ಎಲ್ಲಾ ಸಮುದಾಯಗಳವರು ಭಾಗವಹಿಸುವುದು ಒಂದು ವಿಶೇಷ. ನಾವೆಲ್ಲರೂ ಒಂದೇ ಎನ್ನುವುದನ್ನು ಇದು ಸೂಚಿಸುತ್ತದೆ. ಇಂತಹ ಆಚರಣೆಗಳು ನಮ್ಮ ಧರ್ಮ ಮತ್ತು ಸಂಸ್ಕೃತಿಗೆ ಪ್ರತಿಬಿಂಬವಾಗಿವೆ ಎಂದರು.

ಜಾತ್ರಾ ಕಮಿಟಿಯ ಸದಸ್ಯ ಸಂಪತ್ ಕುಮಾರ್ ಮಾತನಾಡಿ, ಅನಾದಿಕಾಲದಿಂದಲೂ ಪ್ರತಿವರ್ಷದಂತೆ ಈ ವರ್ಷವೂ ಜಾತ್ರೆಯನ್ನು ಆಯೋಜನೆ ಮಾಡಲಾಗಿದ್ದು, ಪ್ರತಿದಿನವೂ ಒಂದೊಂದು ಕಾರ್ಯಕ್ರಮವನ್ನು ಆಯೋಜನೆಗೊಳಿಸಲಾಗಿದೆ. ಪಟ್ಟಣದಲ್ಲಿನ ಪ್ರತಿಯೊಂದು ಕುಟುಂಬದವರು, ಗ್ರಾಮದ ಹಬ್ಬದಲ್ಲಿ ಪಾಲ್ಗೊಳ್ಳಬೇಕು. ಇಂತಹ ಆಚರಣೆಗಳು ಗ್ರಾಮದ ಒಳಿತಿಗೆ ಪೂರಕವಾಗಿವೆ. ಇದನ್ನು ಶ್ರದ್ಧಾಭಕ್ತಿಯಿಂದ ಆಚರಣೆ ಮಾಡುವುದರಿಂದ ಪಟ್ಟಣದಲ್ಲಿ ಶಾಂತಿ ನೆಲೆಸಲಿದೆ ಎಂದರು.

ಗಂಗಾಮತಸ್ಥರ ಸಂಘದ ಅಧ್ಯಕ್ಷ ಉಪೇಂದ್ರಕುಮಾರ್ ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವೂ ಸಹಾ ಅನ್ನದಾನ ಕಮಿಟಿಯಿಂದ 5 ಸಾವಿರ ಮಂದಿಗೆ ಅನ್ನದಾನದ ವ್ಯವಸ್ಥೆ ಮಾಡಿದ್ದೇವೆ. ಜಾತ್ರೆಗೆ ಬರುವ ಸಾವಿರಾರು ಮಂದಿ ಭಕ್ತರಿಗೆ ಯಾವ ತೊಂದರೆ ಆಗದಂತೆ ಅಗತ್ಯವಾಗಿರುವ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದೇವೆ. ಪಟ್ಟಣ ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳಿಂದಲೂ ಭಕ್ತರು ಬಂದು ದೀಪಗಳನ್ನು ಬೆಳಗಿ ಹೋಗುತ್ತಾರೆ ಎಂದರು.

ಮುಖಂಡರಾದ ನಾಗರಾಜ್, ನಾರಾಯಣಸ್ವಾಮಿ, ರುದ್ರಮೂರ್ತಿ, ಮಾಜಿ ಪುರಸಭೆ ಅಧ್ಯಕ್ಷೆ ಅನ್ನಪೂರ್ಣಮ್ಮ, ಕೆ.ಎಂ. ಮಹೇಶ್ ಮಧು, ಕೆ.ಮುನಿರಾಜು, ನವೀನ್ ಕುಮಾರ್, ವಿಶ್ವನಾಥ್, ಮುನಿಆಂಜಿನಪ್ಪ ಮುಂತಾದವರು ಹಾಜರಿದ್ದರು.

# ಪಂಚರಾಜ್ಯ ಫಲಿತಾಂಶಕ್ಕೆ ಕೇಸರಿ ಪಡೆ ಫಿದಾ



ವೈ.ಎನ್.ಹೊಸಕೋಟೆ

ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿ ವಿಧಾನಸಭಾ ಚುನಾವಣೆಗಳಲ್ಲಿ ಭಾರತೀಯ ಜನತಾ ಪಕ್ಷದ ಸಾಧನೆಯನ್ನು ಸ್ವಾಗತಿಸಿ, ವೈ.ಎನ್.ಹೊಸಕೋಟೆಯ ಬಿಜೆಪಿ ಕಾರ್ಯಕರ್ತರು ಪಟ್ಟಣದ ಗಾಂಧೀಜಿ ವೃತ್ತದಲ್ಲಿ ಅದ್ಧೂರಿ ವಿಜಯೋತ್ಸವ ಆಚರಿಸಿದರು.

ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯುವ ಮೂಲಕ ಬಿಜೆಪಿ ರಾಜಕೀಯ ಇತಿಹಾಸ ಸೃಷ್ಟಿಸಿದೆ ಎಂದು ಹರ್ಷ ವ್ಯಕ್ತಪಡಿಸಿದ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಪರ ಘೋಷಣೆಗಳನ್ನು ಕೂಗಿದರು.

ಪಟ್ಟಣದ ಪ್ರಮುಖ ಕೇಂದ್ರವಾದ ಗಾಂಧೀಜಿ ವೃತ್ತದಲ್ಲಿ ಜಮಾಯಿಸಿದ ನೂರಾರು ಕಾರ್ಯಕರ್ತರು, ನಾಯಕರ ಭಾವಚಿತ್ರ ಹಾಗೂ ಪಕ್ಷದ ಬಾವುಟಗಳನ್ನು ಹಿಡಿದು ಮೆರವಣಿಗೆ ನಡೆಸಿದರು. ಈ ಗೆಲುವು ಪಕ್ಷದ ಜನಪರ ಆಡಳಿತಕ್ಕೆ ಸಂದ ಜಯ ಎಂದು ಕಾರ್ಯಕರ್ತರು ಸಂಭ್ರಮಿಸಿದರು.

ಗೆಲುವಿನ ಖುಷಿಯಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ ಸಾರ್ವಜನಿಕರಿಗೆ ಸಿಹಿ ಹಂಚಿದರು. ವಿಜಯೋತ್ಸವದಲ್ಲಿ ಭಾಗವಹಿಸಿದ್ದ ಹಿರಿಯ ಮುಖಂಡರು ಮಾತನಾಡಿ, ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ದೇಶಾದ್ಯಂತ ಪಕ್ಷವು ಬಲಿಷ್ಠವಾಗಿ ಬೆಳೆಯುತ್ತಿದೆ. ಈ ರಾಜ್ಯಗಳ ಫಲಿತಾಂಶವು ಮುಂಬರುವ ದಿನಗಳಲ್ಲಿ ದೇಶದ ರಾಜಕೀಯ ದಿಕ್ಸೂಚಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಬಿಜೆಪಿಯ ಹಿರಿಯ ಮುಖಂಡರು, ನೂರಾರು ಯುವ ಕಾರ್ಯಕರ್ತರು ಹಾಗೂ ಪಕ್ಷದ ಪದಾಧಿಕಾರಿಗಳು ಭಾಗವಹಿಸಿ ವಿಜಯದ ಸಂಭ್ರಮವನ್ನು ಹಂಚಿಕೊಂಡರು.

# ಆಲಿಕಲ್ಲು ಮಳೆ ಹೊಡೆತಕ್ಕೆ ನೆಲಕಚ್ಚಿದ ಬೆಳೆ; ರೈತರು ಕಂಗಾಲು

ಬೇತಮಂಗಲ

ಶುಕ್ರವಾರ ರಾತ್ರಿ ಸಂಭವಿಸಿದ ಭೀಕರ ಬಿರುಗಾಳಿ ಹಾಗೂ ಅಲಿಕಲ್ಲು ಮಳೆಗೆ ಬೇತಮಂಗಲ ಹೋಬಳಿಯ ಸುಮಾರು 600 ಎಕರೆಗೂ ಅಧಿಕ ಪ್ರದೇಶದಲ್ಲಿ ಬೆಳೆದಿದ್ದ ಮಾವು ಹಾಗೂ ಬಾಳೆ ಬೆಳೆಗಳು ಸಂಪೂರ್ಣ ನಾಶವಾಗಿವೆ. ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿರುವ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕಣ್ಣೀರು ಹಾಕುತ್ತಿದ್ದಾರೆ.

ಹೋಬಳಿಯ ಕರಡಗೂರು, ಮಜರರೆಡ್ಡಿಹಳ್ಳಿ, ನಕ್ಕನಹಳ್ಳಿ, ಚಿಂಚಾಂಡ್ಲಾಹಳ್ಳಿ, ಏತೂರು, ಮರವೂರು, ಕೆಸಿರೆಡ್ಡಿಗಾಂಡ್ಲಹಳ್ಳಿ ಹಾಗೂ ಕಣ್ಣೂರು ಐವಾರಹಳ್ಳಿ ಗ್ರಾಮಗಳಲ್ಲಿ ಮಳೆಯ ಆರ್ಭಟಕ್ಕೆ ಬೆಳೆಗಳು ಮಣ್ಣು ಪಾಲಾಗಿವೆ.

ಬೆಳೆ ಹಾನಿಯ ಸುದ್ದಿ ತಿಳಿಯುತ್ತಿದ್ದಂತೆಯೇ ಸಮಾಜ ಸೇವಕ ಹಾಗೂ ಆರ್‌ಕೆ ಫೌಂಡೇಶನ್‌ನ ಮೋಹನ್ ಕೃಷ್ಣ ಅವರು ಬಾಧಿತ ಗ್ರಾಮಗಳಿಗೆ ಭೇಟಿ ನೀಡಿ ಹಾನಿಯನ್ನು ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಅವರು, “ರೈತ ಈ ದೇಶದ ಬೆನ್ನೆಲುಬು. ಆದರೆ ಪ್ರಕೃತಿಯ ವಿಕೋಪದಿಂದ ಇಂದು 600 ಎಕರೆ ಮಾವು ಹಾಗೂ ಬಾಳೆ ತೋಟಗಳು ನಾಶವಾಗಿವೆ. ಸರ್ಕಾರ ತಕ್ಷಣ ಎಚ್ಚೆತ್ತುಕೊಂಡು ಕಂದಾಯ ಮತ್ತು ಕೃಷಿ ಇಲಾಖೆ ಅಧಿಕಾರಿಗಳ ಮೂಲಕ ಸಮೀಕ್ಷೆ ನಡೆಸಿ, ಸಂಕಷ್ಟದಲ್ಲಿರುವ ಪ್ರತಿ ರೈತನಿಗೂ ಸೂಕ್ತ ಪರಿಹಾರ ನೀಡಬೇಕು,” ಎಂದು ಒತ್ತಾಯಿಸಿದರು.



ಇದೇ ವೇಳೆ ಸ್ಥಳೀಯ ಶಾಸಕರ ವಿರುದ್ಧ ಕಿಡಿಕಾರಿದ ಅವರು, “ರೈತರ ಬಗ್ಗೆ ಮಾತನಾಡುವವರು ನಿಮ್ಮ ವೈಯಕ್ತಿಕವಾಗಿ ರೈತರಿಗೆ ತಲಾ 2 ಲಕ್ಷ ರೂ. ನೆರವು ನೀಡಬಾರದೇಕೆ?” ಎಂದು ಪ್ರಶ್ನಿಸಿದರು. ಇದೇ ವೇಳೆ ಅವರು ಸಂಸದ ಮಲ್ಲೇಶ್ ಬಾಬು ಅವರೊಂದಿಗೆ ದೂರವಾಣಿ ಮೂಲಕ ಚರ್ಚಿಸಿದ್ದು, ಸಂಸದರು ಅಧಿಕಾರಿಗಳೊಂದಿಗೆ ಮಾತನಾಡಿ ಶೀಘ್ರವೇ ಪರಿಹಾರ ಒದಗಿಸುವ ಭರವಸೆ ನೀಡಿದ್ದಾರೆ ಎಂದರು.

“ನಷ್ಟಕ್ಕೊಳಗಾದ ರೈತರಿಗೆ ಆರ್‌ಕೆ ಫೌಂಡೇಶನ್ ವತಿಯಿಂದಲೂ ವೈಯಕ್ತಿಕ ನೆರವು ನೀಡಲಾಗುವುದು. ಆದರೆ ಸರ್ಕಾರ ಒಂದು ವಾರದೊಳಗೆ ಬಾಳೆ ಬೆಳೆಗಾರರಿಗೆ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಬೇಕು. ಇಲ್ಲವಾದಲ್ಲಿ ರೈತಪರ ಸಂಘಟನೆಗಳೊಂದಿಗೆ ಸೇರಿ ಬೃಹತ್ ಪ್ರತಿಭಟನೆ ನಡೆಸಲಾಗುವುದು,” ಎಂದು ಮೋಹನ್ ಕೃಷ್ಣ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಕಷ್ಟಕ್ಕೀಡಾದ ನೂರಾರು ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕೆಜಿಎಫ್ ಪೊಲೀಸರಿಂದ ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಜಾರಿ

ಕೆ.ಜಿ.ಎಫ್

ಜಿಲ್ಲೆಯಲ್ಲಿ ಮನೆ ಕಳ್ಳತನಗಳನ್ನು ತಡೆಯಲು ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಅನ್ನು ಕೆ.ಜಿ.ಎಫ್. ಪೊಲೀಸ್ ಇಲಾಖೆ ಇಂದಿನಿಂದ ಜಾರಿಗೊಳಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಜಿಲ್ಲಾ ಪೊಲೀಸ್ ಕಛೇರಿ, ಕೋಲಾರ ಚಿನ್ನದಗಣಿ ಪ್ರದೇಶದಲ್ಲಿ ಎಲ್.ಬಿ.ಎಚ್.ಎಸ್ ಉಪಕ್ರಮದ ಅನುಷ್ಠಾನ ಮಾಡಲು ಇಲಾಖೆಯು ಸನ್ನದ್ಧವಾಗಿದೆ. ಇದು ಆಸ್ತಿ ಸಂಬಂಧಿತ ಅಪರಾಧಗಳನ್ನು ತಡೆಯಲು ಗಮನಾರ್ಹ ಸಾಧನವಾಗಿದ್ದು, ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಅಡಿ ಬೀಗ ಹಾಕಿದ ಮನೆಗಳಲ್ಲಿ ಕಳ್ಳತನ ಆಗದಂತೆ ತಡೆಗಟ್ಟುವುದು, ರಾತ್ರಿ ಗಸ್ತುಗಳನ್ನು ಹೆಚ್ಚು ಪರಿಣಾಮಕಾರಿಯಾಗಿಸುವುದು. ಅಪರಾಧ ತಡೆಗಟ್ಟುವಿಕೆಯಲ್ಲಿ ನಾಗರಿಕರ ಸಹಕಾರವನ್ನು ಹೆಚ್ಚಿಸುವುದು. ನೈಜ–ಸಮಯದ ಮಾಹಿತಿಯ ಆಧಾರದ ಮೇಲೆ ಉದ್ದೇಶಿತ ಕಣ್ಣಾವಲು ಇಟ್ಟುಕೊಳ್ಳುವುದಾಗಿದೆ.

ಈ ವ್ಯವಸ್ಥೆಯ ಪರಿಣಾಮಕಾರಿ ಅನುಷ್ಠಾನದ ಬಗ್ಗೆ ಈಗಾಗಲೇ ಕೆ.ಜಿ.ಎಫ್.ನ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಲಾಗಿದೆ. ನಾಗರಿಕರು ತಮ್ಮ ನಿವಾಸಗಳಿಂದ ತಾತ್ಕಾಲಿಕವಾಗಿ ಹೊರ ಹೋಗುವ ಸಂದರ್ಭಗಳಲ್ಲಿ ಸ್ವಯಂಪ್ರೇರಣೆಯಿಂದ ಪೊಲೀಸರಿಗೆ ಮಾಹಿತಿ ತಿಳಿಸಬೇಕು. ಅಂತಹ ವೇಳೆಯಲ್ಲಿ ಪೊಲೀಸರು ಬೀಗ ಹಾಕಿದ ಮನೆಗಳ ಮೇಲೆ ಕೇಂದ್ರೀಕೃತವಾದ ಕಣ್ಗಾವಲು ಇಡಲು ಅನುಕೂಲವಾಗುತ್ತದೆ. ಪೊಲೀಸರು ಇ–ಬೀಟ್ ವ್ಯವಸ್ಥೆಯನ್ನು ಬಳಸಿಕೊಂಡು ಠಾಣಾ ವ್ಯಾಪ್ತಿಯಲ್ಲಿನ ಬೀಗ ಹಾಕಿದ ಮನೆಗಳ ಕಡೆ ವ್ಯವಸ್ಥಿತ ಗಸ್ತು ನಡೆಸುವ ಮೂಲಕ, ಈ ಉಪಕ್ರಮವು ಮಾಲೀಕರಿಲ್ಲದ ಸಂದರ್ಭಗಳನ್ನು ಉಪಯೋಗಿಸಿಕೊಂಡು ಮಾಡಬಹುದಾದ ಕನ್ನ ಕಳವು ಅಪರಾಧಗಳನ್ನು ತಡೆದು ಮನೆಗಳಿಗೆ ಮಾಲೀಕರು ಹಿಂತಿರುಗುವವರೆಗೆ ಸುರಕ್ಷತೆಯನ್ನು ಒದಗಿಸುತ್ತದೆ.

ಲಾಕ್ಡ್ ಹೌಸ್ ಬೀಟ್ ಸಿಸ್ಟಮ್‌ಗೆ ನೋಡಲ್ ಅಧಿಕಾರಿಯನ್ನು ನೇಮಿಸಿದ್ದು, ಸಾರ್ವಜನಿಕರು ಈ ವ್ಯವಸ್ಥೆಯನ್ನು ಉಪಯೋಗಿಸಿಕೊಳ್ಳಲು ವಾಟ್ಸಪ್ ಮೊಬೈಲ್ ನಂ: 8277963743 ಅನ್ನು ಸಂರ್ಕಿಸಿ ತಮ್ಮ ಹೆಸರು, ವಿಳಾಸ, ಗೂಗಲ್ ಲೊಕೇಶನ್, ಮನೆಯಿಂದ ಹೊರ ಹೋಗಿ ಹಿಂತಿರುಗುವ ಅವಧಿ ಹಾಗೂ ಮೊಬೈಲ್ ಸಂಖ್ಯೆಯ ಮಾಹಿತಿ ನೀಡಬೇಕು. ಮೊಬೈಲ್ ಸಂಖ್ಯೆಯ ಜೊತೆಗೆ ಜಿಲ್ಲಾ ನಿಯಂತ್ರಣ ಕೊಠಡಿಯ ಮೊಬೈಲ್ ಸಂಖ್ಯೆ 9480802700 ನ್ನು ಸಂರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದು. ಈ ವ್ಯವಸ್ಥೆಯನ್ನು ಬಳಸಿಕೊಳ್ಳುವ ನಾಗರಿಕರ ಮಾಹಿತಿಯನ್ನು ಗೌಪ್ಯವಾಗಿಡಲಾಗುತ್ತದೆ ಎಂದು ಕೆ.ಜಿ.ಎಫ್. ಪೊಲೀಸ್ ಇಲಾಖೆ ತಿಳಿಸಿದೆ.

# ‘ಹಳ್ಳಿ ಜನರ ಪ್ರೋತ್ಸಾಹದಿಂದ ಜನಪದ ಕಲೆ ಜೀವಂತ’

ಬಳ್ಳಾರಿ

ಹಳ್ಳಿಯ ಜನರ ಪ್ರೋತ್ಸಾಹ, ಸಹಕಾರದಿಂದಲೇ ಇಂದಿಗೂ ಜನಪದ ಕಲೆ, ಸಂಸ್ಕೃತಿ ಜೀವಂತವಾಗಿ ಉಳಿಯಲು ಕಾರಣವಾಗಿದೆ. ಕಲೆಗಳ ಮೇಲಿನ ಅಭಿಮಾನ ಕಲಾವಿದರನ್ನು ಹುಟ್ಟುಹಾಕುವ, ಬೆಳೆಸುವ ಗುಣ ಇಂದಿಗೂ ಹಳ್ಳಿ ಜನರಲ್ಲಿದೆ. ಅವರಿಂದಾಗಿ ಉತ್ಸಾಹದಿಂದಲೇ ನಿರಂತರವಾಗಿ ಇಂತಹ ಸಂಸ್ಕೃತಿ ಕಾರ್ಯಕ್ರಮಗಳು ಜರುಗುತ್ತಿವೆ ಎಂದು ಕೆ.ಎಸ್. ಗಾದಿಲಿಂಗಪ್ಪ ಹೇಳಿದರು.

ತಾಲೂಕಿನ ಹುಲಕುಂದಿ ಗ್ರಾಮದಲ್ಲಿ ಶ್ರೀ ಮಾರುತಿ ತೊಗಲುಗೊಂಬೆ ಕಲಾ ಟ್ರಸ್ಟ್ ಬಳ್ಳಾರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ವಿಶೇಷ ಘಟಕ ಯೋಜನೆಡಿಯಲ್ಲಿ ಹಮ್ಮಿಕೊಂಡ ಗ್ರಾಮೀಣ ಸಾಂಸ್ಕೃತಿಕ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮದ ಶ್ರೀ ಈಶ್ವರ ದೇವಸ್ಥಾನ ಆವರಣದ ಬಯಲು ರಂಗ ಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಳ್ಳಾರಿಯ ಸಹಾಯಕ ನಿರ್ದೇಶಕ ಬಿ ನಾಗರಾಜ್, ಪ್ರತಿ ವರ್ಷ ಗ್ರಾಮೀಣ ಭಾಗದ ಕಲೆ ಸಂಸ್ಕೃತಿ ಸಾಹಿತ್ಯ ಹಾಗೂ ಎಲ್ಲಾ ಕಲಾಪ್ರಕಾರಗಳನ್ನು ಉಳಿಸುವ ಬೆಳೆಸುವ ನಿಟ್ಟಿನಲ್ಲಿ ಇಲಾಖೆಯು ಪ್ರತಿವರ್ಷ ಸಾಮಾನ್ಯ, ವಿಶೇಷ ಘಟಕ, ಗಿರಿಜನ ಯೋಜನೆ ಅಡಿಯಲ್ಲಿ ಸಂಘ ಸಂಸ್ಥೆಗಳಿಗೆ ಧನ ಸಹಾಯ ನೀಡುತ್ತಿದೆ. ಇದರಿಂದ ಸಂಘ ಸಂಸ್ಥೆಗಳನ್ನು ಪ್ರೋತ್ಸಾಹಿಸುತ್ತಾ ಕಲೆ ಸಂಸ್ಕೃತಿ ಬೆಳವಣಿಗೆಗೆ ಸಹಕಾರವಾಗಲಿವೆ ಎಂದರು.

ಬಳ್ಳಾರಿ ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷ ಯಲ್ಲನ ಗೌಡ ಶಂಕರ್‌ಬಂಡೆ, ಕಲೆ ಜನಪದ ಈ ನೆಲದ ಮೂಲ ಕಲೆಗಳಾಗಿವೆ. ಇವುಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಎಲ್ಲರಲ್ಲೂ ಒಂದಲ್ಲ ಒಂದು ರೀತಿಯ ಕಲೆ ಇರುತ್ತದೆ. ಅದನ್ನು ಸೂಕ್ತ ಸಮಯದಲ್ಲಿ ಗುರುತಿಸಿ ಪ್ರೋತ್ಸಾಹಿಸಿದಾಗ ಮಾತ್ರ ಒಳ್ಳೆ ಸಾಹಿತಿ, ಕಲಾವಿದ, ಸಂಗೀತಗಾರ, ಚಿತ್ರಕಲಾಕರ, ನಾಟಕಕಾರ ಉದಯಿಸಲು ಸಾಧ್ಯ. ಪೋಷಕರು ಮತ್ತು ಸಮಾಜದ ಜವಾಬ್ದಾರಿ ಇದ್ದು ಎಲ್ಲರೂ ಕಲೆ ಬಗ್ಗೆ ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸುವ ಕೆಲಸ ಮಾಡಬೇಕು. ಇದರಿಂದ ಮಕ್ಕಳು ಶೈಕ್ಷಣಿಕ ಜೊತೆಗೆ ಸಾಂಸ್ಕೃತಿಕವಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೆಚ್. ತಿಮ್ಮನಗೌಡ ವಹಿಸಿದ್ದರೆ, ಮುಖ್ಯ ಅತಿಥಿಗಳಾಗಿ ಎಚ್.ಆರ್ ಮಲ್ಲಿಕಾರ್ಜುನಗೌಡ, ಭೀಮರೆಡ್ಡಿ, ಚಂದ್ರಶೇಖರ್, ಕೇಶವ, ಪಿ.ಗವಿಸಿದ್ದಪ್ಪ, ಬಿ.ಎಂ ಪಾಟೀಲ್, ಯಲ್ಲಪ್ಪ ನಾಯಕ, ಕರ್ನಾಟಕ ಕಲಾಶ್ರೀ ಪ್ರಶಸ್ತಿ ಪುರಸ್ಕೃತ ಎಸ್. ಕೆ. ಜಿಲಾನಿ ಭಾಷಾ, ಬಯಲಾಟ ಅಕಾಡೆಮಿ ಮಾಜಿ ಸದಸ್ಯ ಹೆಚ್.ತಿಪ್ಪೇಸ್ವಾಮಿ ಹಾಗೂ ಊರಿನ ಹಿರಿಯ ಮುಖಂಡರು ಗ್ರಾಮ ಪಂಚಾಯತ್ ಮಾಜಿ ಸದಸ್ಯರು ಭಾಗವಹಿಸಿದ್ದರು.

ವೇದಿಕೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಜನಪದ ಗಾಯನ ಎಚ್.ಜಿ.ಸುಂಕಪ್ಪ ಎರಗುಡಿ ತಂಡ, ಸಮೂಹ ನೃತ್ಯ ಕುಮಾರಿ ಹೆಚ್. ಜೆ. ಸುಶ್ಮಿತಾ ಬಳ್ಳಾರಿ ತಂಡ, ಸುಗಮ ಸಂಗೀತ ದಳವಾಯಿ ಅಂಬಣ್ಣ ಸಿರುಗುಪ್ಪ ತಂಡ. ರಂಗಗೀತೆ ಅನ್ನಪೂರ್ಣ ಬಳ್ಳಾರಿ ತಂಡ ಮತ್ತು ಹಾಸ್ಯ ನಗೆ ನಾಟಕ ಹೆಚ್.ಹನುಮಂತಪ್ಪ ತಂಡದಿಂದ ದನ ಕಾಯೋರ ದೊಡ್ಡಾಟ ಎಂಬ ನಗೆ ನಾಟಕವು ನೆರೆದಿದ್ದ ಪ್ರೇಕ್ಷಕರನ್ನು ಹೊಟ್ಟೆ ಹುಣ್ಣಾಗಿಸುವಂತೆ ಮನರಂಜಿಸಿದವು.

ಶ್ರೀ ಮಾರುತಿ ತೊಗಲು ಗೊಂಬೆ ಕಲಾ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಸುಬ್ಬಣ್ಣ ನಿರ್ವಹಿಸಿದರೆ, ವೀರೇಶ್ ದಳವಾಯಿ ನಿರೂಪಿಸಿ, ಕಾರ್ಯಕ್ರಮ ನಡೆಸಿಕೊಟ್ಟರು.



# 'ಮಹಿಳೆಯರು ಸ್ವಾವಲಂಬಿಗಳಾಗಬೇಕು'



ವಿಜಯಪುರ

ಮಹಿಳೆಯರು ಕೌಶಲ್ಯಾಧಾರಿತ ತರಬೇತಿಗಳನ್ನು ಪಡೆದುಕೊಳ್ಳುವ ಮೂಲಕ, ಸಮಾಜದಲ್ಲಿ ಮುಖ್ಯವಾಹಿನಿಗೆ ಬಂದು ಸ್ವಾವಲಂಬಿಗಳಾಲು ಪ್ರಯತ್ನ ನಡೆಸಬೇಕು ಎಂದು ಭಾರತೀಯ ಉದ್ಯಮಶೀಲತಾ ಅಭಿವೃದ್ಧಿ ಸಂಸ್ಥೆಯ ಯೋಜನಾ ಸಂಯೋಜಕಿ ಲಲಿತ ಹೇಳಿದರು.

ಹೋಬಳಿಯ ಹಾರೋಹಳ್ಳಿ ಗ್ರಾಮದಲ್ಲಿ, ಮೈಕ್ರೋ ಸ್ಕಿಲ್ ಡೆವಲಪ್ಮೆಂಟ್ ಪ್ರೋಗ್ರಾಮ್ (ಭಾರತೀಯ ಉದ್ಯಮ ಶೀಲತಾ ಅಭಿವೃದ್ಧಿ ಸಂಸ್ಥೆ– ಇಡಿಐಐ, ಬೆಂಗಳೂರು ಇವರ ವತಿಯಿಂದ ಸ್ಟಾಂಡರ್ಡ್ ಚಾರ್ಟೆಡ್ ಬ್ಯಾಂಕ್ ನ ಸಹಯೋಗದಲ್ಲಿ ಆಯೋಜಿಸಿದ್ದ ಟೆರಾಕೋಟ ಜುವೇಲರಿ ಮೇಕಿಂಗ್ 20 ದಿನಗಳ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುರುಷ ಪ್ರಧಾನ ಸಮಾಜದಲ್ಲಿ, ಸಮಾಜದ ಏಳಿಗೆಯಲ್ಲಿ ಮಹಿಳೆಯರ ಪಾತ್ರವೂ ಸಿಂಹಪಾಲಿದೆ. ಆದರೂ, ತಮ್ಮಲ್ಲಿರುವ ಸಾಮರ್ಥ್ಯವನ್ನು ಗುರ್ತಿಸಿಕೊಳ್ಳದೆ ಮಹಿಳೆಯರು ಶೋಷಣೆ ಒಳಗಾಗುವಂತಹ ಪರಿಸ್ಥಿತಿ ಇದೆ. ಇಂದು ಸಮಾಜದಲ್ಲಿ ಬದುಕು ಕಟ್ಟಿಕೊಳ್ಳಲು ಹಲವಾರು ಮಾರ್ಗಗಳಿವೆ. ಅವುಗಳ ಬಗ್ಗೆ ಮಾಹಿತಿಯಿಲ್ಲದೆ, ಆರ್ಥಿಕವಾಗಿ, ಹಿಂದುಳಿಯುತ್ತಿದ್ದಾರೆ. ಮಹಿಳೆಯರು, ನಾಲ್ಕು ಗೋಡೆಗಳಿಗೆ ಸೀಮಿತವಾಗಬಾರದು, ಎಲ್ಲಾ ರಂಗಗಳಲ್ಲೂ ತನ್ನ ಛಾಪು ಮೂಡಿಸಬೇಕು. ತರಬೇತಿಯನ್ನು ಕಲಿತು ನಿಮ್ಮ ಕುಟುಂಬಗಳ ನಿರ್ವಹಣೆ ಮಾಡಿಕೊಳ್ಳುವಂತೆ ಮನವಿ ಮಾಡಿದರು.

ತಾಲೂಕು ಪಂಚಾಯತಿಯ ಕಾರ್ಯಕ್ರಮ ವ್ಯವಸ್ಥಾಪಕಿ ತನುಶ್ರೀ ಮಾತನಾಡಿ, ಜೀವನ ನಿರ್ವಹಣೆ ತುಂಬಾ ಕಷ್ಟಕರವಾಗಿದೆ. ಮಾಹಿತಿ ತಂತ್ರಜ್ಞಾನ ಹೆಚ್ಚಾದಂತೆಲ್ಲಾ, ಉದ್ಯೋಗ ಅವಕಾಶಗಳು ಕಡಿಮೆಯಾಗುತ್ತಿವೆ. ಪುರುಷರಷ್ಟೆ ಸಮಾನವಾಗಿ ದುಡಿಯುವ ಸ್ತ್ರೀಯರೂ ಸೇರಿದಂತೆ ಎಲ್ಲರೂ ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ. ಈ ನಿಟ್ಟಿನಲ್ಲಿ, ಮಹಿಳೆಯರು, ಹೆಣ್ಣು ಮಕ್ಕಳು, ವಯೋಮಿತಿಯ ತಾರತಮ್ಯವಿಲ್ಲದೆ, ಕೌಶಲ್ಯಾಧಾರಿತ ತರಬೇತಿಗಳನ್ನು ಪಡೆದುಕೊಂಡು ಜೀವನ ರೂಪಿಸಿಕೊಳ್ಳಬೇಕು ಎಂದರು.

ಗ್ರಾಮ ಪಂಚಾಯಿತಿ ಮಾಜಿ ಸದಸ್ಯೆ ಮಾಲ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿನ ಮಹಿಳೆಯರು, ತಾವು ಇರುವ ಜಾಗದಲ್ಲೆ ದುಡಿಮೆ ಮಾಡುವಂತಹ ಮಾರ್ಗೋಪಾಯಗಳನ್ನು ಕಂಡುಕೊಳ್ಳಬೇಕು. ಕುಟುಂಬದ ನಿರ್ವಹಣೆ, ಮಕ್ಕಳ ಪೋಷಣೆಯ ಜವಾಬ್ದಾರಿಯನ್ನೂ ಹೊತ್ತಿರುವ ನೀವು ಇಂತಹ ತರಬೇತಿಗಳನ್ನು ಸದುಪಯೋಗ ಮಾಡಿಕೊಳ್ಳಬೇಕು. ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಬೇಕು ಎಂದರು.

# ರಾಮಚಂದ್ರ.ಎಸ್ ಅವಿರೋಧ ಆಯ್ಕೆ

ಬೂದಿಕೋಟೆ

ಹೋಬಳಿಯ ಜೊತೆನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ರಾಮಚಂದ್ರ.ಎಸ್ ಹಾಗೂ ಉಪಾಧ್ಯಕ್ಷರಾಗಿ ಆನಂದ್.ಎಂ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಹೊಸದಾಗಿ ನಿರ್ಮಾಣಗೊಂಡಿರುವ ಸಂಘದ ಎಲ್ಲಾ ನಿರ್ದೇಶಕರುಗಳೂ ಸಹ ಈ ಹಿಂದೆ ಅವಿರೋಧವಾಗಿ ಆಯ್ಕೆಯಾಗಿದ್ದರು. ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಐದು ವರ್ಷದ ಅವಧಿಗೆ ಬುಧವಾರ ನಡೆದ ಪ್ರಕ್ರಿಯೆಯಲ್ಲಿ ಈ ಆಯ್ಕೆ ನಡೆದಿದ್ದು, ಚುನಾವಣಾ ಅಧಿಕಾರಿ ಬಾಲಕೃಷ್ಣಪ್ಪ ಅವರು ಅಧಿಕೃತವಾಗಿ ಘೋಷಿಸಿದರು.

ಅಧ್ಯಕ್ಷರಾಗಿ ಆಯ್ಕೆಯಾದ ರಾಮಚಂದ್ರ ಅವರು ಮಾತನಾಡಿ, ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರ ಪ್ರಯತ್ನದಿಂದ ಗ್ರಾಮಗಳಲ್ಲಿ ಹೊಸ ಹಾಲು ಡೈರಿಗಳನ್ನು ಆರಂಭಿಸಲು ಅವಕಾಶ ದೊರೆತಿದ್ದು, ಅದಕ್ಕೆ ಗ್ರಾಮಸ್ಥರ ಪರವಾಗಿ ಧನ್ಯವಾದ ಸಲ್ಲಿಸುತ್ತೇನೆ ಎಂದರು.



ಡೈರಿಯಲ್ಲಿ ಪಾರದರ್ಶಕ ಆಡಳಿತ ನಡೆಸಿ ಸರ್ಕಾರದಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ರೈತರಿಗೆ ತಲುಪಿಸುವಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುವುದಾಗಿ ಅವರು ಹೇಳಿದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ವೆಂಕಟೇಶ್, ಶ್ರೀಧರ್, ಯಲ್ಲೇಶ್, ಹರೀಶ್, ಶಾಂತಮ್ಮ, ಆಲಂಬಾಡಿ ಡೈರಿ ಅಧ್ಯಕ್ಷ ಸುರೇಶ್ ಹಾಗೂ ಮುಖಂಡರಾದ ಆನಂದ್, ರಾಮೇಗೌಡ, ಮುನಿಯಪ್ಪ, ಮುನಿಕೃಷ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶಿಕ್ಷಣಾಧಿಕಾರಿಗಳು, ದೈಹಿಕ ಶಿಕ್ಷಣಾಧಿಕಾರಿಗಳಿಗೆ ಸ್ವಾಗತ

ಕೋಲಾರ

ಕೋಲಾರ ತಾಲ್ಲೂಕು ನೂತನ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಉಮಾ ಹಾಗೂ ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿಗಳಾಗಿ ಅಧಿಕಾರ ವಹಿಸಿಕೊಂಡಿರುವ ಕೆ.ಲೀಲಾ ಅವರನ್ನು ತಾಲ್ಲೂಕು ದೈಹಿಕ ಶಿಕ್ಷಕರ ಸಂಘದ ಪದಾಧಿಕಾರಿಗಳು ಆತ್ಮೀಯವಾಗಿ ಸನ್ಮಾನಿಸಿ ಸ್ವಾಗತಿಸಿದರು.

ಸಂಘದ ಅಧ್ಯಕ್ಷ ಆರ್.ನಾಗರಾಜ್ ಮಾತನಾಡಿ, ಕೋಲಾರದವರೇ ಆಗಿರುವ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸ್ಥಳೀಯವಾಗಿ ಶಿಕ್ಷಣ ಇಲಾಖೆಯಲ್ಲಿ ಇರುವ ಸಮಸ್ಯೆಗಳ ಅರಿವಿದ್ದು, ಅತಿ ಸುಲಭವಾಗಿ ಶಾಲೆಗಳ ಸರ್ವಾಂಗೀಣ ಅಭಿವೃದ್ಧಿ ಹಾಗೂ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವರು ಎಂದರು.

ಅದೇ ರೀತಿ ಕೋಲಾರ ತಾಲ್ಲೂಕು ಅರಾಭಿಕೊತ್ತನೂರು ಪ್ರೌಢಶಾಲೆಯಲ್ಲಿ ದೈಹಿಕ ಶಿಕ್ಷಕರಾಗಿದ್ದು, ಪ್ರಾಮಾಣಿಕತೆ, ಸೇವಾ ಬದ್ದತೆಗೆ ಹೆಸರಾಗಿರುವ ಕೆ.ಲೀಲಾ ಅವರು ಇದೀಗ ಬಡ್ತಿ ಹೊಂದಿ ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿಗಳಾಗಿರುವುದು ನಮಗೆ ಹೆಮ್ಮೆ ತರುವ ವಿಷಯವಾಗಿದೆ ಎಂದು ತಿಳಿಸಿ ಇಬ್ಬರಿಗೂ ಸ್ವಾಗತ ಕೋರಿ ಶುಭ ಹಾರೈಸಿದರು.



ಈ ಸಂದರ್ಭದಲ್ಲಿ ದೈಹಿಕ ಶಿಕ್ಷಕರ ಸಂಘದ ತಾಲ್ಲೂಕು ಪದಾಧಿಕಾರಿಗಳಾದ ಅಬ್ದುಲ್ ಮನ್ನನ್, ಬಸವರಾಜ್ ಚಿಲಕಾಂತ ಮಠ್, ರವಿಕುಮಾರ್,ವಿಜಯ, ಸಂಗಮ್ಮ, ರತ್ನಮ್ಮ, ಬಬಿತಾ,ವೆಂಕಟೇಶ್,ಸಂತೋಷಕುಮಾರಿ,ವ್ಯಲಾ ಚಂದ್ರಶೇಖರ್ ಮತ್ತಿತರರಿದ್ದರು.

# 'ಪ್ರತಿಭೆ ಅನಾವರಣಕ್ಕೆ ವಾರ್ಷಿಕೋತ್ಸವ ಅಗತ್ಯ'



ರಾಮನಗರ

ವಾರ್ಷಿಕೋತ್ಸವ ಸಮಾರಂಭಗಳು ವಿದ್ಯಾರ್ಥಿಗಳ ಪ್ರತಿಭೆಗಳ ಅನಾವರಣಕ್ಕೆ ಮಹತ್ವದ ವೇದಿಕೆಯಾಗಿವೆ, ಶಿಕ್ಷಣದ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಸಾಮಾಜಿಕ ಜಾಗೃತಿಯ ಕಾರ್ಯಕ್ರಮಗಳು ಇಂದಿಗೆ ಅತ್ಯಂತ ಅಗತ್ಯ ಎಂದು ಬಮುಲ್ ಅಧ್ಯಕ್ಷರಾದ ಡಿ.ಕೆ. ಸುರೇಶ್ ಅವರು ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ಕನಕಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ವಾರ್ಷಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.

ಕಾಲೇಜಿನಲ್ಲಿ ನಡೆಯುವ ಈ ರೀತಿಯ ಸಮಾರಂಭಗಳು ವಿದ್ಯಾರ್ಥಿಗಳಲ್ಲಿರುವ ಸುಪ್ತ ಪ್ರತಿಭೆಗಳನ್ನು ಹೊರತೆಗೆದು, ಅವರಿಗೆ ಆತ್ಮವಿಶ್ವಾಸ ತುಂಬುತ್ತವೆ, ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಕಲೆ, ಸಾಹಿತ್ಯ, ಸಂಗೀತ, ನೃತ್ಯ, ಕ್ರೀಡೆ ಮತ್ತು ಸಾಮಾಜಿಕ ಸೇವಾ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವುದು ಸಂತಸದ ವಿಷಯವಾಗಿದೆ ಎಂದವರು ಹೇಳಿದರು.

ಹಿಂದಿನ ಕಾಲದಲ್ಲಿ ವಿದ್ಯಾರ್ಥಿಗಳಿಗೆ ಇಂದು ದೊರೆಯುವಂತಹ ಸೌಲಭ್ಯಗಳು ಇರಲಿಲ್ಲ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ಸಾಕಷ್ಟು ಕಷ್ಟಗಳನ್ನು ಅನುಭವಿಸಬೇಕಾಗುತ್ತಿತ್ತು. ಆದರೆ ಇಂದು ಸರ್ಕಾರ ಮತ್ತು ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಉಚಿತ ಶಿಕ್ಷಣ, ಡಿಜಿಟಲ್ ಸೌಲಭ್ಯಗಳು, ಗ್ರಂಥಾಲಯ, ಕ್ರೀಡಾ ಸೌಲಭ್ಯಗಳು ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗಳನ್ನು ಒದಗಿಸುತ್ತಿವೆ. ಇವುಗಳನ್ನು ಸಮರ್ಪಕವಾಗಿ ಬಳಸಿಕೊಂಡು ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ನಿರ್ಮಿಸಿಕೊಳ್ಳಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳಿಗೆ ಕೇವಲ ಅಂಕಗಳಿಗಾಗಿ ಮಾತ್ರ ಓದದೇ, ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು, ಸಮಾಜದ ಸಮಸ್ಯೆಗಳ ಬಗ್ಗೆ ಅರಿವು ಹೊಂದಿ, ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ನಾಗರಿಕರಾಗಬೇಕು ತಂತ್ರಜ್ಞಾನವನ್ನು ಸದುಪಯೋಗಪಡಿಸಿಕೊಂಡು ಹೊಸ ಸಾಧನೆಗಳನ್ನು ಮಾಡುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ, ಕ್ರೀಡಾ ಹಾಗೂ ವಿವಿಧ ಪ್ರತಿಭಾ ಪುರಸ್ಕಾರಗಳನ್ನು ವಿತರಿಸಲಾಯಿತು. ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ವಿಶೇಷ ಗೌರವ ನೀಡಿ ಅಭಿನಂದಿಸಲಾಯಿತು. ಕಾಲೇಜಿನ ವಿದ್ಯಾರ್ಥಿಗಳು ನೃತ್ಯ, ಸಂಗೀತ, ನಾಟಕ ಮತ್ತು ಜನಪದ ಕಲೆಯ ಮೂಲಕ ಪ್ರೇಕ್ಷಕರ ಮನಸೆಳೆದರು. ಕ್ರೀಡೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪದಕ ಮತ್ತು ಪ್ರಮಾಣಪತ್ರಗಳನ್ನು ನೀಡಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಕಾಲೇಜು ವಾರ್ಷಿಕ ಸಂಚಿಕೆ ಕನಕ ಸೌರಭ ಪರಿಚಯ ಕೈಪಿಡಿ ಗಳನ್ನು ಬಿಡುಗಡೆ ಮಾಡಲಾಯಿತು.

ಡಾ. ಶಾಮಲ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದರು. ಕಾಲೇಜು ಅಭಿವೃದ್ಧಿ ಮಂಡಳಿಯ ನಾರಾಯಣ, ಡಿ.ಎಂ. ವಿಶ್ವನಾಥ್, ಕೆ.ಎನ್. ದೀಲಿಪ್, ಹರೀಶ್ ಮುಂತಾದವರು ವೇದಿಕೆಯಲ್ಲಿದ್ದರು.

ವಿದ್ಯಾರ್ಥಿ ಸಂತೋಷ್ ಪ್ರಾರ್ಥಿಸಿದರು. ಪ್ರಾಧ್ಯಾಪಕ ಪ್ರಸನ್ನ ಕುಮಾರ್ ಸ್ವಾಗತಿಸಿದರು. ದೈಹಿಕ ಶಿಕ್ಷಣ ನಿರ್ದೇಶಕರಾದ ನಂಜುಂಡ ವಂದಿಸಿದರು.

# ಸಚಿವ ಕೆ.ಹೆಚ್.ಮುನಿಯಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನಕ್ಕೆ ಪರಿಗಣಿಸುವಂತೆ ಒತ್ತಾಯ

ವಿಜಯಪುರ

ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರೆ, ಅವರ ಸ್ಥಾನಕ್ಕೆ ಸಚಿವ ಕೆ.ಹೆಚ್.ಮುನಿಯಪ್ಪ ಅವರನ್ನು ಪರಿಗಣಿಸುವ ಮೂಲಕ ಮಾದಿಗ ಸಮುದಾಯಕ್ಕೆ ನ್ಯಾಯ ಒದಗಿಸಿಕೊಡಬೇಕು ಎಂದು ಮಾದಾರ ಮಹಾಸಭಾದ ದೇವನಹಳ್ಳಿ ತಾಲೂಕು ಅಧ್ಯಕ್ಷ ಎಂ.ನರಸಿಂಹಮೂರ್ತಿ ಒತ್ತಾಯಿಸಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಕಟ್ಟಾಳುವಾಗಿ, 7 ಬಾರಿ ಕೋಲಾರ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ, ಪ್ರಸ್ತುತ ರಾಜ್ಯ ಸರಕಾರದಲ್ಲಿ ಸಚಿವರಾಗಿರುವ ಕೆ.ಹೆಚ್.ಮುನಿಯಪ್ಪ ಅವರ ಕೊಡುಗೆ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಾಗಿದೆ. ಪಕ್ಷವು ಸಂಕಷ್ಟಕ್ಕೆ ಸಿಲುಕಿದ್ದ ಸಂದರ್ಭದಲ್ಲಿ ಪಕ್ಷ ಕಟ್ಟುವಂತಹ ಕೆಲಸ ಮಾಡಿದ್ದಾರೆ. ಪಕ್ಷದ ಹೈಕಮಾಂಡ್ ನಿಂದ ಕೊಟ್ಟಿರುವ ಹಲವಾರು ಚುನಾವಣಾ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿಭಾಯಿಸುವ ಮೂಲಕ ಹಲವು ರಾಜ್ಯಗಳಲ್ಲಿ ಪಕ್ಷವನ್ನು ಅಧಿಕಾರಕ್ಕೆ ನೆರವಾಗಿದ್ದಾರೆ. ರಾಜ್ಯದಲ್ಲಿಯೂ ಹಲವಾರು ತಾಲೂಕುಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸಲು ಕಾರಣರಾಗುವ ಮೂಲಕ ನಿಷ್ಠಾವಂತ ಕಾರ್ಯಕರ್ತನಾಗಿ ದುಡಿದ್ದಾರೆ.

ಕಾಂಗ್ರೆಸ್ ಪಕ್ಷವು, ಪರಿಶಿಷ್ಟ ಜಾತಿಯ ಎಡಗೈ ಸಮುದಾಯಕ್ಕೆ ಮುಖ್ಯಮಂತ್ರಿ ಸ್ಥಾನವನ್ನು ನೀಡುವ ಮೂಲಕ, ಶೋಷಿತ ಸಮಾಜಗಳ ಮೇಲಿನ ತನ್ನ ಪ್ರೀತಿಯನ್ನು ತೋರ್ಪಡಿಸಬೇಕಿದೆ ಎಂದು ಅವರು ಒತ್ತಾಯಿಸಿದರು.

# ನವಜಾತ ನೀರಾನೆ ಮರಿಗೆ ಡಾ.ಸಮೀಕ್ಷಾರೆಡ್ಡಿ ಹೆಸರಿಡಲು ಸೂಚನೆ

ಬೆಂಗಳೂರು

ಬನ್ನೇರುಘಟ್ಟ ಮೃಗಾಲಯದಲ್ಲಿ ನಿನ್ನೆ ರಾತ್ರಿ ಜನಿಸಿರುವ ನೀರಾನೆ ಮರಿಯ ಆರೋಗ್ಯದ ಬಗ್ಗೆ ತೀವ್ರ ಗಮನ ಹರಿಸಿ, ಈ ನವಜಾತ ನೀರಾನೆ ಮರಿ ಹೆಣ್ಣಾಗಿದ್ದಲ್ಲಿ ತ್ಯಾವರೆಕೊಪ್ಪ ಮೃಗಾಲಯದಲ್ಲಿ ವೈದ್ಯರಾಗಿದ್ದ ದಿವಂಗತ ಡಾ. ಸಮೀಕ್ಷಾ ರೆಡ್ಡಿ ಗೌರವಾರ್ಥ 'ಸಮೀಕ್ಷಾ' ಎಂದು ಹೆಸರಿಡಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.

ಬನ್ನೇರುಘಟ್ಟದಲ್ಲಿ 17 ವರ್ಷದ ದಶ್ಯ ನೀರಾನೆಯು ಮರಿಗೆ ಜನ್ಮ ನೀಡಿರುವ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಅವರು, ಕಳೆದ ಬಾರಿ ಇದೇ ನೀರಾನೆ ಜನ್ಮ ನೀಡಿದ್ದ ಮರಿ ಸೋಂಕಿನಿಂದ ಮೃತಪಟ್ಟಿತ್ತು. ಈ ನಿಟ್ಟಿನಲ್ಲಿ ಮರಿಯ ಆರೋಗ್ಯದ ಬಗ್ಗೆ ಸತತ ನಿಗಾ ಇಟ್ಟು, ಯಾವುದೇ ಸೋಂಕು ತಗುಲದಂತೆ ಕಟ್ಟು ನಿಟ್ಟಾಗಿ ಪ್ರಮಾಣಿತ ಕಾರ್ಯಾಚರಣೆ ಮಾನದಂಡಗಳನ್ನು ಅನುಸರಿಸಲು ಸಚಿವರು ನಿರ್ದೇಶಿಸಿದ್ದಾರೆ.

ಈ ನವಜಾತ ಮರಿಯ ಆರೋಗ್ಯದ ಖಾತ್ರಿ ಪಡಿಸಿಕೊಂಡು ಜೂನ್ 4ರಂದು ದಕ್ಷಿಣ ಆಫ್ರಿಕಾದಿಂದ ತರಲಾಗಿರುವ ಚೀತಾಗಳನ್ನು ಸಾರ್ವಜನಿಕ ವೀಕ್ಷಣಾ ಆವರಣಕ್ಕೆ ಬಿಡುವ ಸಂದರ್ಭದಲ್ಲಿ ಈ ಮರಿಗೆ ಸಮೀಕ್ಷಾ ಎಂದು ನಾಮಕರಣ ಮಾಡಲೂ ಸೂಚಿಸಿದ್ದಾರೆ.



ಶಿವಮೊಗ್ಗ ಬಳಿಯ ತ್ಯಾವರೆಕೊಪ್ಪ ಸಿಂಹಧಾಮದಲ್ಲಿ ಗರ್ಭಿಣಿಯಾಗಿದ್ದ ಹಂಸಿಣಿ ನೀರಾನೆ ಚಿಕಿತ್ಸೆಗೆ ತೆರಳಿದ್ದ ಯುವ ವೈದ್ಯೆ ಡಾ. ಸಮೀಕ್ಷಾ ರೆಡ್ಡಿ ಅವರ ಮೇಲೆ ನೀರಾನೆ ದಾಳಿ ಮಾಡಿತ್ತು. ಚಿಕಿತ್ಸೆ ಫಲ ಕಾಣದೆ ಅವರು ಮೃತಪಟ್ಟಿದ್ದರು.

ಆ ಸಂದರ್ಭದಲ್ಲಿ ಮೃತ ವೈದ್ಯೆಯ ಕುಟುಂಬದವರಿಗೆ ಸಾಂತ್ವನ ಹೇಳಲು ತೆರಳಿದ್ದ ಈಶ್ವರ ಖಂಡ್ರೆ ಅವರು ಒಂದು ನವಜಾತ ವನ್ಯಜೀವಿಗೆ ಸಮೀಕ್ಷಾ ಹೆಸರಿಡುವ ಪ್ರಸ್ತಾಪ ಮಾಡಿದ್ದರು. ಅದರಂತೆ ಇಂದು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಲಿಖಿತ ಆದೇಶ ನೀಡಿದ್ದಾರೆ.

# ಶ್ರಮಿಕ ವಸತಿ ಶಾಲೆ ಕಟ್ಟಡ ಸಮುಚ್ಚಯ ಶಂಕುಸ್ಥಾಪನೆ

ಬೆಂ.ಗ್ರಾ.ಜಿಲ್ಲೆ

ಜಿಲ್ಲೆಯ ಶ್ರಮಿಕ ವರ್ಗದವರ ಮಕ್ಕಳ ಶೈಕ್ಷಣಿಕಾಭಿವೃದ್ಧಿಗೆ ಶ್ರಮಿಕ ವಸತಿ ಶಾಲೆ ಸಹಕಾರಿಯಾಗಲಿದೆ ಎಂದು ಹೊಸಕೋಟೆ ಶಾಸಕರಾದ ಶರತ್ ಕುಮಾರ್ ಬಚ್ಚೆಗೌಡ ಅವರು ಅಭಿಪ್ರಾಯಪಟ್ಟರು.

ಹೊಸಕೋಟೆ ತಾಲೂಕಿನ ಬೇಗೂರು ಗ್ರಾಮದಲ್ಲಿ ಕಾರ್ಮಿಕ ಇಲಾಖೆ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಜಿಲ್ಲಾ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಶ್ರಮಿಕ ವಸತಿಶಾಲೆ ಕಟ್ಟಡ ಸಮುಚ್ಚಯದ ಶಂಕು ಸ್ಥಾಪನಾ ಕಾರ್ಯಕ್ರಮ ಹಾಗೂ ಅರ್ಹ ಕಟ್ಟಡ ಕಾರ್ಮಿಕ ಫಲಾನುಭವಿಗಳಿಗೆ ಸುರಕ್ಷತಾ ಕಿಟ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲೇ ಪ್ರಥಮವಾಗಿ ಗಿಗ್ ಕಾರ್ಮಿಕರ ರಕ್ಷಣೆಗಾಗಿ ನಮ್ಮ ರಾಜ್ಯ ಸರ್ಕಾರವು ಹೊಸ ಕಾನೂನು ಜಾರಿಗೆ ತಂದಿದೆ. ಜತೆಗೆ ಕಾರ್ಮಿಕರ ಕನಿಷ್ಠ ವೇತನವನ್ನು 60% ಏರಿಕೆ ಮಾಡಿ ಆದೇಶ ಮಾಡುವ ಮೂಲಕ ಕಾರ್ಮಿಕರಿಗೆ ವೇತನ ಭದ್ರತೆ ಒದಗಿಸಿದೆ ಎಂದರು.

10 ಎಕರೆ ಜಾಗದಲ್ಲಿ 35 ಕೋಟಿ ರೂ. ಅಂದಾಜು ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಶ್ರಮಿಕ ವಸತಿ ಶಾಲೆ ಕಟ್ಟಡ ಸಮುಚ್ಚಯ ಕಾಮಗಾರಿಯು ಮುಂದಿನ 15 ತಿಂಗಳೊಳಗೆ ಪೂರ್ಣಗೊಂಡ ಶ್ರಮಿಕರ ಮಕ್ಕಳಿಗೆ ಜ್ಞಾನಾರ್ಜನೆ ಮಾಡಲು ನೆರವಾಗಲಿದೆ ಎಂದು ಹೇಳಿದರು.



ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಲ್ಲಿ 32 ಸಾವಿರಕ್ಕೂ ಹೆಚ್ಚು ಅರ್ಹ ಕಾರ್ಮಿಕರಿಗೆ ಇಲಾಖೆಯ ವಿವಿಧ ಯೋಜನೆಗಳಡಿ ಸಹಾಯಧನ ಹಾಗೂ ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದರು.

ಕಾರ್ಮಿಕರ ಕಲ್ಯಾಣ ಮಂಡಳಿ ಜಂಟಿ ಕಾರ್ಯದರ್ಶಿ ಉಮೇಶ್ ಎ.ಹೆಚ್ ಅವರು ಮಾತನಾಡಿ, ಕಾರ್ಮಿಕರ ಮಕ್ಕಳಿಗೆ ಉತ್ಕೃಷ್ಟ ದರ್ಜೆಯ ಶಿಕ್ಷಣ ಸಿಗಬೇಕೆನ್ನುವ ಸದುದ್ದೇಶದಿಂದಾಗಿ ರಾಜ್ಯ ಸರ್ಕಾರವು ರಾಜ್ಯದ 31 ಜಿಲ್ಲೆಗಳಲ್ಲಿ ಶ್ರಮಿಕ ವಸತಿ ಶಾಲೆಗಳು ಸ್ಥಾಪಿಸುತ್ತಿದೆ.

ಕಾರ್ಮಿಕ ಇಲಾಖೆಯು ಶ್ರಮಿಕರ ಹಾಗೂ ಅವರ ಕುಟುಂಬದ ಶ್ರೇಯೋಭಿವೃದ್ಧಿಗಾಗಿ ಅಪಘಾತ ಪರಿಹಾರ, ಶೈಕ್ಷಣಿಕ ಸಹಾಯ ಧನ, ಹೆರಿಗೆ ಭತ್ಯೆ, ಪಿಂಚಣಿ ಸೇರಿದಂತೆ ಹಲವಾರು ಯೋಜನೆ ಜಾರಿಗೆ ತಂದಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಇಲಾಖೆಯಿಂದ ಕಾರ್ಮಿಕರಿಗೆ ಮದುವೆ ಸಹಾಯ ಧನವಾಗಿ 60 ಸಾವಿರ, ಅನುಗ್ರಹ ರಾಶಿ ಯೋಜನೆಯಡಿ ಅಂತಿಮ ಸಂಸ್ಕಾರಕ್ಕೆ 1.50 ಲಕ್ಷ ಸಹಾಯಧನ, ಸುರಕ್ಷತಾ ಕಿಟ್, ತ್ರಿಚಕ್ರ ವಾಹನ ವಿತರಣೆ ಸೇರಿದಂತೆ ಇಲಾಖೆ ಸೌಲಭ್ಯ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಬಮೂಲ್ ನಿರ್ದೇಶಕ ಸತೀಶ್ ಗೌಡ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಬಚ್ಚೆಗೌಡ, ಕಾರ್ಮಿಕ ಕಲ್ಯಾಣ ಮಂಡಳಿ ಸದಸ್ಯರಾದ ಶ್ರೀಯಾನ್ಸ್ ಕುಮಾರ್ ಜೈನ್, ಹೆಚ್.ಜಿ ರಮೇಶ್, ಜಾನಿ ಕೆ.ಪಿ, ಜಯಲಕ್ಷ್ಮೀ, ಜಿಲ್ಲಾ ಕಾರ್ಮಿಕ ಅಧಿಕಾರಿಯಾದ ಮುಕ್ಕುಂದ ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# 30ರಂದು ಕೌನ್ಸೆಲಿಂಗ್

ರಾಮನಗರ

2026–27ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಉನ್ನತೀಕರಿಸಿದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಮತ್ತು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಕಾಲೇಜು/ಮೊರಾರ್ಜಿ ದೇಸಾಯಿ ಪದವಿ ಪೂರ್ವ ಮಹಿಳಾ ವಸತಿ ಕಾಲೇಜುಗಳಿಗೆ ಪ್ರಥಮ ಪದವಿ ಪೂರ್ವ ತರಗತಿಯ ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಕಾಲೇಜುವಾರು ಮತ್ತು ಕೋರ್ಸುವಾರು ಸೀಟುಗಳನ್ನು ಹಂಚಿಕೆ ಮಾಡಲು ಮೇ 30ರ ಬೆಳಿಗ್ಗೆ 10 ಗಂಟೆಗೆ ರಾಮನಗರ ಟೌನಿನ ಪಿ.ಎಸ್.ವಿ ನಗರದ ಮೊರಾರ್ಜಿ ದೇಸಾಯಿ ಮಹಿಳಾ ಪದವಿ ಪೂರ್ವ ವಸತಿ ಕಾಲೇಜಿನಲ್ಲಿ ಕೌನ್ಸೆಲಿಂಗ್ ನಿಗದಿಪಡಿಸಲಾಗಿದೆ. ಅರ್ಜಿ ಸಲ್ಲಿಸಿರುವ ಎಲ್ಲಾ ವಿದ್ಯಾರ್ಥಿಗಳು ತಪ್ಪದೇ ಕಡ್ಡಾಯವಾಗಿ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೊಠಡಿ ಸಂಖ್ಯೆ:308 ಕಂದಾಯಭವನ ರಾಮನಗರ, ಇಲ್ಲಿ ಕಚೇರಿಯ ವೇಳೆಯಲ್ಲಿ ಖುದ್ದು ಸಂಪರ್ಕಿಸಬಹುದು ಅಥವಾ ದೂರವಾಣಿ ಸಂಖ್ಯೆ: 080–27271104 ಅಥವಾ ಮಾಹಿತಿ ಕೇಂದ್ರದ ಸಿಬ್ಬಂದಿಗಳ ದೂರವಾಣಿ ಸಂಖ್ಯೆ 9880297132, 7795757850, 9740334348 ಮತ್ತು 8197514161 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ ಕಾರ್ಮಿಕ ರಹಿತ ಜಿಲ್ಲೆಯನ್ನಾಗಿ ಮಾಡಲು ಅಗತ್ಯ ಕ್ರಮಕ್ಕೆ ಸೂಚನೆ

ರಾಮನಗರ

ಜಿಲ್ಲೆಯಲ್ಲಿ ಬಾಲ ಕಾರ್ಮಿಕರು ಕಂಡುಬರುವ ಸ್ಥಳಗಳಲ್ಲಿ ಕಾರ್ಮಿಕ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಅನಿರೀಕ್ಷಿತ ದಾಳಿ ನಡೆಸಿ ಬೆಂಗಳೂರು ದಕ್ಷಿಣ ಜಿಲ್ಲೆಯನ್ನು ಬಾಲ ಕಾರ್ಮಿಕ ರಹಿತ ಜಿಲ್ಲೆಯನ್ನಾಗಿ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಅವರು ಮೇ. 27ರ ಬುಧವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹೋಟೆಲ್‌ಗಳು, ಇಟ್ಟಿಗೆ ಗೂಡುಗಳು ಸೇರಿದಂತೆ ವಿವಿಡೆಡೆ ಬಾಲ ಕಾರ್ಮಿಕರು ಕಂಡು ಬರುತ್ತಾರೆ. ಇಂತಹ ಸಂದರ್ಭದಲ್ಲಿ ಅನಿರೀಕ್ಷಿತವಾಗಿ ತಪಾಸಣೆ ನಡೆಸಿ ಬಾಲ ಕಾರ್ಮಿಕರನ್ನು ರಕ್ಷಿಸಿ ಅವರಿಗೆ ಶಿಕ್ಷಣ ಕೊಡಿಸುವ ಕೆಲಸವನ್ನು ಮಾಡಬೇಕು. ಈ ದಾಳಿಯನ್ನು ನಿಯಮಿತವಾಗಿ ತಪ್ಪದೇ ನಡೆಸುವಂತೆ ಸೂಚಿಸಿದ ಅಪರ ಜಿಲ್ಲಾಧಿಕಾರಿಗಳು ಜೂನ್ 12ರಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನ ಕಾರ್ಯಕ್ರಮದ ಆಚರಣೆಯನ್ನು ಮಾಡಲು ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಹಾಗೂ ನಗರದ ಜಿಲ್ಲಾ ಕ್ರೀಡಾಂಗಣದಿಂದ ಜಿಲ್ಲಾ ಪಂಚಾಯತ್ ವರೆಗೆ ಜಾಥಾವನ್ನು ಹಮ್ಮಿಕೊಳ್ಳುವಂತೆ ತಿಳಿಸಿದ ಅವರು ಜಾಥಾದಲ್ಲಿ ಎನ್‌ಎಸ್‌ಎಸ್ ಹಾಗೂ ಎನ್‌ಸಿಸಿ ಘಟಕಗಳ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಳ್ಳುವಂತೆ ತಿಳಿಸಿದರು.

ಜೂನ್ 12ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರು ತಮ್ಮ ಕಚೇರಿಯಲ್ಲಿ ಹಾಗೂ ಶಾಲಾ ಕಾಲೇಜುಗಳು, ಜಿಲ್ಲೆಯ ಎಲ್ಲಾ ಗ್ರಾಮಾಂತರ ಪ್ರದೇಶಗಳಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರುದ್ಧ ಪ್ರತಿಜ್ಞಾ ವಿಧಿ ಸ್ವೀಕರಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಕಾವೇರಿ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಆಕಾಶಏರ್ ವಿಮಾನ ತುರ್ತು ಲ್ಯಾಂಡಿಂಗ್

ಲಕ್ನೋ


ಬೆಂಗಳೂರಿನಿಂದ ಭುವನೇಶ್ವರಕ್ಕೆ ಹೊರಟಿದ್ದ ಆಕಾಶ ಏರ್ ಇಂಡಿಯಾ ಲಕ್ನೋದಲ್ಲಿ ಎಮರ್ಜೆನ್ಸಿ ಲ್ಯಾಂಡ್ ಆಗಿದೆ. ಭುವನೇಶ್ವರದಲ್ಲಿ ಹವಾಮಾನ ವ್ಯತ್ಯಯ ಹಿನ್ನೆಲೆಯಲ್ಲಿ ಲಕ್ನೋದಲ್ಲಿ ಲ್ಯಾಂಡಿಂಗ್ ಮಾಡಲಾಗಿದೆ.

2026ರ ಮೇ 27 ರಂದು ಬೆಂಗಳೂರಿನಿಂದ ಭುವನೇಶ್ವರಕ್ಕೆ ಹೊರಟಿದ್ದ ಅಕಾಶ ಏರ್ ವಿಮಾನ ಅನ್ನು ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಿಂದಾಗಿ ಲಕ್ನೋದಲ್ಲಿ ಸುರಕ್ಷಿತವಾಗಿ ಇಳಿಸಲಾಯಿತು. ಭುವನೇಶ್ವರದಲ್ಲಿ ವಿಮಾನ ಇಳಿಯಲು ಅನುಕೂಲಕರವಾಗಿರಲಿಲ್ಲ. ಪೈಲಟ್ ಪ್ರಮಾಣಿತ ಕಾರ್ಯವಿಧಾನಗಳಿಗೆ ಅನುಗುಣವಾಗಿ ಎಲ್ಲಾ ಸ್ಥಾಪಿತ ಕಾರ್ಯಾಚರಣೆ ಮತ್ತು ಸುರಕ್ಷತಾ ಪ್ರೋಟೋಕಾಲ್‌ಗಳನ್ನು ಅನುಸರಿಸಿದರು ಎಂದು ಆಕಾಶ ಏರ್ ವಕ್ತಾರರು ತಿಳಿಸಿದ್ದಾರೆ.

ವಿಮಾನವು ನಂತರ ಲಕ್ನೋದಿಂದ ಹೊರಟು ಇಂದು ಮುಂಜಾನೆ ಭುವನೇಶ್ವರಲ್ಲಿ ಇಳಿಯಿತು. ಪ್ರಯಾಣಿಕರು ಮತ್ತು ಸಿಬ್ಬಂದಿಯ ಯೋಗಕ್ಷೇಮವು ನಮ್ಮ ಪ್ರಮುಖ ಆದ್ಯತೆ ಭುವನೇಶ್ವರದಲ್ಲಿ ವಿಮಾನ ಇಳಿಯಲು ಅನುಕೂಲಕರವಾಗಿರಲಿಲ್ಲ. ಪೈಲಟ್ ಪ್ರಮಾಣಿತ ಕಾರ್ಯವಿಧಾನಗಳಿಗೆ ಅನುಗುಣವಾಗಿ ಎಲ್ಲಾ ಸ್ಥಾಪಿತ ಕಾರ್ಯಾಚರಣೆ ಮತ್ತು ಸುರಕ್ಷತಾ ಪ್ರೋಟೋಕಾಲ್‌ಗಳನ್ನು ಅನುಸರಿಸಿದರು ಎಂದು ವಿಮಾನಯಾನ ಸಂಸ್ಥೆ ಹೇಳಿದೆ.

ಏತನ್ಮಧ್ಯೆ, ಮಂಗಳವಾರ ಬೆಂಗಳೂರಿನಿಂದ ಚೆನ್ನೈಗೆ ಹಾರಾಟ ನಡೆಸುತ್ತಿದ್ದ ಇಂಡಿಗೋ ವಿಮಾನದಲ್ಲಿ ಹೊಗೆ ಕಾಣಿಸಿಕೊಂಡಿತ್ತು. ತಕ್ಷಣ ವಿಮಾನದಲ್ಲಿದ್ದ ಪ್ರಯಾಣಿಕರನ್ನು ಸುರಕ್ಷಿತವಾಗಿ ಸ್ಥಳಾಂತರಿಸಲಾಯಿತು.

# ಬಿಜೆಪಿ ವಿರುದ್ಧ ವಾಗ್ದಾಳಿ



ತುಮಕೂರು

ಜವಹರಲಾಲ್ ನೆಹರು ಅವರ ರಾಜಕೀಯ ಮತ್ತು ವಿದೇಶಾಂಗ ನೀತಿಗಳು ಇಡೀ ವಿಶ್ವಕ್ಕೆ ಮಾದರಿಯಾಗಿವೆ ಎಂದು ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಕೆಂಚಮಾರಯ್ಯ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಡಿಸಿಸಿ ಅಧ್ಯಕ್ಷ ಜಿ.ಚಂದ್ರಶೇಖರಗೌಡ ಅವರ ಅಧ್ಯಕ್ಷತೆಯಲ್ಲಿ ನಡೆದ ನೆಹರು ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನೆಹರು ರೂಪಿಸಿದ ಅಲಿಪ್ತ ನೀತಿಗಳನ್ನು ವಿಶ್ವವೇ ಮೆಚ್ಚಿಕೊಂಡಿದ್ದು, ಅವರನ್ನು ಶಾಂತಿಯ ದೂತನೆಂದು ಕೊಂಡಾಡಲಾಗಿದೆ ಎಂದರು.

ಸ್ವಾತಂತ್ರ್ಯ ನಂತರ ದೇಶದ ಸಾಕ್ಷರತೆ ಪ್ರಮಾಣ ಕೇವಲ ಶೇ.14 ಇದ್ದ ಸಂದರ್ಭದಲ್ಲಿ ಪಂಚವಾರ್ಷಿಕ ಯೋಜನೆಗಳ ಮೂಲಕ ಶಿಕ್ಷಣ, ಕೈಗಾರಿಕೆ, ಉದ್ಯೋಗ ಮತ್ತು ಕೃಷಿಗೆ ಭದ್ರ ಅಡಿಪಾಯ ಹಾಕಿದವರು ನೆಹರು ಎಂದು ಹೇಳಿದರು. ದೇಶದಲ್ಲಿ ಡ್ಯಾಂಗಳ ಸಂಖ್ಯೆಯನ್ನು 23ರಿಂದ 5000ಕ್ಕೆ ಹೆಚ್ಚಿಸುವ ಮೂಲಕ ನೀರಾವರಿ ಅಭಿವೃದ್ಧಿಗೆ ಉತ್ತೇಜನ ನೀಡಿ ಆಹಾರದಲ್ಲಿ ಸ್ವಾವಲಂಬನೆ ಸಾಧಿಸಲು ನೆರವಾದರು ಎಂದು ವಿವರಿಸಿದರು.

ನೆಹರು ಕುಟುಂಬ ದೇಶದ ಸ್ವಾತಂತ್ರ್ಯ ಮತ್ತು ಅಭಿವೃದ್ಧಿಗಾಗಿ ತಮ್ಮ ಜೀವನವನ್ನೇ ಅರ್ಪಿಸಿದೆ ಎಂದು ಅವರು ಹೇಳಿದರು. ನೆಹರು ತಂದೆ ಮೋತಿಲಾಲ್ ನೆಹರು ದೆಹಲಿ ಮತ್ತು ಅಹಮದಾಬಾದ್‌ನಲ್ಲಿ ಹೊಂದಿದ್ದ ಸಾವಿರಾರು ಏಕರೆ ಭೂಮಿಯನ್ನು ಸರ್ಕಾರಕ್ಕೆ ದಾನ ಮಾಡಿದ ವಿಚಾರವನ್ನು ಅವರು ಸ್ಮರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಕೆಂಚಮಾರಯ್ಯ, ದೇಶದ ಪ್ರಗತಿಗೆ ನೆಹರು ನೀಡಿದ ಕೊಡುಗೆಗಳನ್ನು ಮರೆತು ಇಂದು ಎಲ್ಲ ಸಮಸ್ಯೆಗಳಿಗೆ ಅವರನ್ನು ಹೊಣೆ ಮಾಡುತ್ತಿರುವುದು ವಿಷಾದನೀಯ ಎಂದರು. ರಾಹುಲ್ ಗಾಂಧಿ ಅವರ ಕೈ ಬಲಪಡಿಸುವ ಮೂಲಕ ದೇಶವನ್ನು ರಕ್ಷಿಸಬೇಕೆಂದು ಕಾರ್ಯಕರ್ತರಿಗೆ ಕರೆ ನೀಡಿದರು.

ಮಾಜಿ ಶಾಸಕ ಡಾ.ಎಸ್. ಷಫಿ ಅಹಮದ್ ಮಾತನಾಡಿ, ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಇತಿಹಾಸವನ್ನು ಅರಿತುಕೊಳ್ಳುವುದು ಅಗತ್ಯವಿದೆ ಎಂದರು. ಎಸ್‌ಐಆರ್ ಪ್ರಕ್ರಿಯೆಯ ಮೂಲಕ ಕಾಂಗ್ರೆಸ್ ಪರಂಪರ ಮತಗಳಿಗೆ ಧಕ್ಕೆಯಾಗುವ ಸಾಧ್ಯತೆ ಇರುವುದರಿಂದ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಜೊತೆಗೆ, ರಾಜ್ಯ ಗೃಹ ಸಚಿವರಾದ ಜಿ. ಪರಮೇಶ್ವರ್ ಅವರನ್ನು ಮುಖ್ಯಮಂತ್ರಿಯಾಗಿ ಮಾಡುವಂತೆ ಜಿಲ್ಲಾ ಕಾಂಗ್ರೆಸ್ ನಿರ್ಣಯ ಕೈಗೊಳ್ಳಬೇಕೆಂದು ಸಲಹೆ ನೀಡಿದರು.

ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಇಕ್ಬಾಲ್ ಅಹಮದ್ ಮಾತನಾಡಿ, ನೆಹರು ಕುಟುಂಬ ದೇಶಪ್ರೇಮಕ್ಕೆ ಪ್ರತೀಕವಾಗಿದೆ ಎಂದರು. ಐಐಎಸ್‌ಸಿ, ಬಿಎಚ್‌ಇಎಲ್ ಸೇರಿದಂತೆ ನವರತ್ನ ಕಂಪನಿಗಳನ್ನು ಸ್ಥಾಪಿಸಿ ದೇಶವನ್ನು ಅಭಿವೃದ್ಧಿಯ ದಿಕ್ಕಿನಲ್ಲಿ ಮುನ್ನಡೆಸಿದವರು ನೆಹರು ಎಂದು ಹೇಳಿದರು. ಎಸ್‌ಐಆರ್ ವಿಚಾರವಾಗಿ ಪ್ರತಿಯೊಬ್ಬ ಮತದಾರರ ಹಕ್ಕು ರಕ್ಷಣೆಗಾಗಿ ಕಾರ್ಯಕರ್ತರು ಸಜಾಗರಾಗಬೇಕು ಎಂದು ಕರೆ ನೀಡಿದರು.

ಎಸ್ಸಿ ಘಟಕದ ಉಪಾಧ್ಯಕ್ಷ ಹೆಚ್.ಸಿ. ಹನುಮಂತಯ್ಯ ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಕಾಂಗ್ರೆಸ್ ಪಾತ್ರ ಮಹತ್ತರವಾಗಿದೆ ಎಂದರು. ನೆಹರು ಅವರ ಅವಹೇಳನವನ್ನು ಸಹಿಸಲು ಸಾಧ್ಯವಿಲ್ಲ ಎಂದು ಬಿಜೆಪಿ ವಿರುದ್ಧ ತಿರುಗೇಟು ನೀಡಿದರು.

# 30ರಂದು ಕೋಲಾರದಲ್ಲಿ ಕಾರ್ಮಿಕರ ಪ್ರತಿಭಟನೆ

ಕೋಲಾರ

ಕಾರ್ಮಿಕರ ಕನಿಷ್ಠ ವೇತನವನ್ನು ತಿಂಗಳಿಗೆ –36 ಸಾವಿರಕ್ಕೆ ಹೆಚ್ಚಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟು ಮೇ 30ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಸಿಐಟಿಯು ಜಿಲ್ಲಾ ಘಟಕದ ಉಪಾಧ್ಯಕ್ಷ ಗಾಂಧಿನಗರ ನಾರಾಯಣಸ್ವಾಮಿ ತಿಳಿಸಿದ್ದಾರೆ.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶವು ಗಂಭೀರ ಸಾಮಾಜಿಕ ಹಾಗೂ ಆರ್ಥಿಕ ಬಿಕ್ಕಟ್ಟನ್ನು ಎದುರಿಸುತ್ತಿದ್ದು, ಕೇಂದ್ರ ಸರ್ಕಾರದ ಆರ್ಥಿಕ ನೀತಿಗಳ ಪರಿಣಾಮ ಉತ್ಪಾದನಾ ವಲಯ ಕುಸಿತ ಕಂಡಿದೆ ಎಂದು ಆರೋಪಿಸಿದರು. ನಿರುದ್ಯೋಗ ಸಮಸ್ಯೆ ಹೆಚ್ಚುತ್ತಿರುವ ನಡುವೆಯೇ ದೇಶದ ಆರ್ಥಿಕತೆ ಅಭಿವೃದ್ಧಿಯ ಹಾದಿಯಲ್ಲಿದೆ ಎಂಬ ಸರ್ಕಾರದ ವಾದ ವಾಸ್ತವಕ್ಕೆ ದೂರವಾಗಿದೆ ಎಂದು ಟೀಕಿಸಿದರು.

ದೇಶದ ಒಟ್ಟು ಸಂಪತ್ತಿನ ಬಹುಪಾಲು ಕೆಲವೇ ಶ್ರೀಮಂತರ ಕೈಯಲ್ಲಿ ಕೇಂದ್ರೀಕೃತವಾಗಿದ್ದು, ಉನ್ನತ ಶಿಕ್ಷಣ ಪಡೆದ ಯುವಕರಿಗೂ ಸಮರ್ಪಕ ಸಂಬಳ ಸಿಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕನಿಷ್ಠ ವೇತನ ಹೆಚ್ಚಳಕ್ಕಾಗಿ ಜಿಲ್ಲೆಯಾದ್ಯಂತ ಸಾರ್ವಜನಿಕರಿಂದ ಸಹಿ ಸಂಗ್ರಹ ನಡೆಸಲಾಗಿದೆ ಎಂದು ತಿಳಿಸಿದರು.

ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ. ವಿಜಯಕೃಷ್ಣ ಮಾತನಾಡಿ, ಗುತ್ತಿಗೆ ಪದ್ಧತಿ ರದ್ದುಪಡಿಸಿ ಸಮಾನ ಕೆಲಸಕ್ಕೆ ಸಮಾನ ವೇತನ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು. ಪ್ರತಿಯೊಬ್ಬ ಕಾರ್ಮಿಕನಿಗೂ ವಸತಿ ಸೌಲಭ್ಯ ಒದಗಿಸಬೇಕು ಹಾಗೂ ಶಿಕ್ಷಣ, ಆರೋಗ್ಯ ಸೇರಿದಂತೆ ಸಾರ್ವಜನಿಕ ಸೇವೆಗಳ ಖಾಸಗೀಕರಣವನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಸರ್ಕಾರ ಕಾರ್ಮಿಕರ ಪರ ನೀತಿಗಳನ್ನು ಜಾರಿಗೆ ತರಲು ವಿಳಂಬ ಮಾಡುತ್ತಿದ್ದು, ಬಂಡವಾಳಶಾಹಿ ಪರ ಧೋರಣೆಯನ್ನು ಅನುಸರಿಸುತ್ತಿದೆ ಎಂದು ಆರೋಪಿಸಿದರು. ಗಾರ್ಮೆಂಟ್ಸ್ ಕಾರ್ಮಿಕರು ಮತ್ತು ಅಂಗನವಾಡಿ ನೌಕರರನ್ನು ಕಾಯಿದೆಯ ಒಳಗೆ ತರಬೇಕೆಂಬ ಬೇಡಿಕೆಯನ್ನು ಕೂಡ ಮುಂದಿಟ್ಟರು.

ಮೇ 30ರವರೆಗೆ ಸರ್ಕಾರಕ್ಕೆ ಗಡುವು ನೀಡಲಾಗಿದ್ದು, ಬೇಡಿಕೆಗಳು ಈಡೇರದಿದ್ದರೆ ರಾಜ್ಯಾದ್ಯಂತ ದೊಡ್ಡ ಮಟ್ಟದ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಖಜಾಂಚಿ ಹೆಚ್.ಬಿ. ಕೃಷ್ಣಪ್ಪ, ಉಪಾಧ್ಯಕ್ಷರಾದ ಬಿ.ಎಲ್. ಕೇಶವರಾವ್, ಅಂಜಲಮ್ಮ ಹಾಗೂ ಕಾರ್ಯದರ್ಶಿ ಎಂ. ಭೀಮರಾಜ್ ಉಪಸ್ಥಿತರಿದ್ದರು.

# ಉಚಿತ ಯೋಗ, ಪ್ರಾಣಾಯಾಮ ಹಾಗೂ ಧ್ಯಾನ ಶಿಬಿರ

ತಿಪಟೂರು

ಶ್ರೀ ನೇತಾಜಿ ಯೋಗ ಶಿಕ್ಷಣ ಮತ್ತು ಸಾಂಸ್ಕೃತಿಕ ಟ್ರಸ್ಟ್ ಹಾಗೂ ಶ್ರೀ ನೇತಾಜಿ ಪತ್ತಿನ ಸಹಕಾರ ಸಂಘ ಸಹಯೋಗದಲ್ಲಿ ನಗರದಲ್ಲಿ 30 ದಿನಗಳ ಕಾಲ ಉಚಿತ ಯೋಗಾಸನ, ಪ್ರಾಣಾಯಾಮ ಮತ್ತು ಧ್ಯಾನ ಶಿಬಿರವನ್ನು ಆಯೋಜಿಸಲಾಗಿದೆ.

ಈ ಶಿಬಿರವು ಜೂನ್ 1ರಿಂದ ಆರಂಭವಾಗಿ 30ರವರೆಗೆ ಪ್ರತಿದಿನ ಬೆಳಿಗ್ಗೆ 5.30 ರಿಂದ 7 ಗಂಟೆಯವರೆಗೆ ನಗರದ ನೇತಾಜಿ ಸಹಕಾರಿಯ ಭವನದ ಸಭಾಂಗಣದಲ್ಲಿ ನಡೆಯಲಿದೆ.

ಟ್ರಸ್ಟ್ ಅಧ್ಯಕ್ಷ ಕೆ.ಎಂ. ರಾಜಣ್ಣ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಆಹಾರ ಪದ್ಧತಿ ಮತ್ತು ಜೀವನಶೈಲಿಯ ಬದಲಾವಣೆಯಿಂದ ಬಿಪಿ, ಶುಗರ್, ಕೀಲು ನೋವು, ಶ್ವಾಸಕೋಶ, ಹೃದಯ ಸಂಬಂಧಿ ಸಮಸ್ಯೆಗಳು ಹಾಗೂ ಮೂತ್ರಪಿಂಡ ಕಾಯಿಲೆಗಳು ಹೆಚ್ಚುತ್ತಿವೆ ಎಂದು ಹೇಳಿದರು. ಜೊತೆಗೆ ಮಾನಸಿಕ ಒತ್ತಡವೂ ಹೆಚ್ಚುತ್ತಿರುವುದರಿಂದ ಯೋಗಾಭ್ಯಾಸ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.

ಯೋಗವು ದೇಹ ಮತ್ತು ಮನಸ್ಸಿಗೆ ಉತ್ತಮ ವ್ಯಾಯಾಮವಾಗಿದ್ದು, ಆರೋಗ್ಯಕರ ಜೀವನಕ್ಕೆ ಸಹಾಯಕವಾಗಿದೆ ಎಂದು ಅವರು ಹೇಳಿದರು. ನಗರ ಹಾಗೂ ತಾಲೂಕಿನ ಸಾರ್ವಜನಿಕರು ಈ ಉಚಿತ ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

# ನಗರದಲ್ಲಿ ಜೆಡಿಎಸ್ ಬಲವರ್ಧನೆಗೆ ಕಾರ್ಯತಂತ್ರ

ತುಮಕೂರು

ನಗರದ ಎಲ್ಲಾ 35 ವಾರ್ಡ್‌ಗಳ ಸಮಿತಿಯನ್ನು ರಚನೆ ಮಾಡಿ, ನಗರದಲ್ಲಿ ಪಕ್ಷವನ್ನು ಬಲಿಷ್ಠವಾಗಿ ಸಂಘಟನೆ ಮಾಡಿ ಮುಂಬರುವ ಮಹಾನಗರಪಾಲಿಕೆ ಚುನಾವಣೆಯಲ್ಲಿ ಜೆಡಿಎಸ್ ಹೆಚ್ಚು ಸ್ಥಾನ ಪಡೆಯಲು ಗುರಿ ಹೊಂದಲಾಗಿದೆ. ಸಮಿತಿ ಪದಾಧಿಕಾರಿಗಳು ಹಾಗೂ ಮುಖಂಡರು ಈ ಕಾರ್ಯದಲ್ಲಿ ಕೈಜೋಡಿಸಿ ಕಾರ್ಯತಂತ್ರ ರೂಪಿಸಬೇಕು ಎಂದು ಜೆಡಿಎಸ್ ನಗರ ಘಟಕ ಅಧ್ಯಕ್ಷ ಟಿ.ಹೆಚ್. ಜಯರಾಮ್ ಮನವಿ ಮಾಡಿದರು.

ತುಮಕೂರು ನಗರ ವ್ಯಾಪ್ತಿಯಲ್ಲಿ ಪಕ್ಷ ಸಂಘಟನೆ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನಲೆಯಲ್ಲಿ ಬುಧವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ನಡೆದ ಮುಖಂಡರ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಜಿಲ್ಲಾ ಕೇಂದ್ರವಾದ ತುಮಕೂರಿನಲ್ಲಿ ಪಕ್ಷ ಬಲವಾಗಿ ಸಂಘಟನೆಗೊಂಡರೆ ಇಡೀ ಜಿಲ್ಲೆಗೆ ಅದರ ಪರಿಣಾಮ ಬೀರುತ್ತದೆ. ಹೀಗಾಗಿ ಮುಂದೆ ನೇಮಕವಾಗಲಿರುವ ವಿವಿಧ ಘಟಕ ಹಾಗೂ ವಾರ್ಡ್ ಸಮಿತಿ ಪದಾಧಿಕಾರಿಗಳು ಪಕ್ಷವನ್ನು ಶಕ್ತಿಯುತವಾಗಿ ಬೆಳೆಸಲು ಕಾಳಜಿವಹಿಸಬೇಕು ಎಂದು ಹೇಳಿದರು.



2028ರ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಜಯಗಳಿಸಿ ಹೆಚ್.ಡಿ. ಕುಮಾರಸ್ವಾಮಿಯವರು ಮತ್ತೊಮ್ಮೆ ಮುಖ್ಯಮಂತ್ರಿಯಾಗುವುದು ಖಚಿತ. ಅದಕ್ಕಾಗಿ ನಾವೆಲ್ಲರೂ ಪಕ್ಷ ಕಟ್ಟುವ ಕೆಲಸ ಮಾಡಬೇಕು. ಕಾರ್ಯಕರ್ತರಿಗೆ ಪಕ್ಷ ತಾಯಿ ಇದ್ದಂತೆ, ತಾಯಿಯಂತೆ ಪಕ್ಷವನ್ನು ಕಾಪಾಡಿ ಬೆಳೆಸಬೇಕು. ಮುಂದೆ ಜೆಡಿಎಸ್, ಬಿಜೆಪಿ ಮೈತ್ರಿ ಸರ್ಕಾರ ರಾಜ್ಯದಲ್ಲಿ ಅಧಿಕಾರ ಹಿಡಿಯುತ್ತದೆ ಎಂಬ ಗುಪ್ತಚರ ಮಾಹಿತಿಯೂ ಇದೆ ಎಂದು ಹೇಳಲಾಗುತ್ತಿದೆ ಎಂದು ಟಿ.ಹೆಚ್. ಜಯರಾಮ್ ಹೇಳಿದರು.

ನೇಮಕವಾಗುವ ಪದಾಧಿಕಾರಿಗಳು ಎಲ್ಲರನ್ನೂ ಜೊತೆಗೆ ಕರೆದುಕೊಂಡುಹೋಗುವ ಮನಸ್ಥಿತಿ ರೂಢಿಸಿಕೊಂಡರೆ ಸಂಘಟನಾ ಕಾರ್ಯಕ್ಕೆ ಹೆಚ್ಚು ಸಹಾಯವಾಗುತ್ತದೆ. ಪಕ್ಷ ಸಂಘಟನೆ ಜೊತೆಗೆ ಸಾರ್ವಜನಿಕರ ಸಮಸ್ಯೆಗಳ ಬಗ್ಗೆಯೂ ಸ್ಪಂದಿಸಿಬೇಕು, ಸರ್ಕಾರದ ವಿರುದ್ಧ ಪಕ್ಷ ಸಂಘಟಿಸುವ ಹೋರಾಟಗಳಲ್ಲಿ ಎಲ್ಲರೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ನಗರ ಘಟಕ ಕಾರ್ಯಾಧ್ಯಕ್ಷ ಟಿ.ಎಸ್. ಮೋಹನ್‌ಕುಮಾರ್, ಮುಖಂಡರಾದ ಟಿ.ಎಲ್. ಕುಂಭಯ್ಯ, ಎಸ್.ಪುಟ್ಟೀರಪ್ಪ, ದಾಂಡೇಲಿ ಗಂಗಣ್ಣ, ಎಸ್.ಟಿ. ಘಟಕ ರಾಜ್ಯ ಉಪಾಧ್ಯಕ್ಷ ಸೋಲಾರ್ ಕೃಷ್ಣಮೂರ್ತಿ, ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ರೇಖಾ ರಾಜ್, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಕೆಂಪರಾಜು, ನಗರಸಭೆ ಮಾಜಿ ಉಪಾಧ್ಯಕ್ಷ ಶ್ರೀನಿವಾಸ್‌ಪ್ರಸಾದ್, ಮಾಜಿ ಸದಸ್ಯರಾದ ಟಿ.ಜಿ. ನರಸಿಂಹರಾಜು, ಧರಣೇಂದ್ರಕುಮಾರ್, ಲಕ್ಷ್ಮೀನರಸಿಂಹರಾಜು, ಟಿ.ಹೆಚ್. ಬಾಲಕೃಷ್ಣ, ನಗರ ಯುವ ಘಟಕ ಅಧ್ಯಕ್ಷ ಪ್ರಮೋದ್‌ಗೌಡ, ಗ್ರಾಮಾಂತರ ಅಧ್ಯಕ್ಷ ನಾಗವಲ್ಲಿ ರಾಮಣ್ಣ, ಮುಖಂಡರಾದ ಉಪ್ಪಾರಹಳ್ಳಿ ಕುಮಾರ್, ಟಿ.ಸಿ. ಪ್ರಭಾಕರ್, ತಾಹೇರಾ ಕುಲ್ಸಂ, ಲಕ್ಷ್ಮೀನಾಯಕ್, ಯಶೋಧ, ಜಯಲಕ್ಷ್ಮಿ, ರಂಗಪ್ಪ, ದಿವಾಕರ್, ಸಿದ್ಧಲಿಂಗಪ್ಪ ಮೊದಲಾದವರು ಭಾಗವಹಿಸಿದ್ದರು.

# ಸಕ್ಕರೆ ಕಾಯಿಲೆ ನಿಯಂತ್ರಿಸದಿದ್ದರೆ ಅಂಧತ್ವದ ಅಪಾಯ ಹೆಚ್ಚಳ



ತಿಪಟೂರು

ಸಕ್ಕರೆ ಕಾಯಿಲೆಯನ್ನು ನಿಯಂತ್ರಣದಲ್ಲಿರಿಸದಿದ್ದರೆ ಅಂಧತ್ವದಂತಹ ಗಂಭೀರ ಸಮಸ್ಯೆಗಳು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಲಯನ್ಸ್ ಕ್ಲಬ್ ಅಧ್ಯಕ್ಷ ಹಾಗೂ ವೈದ್ಯ ಡಾ. ಜಿ.ಬಿ. ವಿವೇಚನ್ ಹೇಳಿದರು.

ತಾಲೂಕಿನ ಹೊನ್ನವಳ್ಳಿಯ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಲಯನ್ಸ್ ಕ್ಲಬ್ ತಿಪಟೂರು, ಶ್ರದ್ಧಾ ನೇತ್ರಧಾಮ, ಕುಟುಂಬ ಮತ್ತು ಕಲ್ಯಾಣ ಇಲಾಖೆ ಹಾಗೂ ಅಂಧತ್ವ ನಿಯಂತ್ರಣ ವಿಭಾಗ ತುಮಕೂರು ಇವರ ಸಹಯೋಗದಲ್ಲಿ ನಡೆದ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸೆ, ಲೆನ್ಸ್ ಅಳವಡಿಕೆ ಮತ್ತು ಕನ್ನಡಕ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬದಲಾದ ಜೀವನಶೈಲಿ ಮತ್ತು ಪರಿಸರದ ಪರಿಣಾಮ ಜನರು ವಿವಿಧ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ಅವರು ಹೇಳಿದರು. ಗ್ರಾಮೀಣ ಪ್ರದೇಶಗಳಲ್ಲಿ ಸಮಯಕ್ಕೆ ಸರಿಯಾದ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆ ದೊರೆಯದ ಕಾರಣ ರಕ್ತದೊತ್ತಡ ಹಾಗೂ ಸಕ್ಕರೆ ಕಾಯಿಲೆ ಹೆಚ್ಚುತ್ತಿದ್ದು, ಇದರ ಪರಿಣಾಮವಾಗಿ ಕಣ್ಣಿನ ದೃಷ್ಟಿದೋಷವೂ ಹೆಚ್ಚುತ್ತಿದೆ ಎಂದು ತಿಳಿಸಿದರು. ಸಮಯಕ್ಕೆ ಚಿಕಿತ್ಸೆ ಪಡೆಯದಿದ್ದರೆ ಅಂಧತ್ವ ಸಂಭವಿಸಬಹುದು ಎಂದು ಎಚ್ಚರಿಸಿದರು.

ಲಯನ್ಸ್ ಕ್ಲಬ್ ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ತಿಪಟೂರು ತಾಲೂಕಿನ ವಿವಿಧ ಭಾಗಗಳಲ್ಲಿ ನಿರಂತರವಾಗಿ ಕಣ್ಣಿನ ತಪಾಸಣೆ, ಚಿಕಿತ್ಸೆ ಹಾಗೂ ಶಸ್ತ್ರಚಿಕಿತ್ಸೆ ಶಿಬಿರಗಳನ್ನು ನಡೆಸುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ಲ.ಎಸ್.ಎಸ್. ಗಂಗಾಧರ್ ಮಾತನಾಡಿ, ಪ್ರತಿ ತಿಂಗಳ ಮೊದಲ ಗುರುವಾರ ಶ್ರೀ ರಂಗ ಆಸ್ಪತ್ರೆಯಲ್ಲಿ, ಎರಡನೇ ಗುರುವಾರ ಹಾಲ್ಕುರಿಕೆ ಮತ್ತು ಬಿಳಿಗೆರೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ನಾಲ್ಕನೇ ಸೋಮವಾರ ಹೊನ್ನವಳ್ಳಿಯ ಆಸ್ಪತ್ರೆಯಲ್ಲಿ ವರ್ಷಪೂರ್ತಿ ಕಣ್ಣಿನ ತಪಾಸಣೆ ಶಿಬಿರಗಳು ನಡೆಯಲಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರದ್ಧಾ ನೇತ್ರಧಾಮದ ವೈದ್ಯೆ ಡಾ. ಸೃಷ್ಟಿ, ಹೊನ್ನವಳ್ಳಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ರಾಜು ಸೇರಿದಂತೆ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ವಿವಿಧ ಕಾಮಗಾರಿ ಪರಿಶೀಲಿಸಿದ ಶಾಸಕ ಬಿ. ಸುರೇಶ್‌ಗೌಡ



ತುಮಕೂರು

ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಗೂಳೂರು ಹೋಬಳಿಯ ಹೆತ್ತೇನಹಳ್ಳಿ ಗ್ರಾಮದಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳ ಪ್ರಗತಿ ಹಾಗೂ ಗುಣಮಟ್ಟವನ್ನು ಶಾಸಕ ಬಿ. ಸುರೇಶ್‌ಗೌಡರು ಪರಿಶೀಲಿಸಿದರು.

ಹೆತ್ತೇನಹಳ್ಳಿಯ ಇತಿಹಾಸ ಪ್ರಸಿದ್ಧ ಆದಿಶಕ್ತಿ ಮಾರಮ್ಮ ದೇವಿಯ ನೂತನ ದೇವಾಲಯ ನಿರ್ಮಾಣ, ಹಾಳಾಗಿದ್ದ ಕೈದಾಳ–ಹೆತ್ತೇನಹಳ್ಳಿ ರಸ್ತೆಯನ್ನು ಸಿಮೆಂಟ್ ಕಾಂಕ್ರಿಟ್ ರಸ್ತೆಯಾಗಿ ಅಭಿವೃದ್ಧಿಪಡಿಸಲಾಗುತ್ತಿದ್ದು, ಈ ಸಿ.ಸಿ ರಸ್ತೆ ಕಾಮಗಾರಿ, ಸಮುದಾಯಭವನ, ಕಲ್ಯಾಣಿ ನಿರ್ಮಾಣ ಕಾರ್ಯ, ಆಂಜನೇಯಸ್ವಾಮಿ, ತಿರುಮಲ ದೇವಾಲಯ, ಶ್ರೀರಾಮ ದೇವಾಲಯ ನಿರ್ಮಾಣ ಮತ್ತು ದೇವಾಲಯದ ಕಾಂಪೌಂಡ್ ಕಾಮಗಾರಿಯನ್ನು ಇಲಾಖೆಯ ಅಧಿಕಾರಿಗಳು, ಗುತ್ತಿಗೆದಾರರೊಂದಿಗೆ ಪರಿಶೀಲಿಸಿದರು.

ತರಾತುರಿಯಲ್ಲಿ ಕೆಲಸ ಮುಗಿಸದೆ ಕಾಮಗಾರಿಯ ಗುಣಮಟ್ಟ ಕಾಪಾಡುವಂತೆ ಶಾಸಕರು ಸೂಚಿಸಿದರು. ಈ ವೇಳೆ ಗ್ರಾಮದ ವಿವಿಧ ಮುಖಂಡರು ಹಾಜರಿದ್ದರು.

# ‘ಸಾವಯವ ಕೃಷಿ ಪದ್ಧತಿ ಮಣ್ಣು ಮತ್ತು ಮನುಷ್ಯರ ಆರೋಗ್ಯಕ್ಕೆ ನಾಂದಿ’




ಕನಕಪುರ

ಸಾವಯವ ಕೃಷಿ ಪದ್ಧತಿ ಮಣ್ಣು ಹಾಗೂ ಮನುಷ್ಯರ ಆರೋಗ್ಯಕ್ಕೆ ನಾಂದಿಯಾಗಿದ್ದು, ರೈತರು ಸಮತೋಲಿತ ಗೊಬ್ಬರ ಬಳಕೆ ಹಾಗೂ ಮಣ್ಣಿನ ಆರೋಗ್ಯ ಕಾಪಾಡುವತ್ತ ಹೆಚ್ಚು ಗಮನ ಹರಿಸಬೇಕು ಎಂದು ಸಂಸದ ಪದ್ಮಶ್ರೀ ಸಿ.ಎನ್. ಮಂಜುನಾಥ್ ಹೇಳಿದರು.

ತಾಲೂಕಿನ ಕೋಡಿಹಳ್ಳಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಹಿಂಭಾಗದ ರಂಗಮಂದಿರದಲ್ಲಿ ಕನಕಪುರ ಆರ್ಗ್ಯಾನಿಕ್ ಪ್ರೊಡ್ಯೂಸರ್ ಕಂಪನಿ ಲಿಮಿಟೆಡ್ ಹಾಗೂ ಕೋಡಿಹಳ್ಳಿ ರೇಷ್ಮೆ ಕೃಷಿ ರೈತರ ಉತ್ಪಾದಕ ಕಂಪನಿ ಲಿಮಿಟೆಡ್ ಸಂಯುಕ್ತಾಶ್ರಯದಲ್ಲಿ ನಡೆದ ಗೊಬ್ಬರಗಳ ಸಮತೋಲಿತ ಬಳಕೆ ಮತ್ತು ಸಮಗ್ರ ಮಣ್ಣಿನ ಆರೋಗ್ಯ ನಿರ್ವಹಣೆ ಕುರಿತ ರಾಷ್ಟ್ರವ್ಯಾಪಿ ಜಾಗೃತಿ ಮತ್ತು ಸಂವೇದನಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭೂಮಿಗೆ ಜೀವವಿದೆ, ಪ್ರತಿಯೊಂದು ಜೀವಿಯೂ ಒಂದರ ಮೇಲೆ ಒಂದು ಅವಲಂಬಿತವಾಗಿದೆ.

ಮಣ್ಣಿನ ಆರೋಗ್ಯ ಹಾಳಾದರೆ ಆಹಾರ ಉತ್ಪಾದನೆ ಕುಸಿಯುತ್ತದೆ ಎಂದು ಅವರು ಹೇಳಿದರು. ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಅತಿಯಾದ ಬಳಕೆಯಿಂದ ಮಣ್ಣಿನ ಗುಣಮಟ್ಟ ಹದಗೆಡುತ್ತಿದ್ದು, ಇದರಿಂದ ಆರೋಗ್ಯ ಸಮಸ್ಯೆಗಳು ಹಾಗೂ ಕ್ಯಾನ್ಸರ್ ಸೇರಿದಂತೆ ಗಂಭೀರ ರೋಗಗಳು ಹೆಚ್ಚಾಗುತ್ತಿರುವುದಾಗಿ ಅವರು ಎಚ್ಚರಿಸಿದರು.

ಗ್ರಾಮೀಣ ಆರ್ಥಿಕತೆ ಬಲವಾಗಬೇಕಾದರೆ ಜಾನುವಾರು ಸಂಪತ್ತು ಹೆಚ್ಚಬೇಕು ಎಂದು ಹೇಳಿದ ಅವರು, ಗೊಬ್ಬರ ಹಾಗೂ ಕೃಷಿ ಔಷಧಿಗಳನ್ನು ಮಿತವಾಗಿ ಬಳಸುವುದು ಅತ್ಯಂತ ಅಗತ್ಯ ಎಂದು ಒತ್ತಾಯಿಸಿದರು.

ರೈತರ ನಿಜವಾದ ಪುಸ್ತಕವೆಂದರೆ ಅವರ ಜಮೀನು ಮತ್ತು ನಿಜವಾದ ಗ್ರಂಥಾಲಯವೆಂದರೆ ಕೃಷಿ ಭೂಮಿ ಎಂದು ಹೇಳಿದ ಅವರು, ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳು ಸಾಮಾಜಿಕ ಜಾಲತಾಣಗಳ ಮೂಲಕ ಜೈವಿಕ ಕೃಷಿ ವಿಧಾನಗಳು ಮತ್ತು ಸರ್ಕಾರದ ಯೋಜನೆಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಹಲವು ವಿಜ್ಞಾನಿಗಳು, ಕೃಷಿ ಸಂಸ್ಥೆಗಳ ಪ್ರತಿನಿಧಿಗಳು, ಸ್ಥಳೀಯ ಸಂಘಟನೆಗಳ ಮುಖಂಡರು ಹಾಗೂ ರೈತರು ಭಾಗವಹಿಸಿದ್ದರು.

# ಉಚಿತ ನೇತ್ರ ಶಸ್ತ್ರಚಿಕಿತ್ಸಾ ಶಿಬಿರಕ್ಕೆ ಉತ್ತಮ ಸ್ಪಂದನೆ

ವೈ.ಎನ್.ಹೊಸಕೋಟೆ

ಪಾವಗಡದ ಹೆಲ್ಪ್ ಸೊಸೈಟಿ, ಸೇವಾ ಟ್ರಸ್ಟ್ ಹಾಗೂ ಶಂಕರ ಕಣ್ಣಿನ ಆಸ್ಪತ್ರೆ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ಶ್ರೀ ಚೌಡೇಶ್ವರಿ ಕಲ್ಯಾಣ ಮಂಟಪದಲ್ಲಿ ಉಚಿತ ನೇತ್ರ ಶಸ್ತ್ರಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿತ್ತು.

ಶಿಬಿರದಲ್ಲಿ 240ಕ್ಕೂ ಹೆಚ್ಚು ಜನ ಕಣ್ಣಿನ ತಪಾಸಣೆಗೆ ಒಳಪಟ್ಟಿದ್ದು, 86 ರೋಗಿಗಳನ್ನು ಮುಂದಿನ ಶಸ್ತ್ರಚಿಕಿತ್ಸೆಗಾಗಿ ಬೆಂಗಳೂರಿನ ಶಂಕರ ಕಣ್ಣಿನ ಆಸ್ಪತ್ರೆಗೆ ಬಸ್ ಮೂಲಕ ಕಳುಹಿಸಲಾಯಿತು.

ಶಿಬಿರವನ್ನು ಉದ್ದೇಶಿಸಿ ಮಾತನಾಡಿದ ವೈದ್ಯ ಡಾ. ಅರುಣ್ ಕುಮಾರ್ ಅವರು, ಗಡಿನಾಡಿನ ಜನತೆಗೆ ಯಾವುದೇ ಲಾಭಾಪೇಕ್ಷೆ ಇಲ್ಲದೆ ಉತ್ತಮ ಚಿಕಿತ್ಸೆ ನೀಡುತ್ತಿರುವ ಹೆಲ್ಪ್ ಸೊಸೈಟಿ ಅಧ್ಯಕ್ಷ ಮಾನಂ ಶಶಿಕಿರಣ್ ಅವರ ಸೇವೆ ಶ್ಲಾಘನೀಯ ಎಂದು ಹೇಳಿದರು.

ಹೆಲ್ಪ್ ಸೊಸೈಟಿ ಅಧ್ಯಕ್ಷ ಮಾನಂ ಶಶಿಕಿರಣ್ ಮಾತನಾಡಿ, ತಮ್ಮ ಸಂಸ್ಥೆ ಆರೋಗ್ಯ, ಶಿಕ್ಷಣ ಹಾಗೂ ಸಾಮಾಜಿಕ ಸೇವಾ ಕ್ಷೇತ್ರಗಳಲ್ಲಿ



ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದು, ಜನಸೇವೆಯೇ ತಮ್ಮ ಮುಖ್ಯ ಗುರಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀನಿವಾಸ, ಶಂಕರ ಆಸ್ಪತ್ರೆಯ ವೈದ್ಯರಾದ ಮನ್ವಿತ್ ಮತ್ತು ಶ್ರುತಿ, ಸಂಯೋಜಕ ಹರೀಶ್ ಹಾಗೂ ಆಟೋ ಚಾಲಕರ ಸಂಘದ ಅಧ್ಯಕ್ಷ ವೇಕರಿ ನಾಗರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ತಿಪಟೂರಿನಲ್ಲಿ ಗೋಹತ್ಯೆ ತಡೆಗೆ ಹಿಂದೂ ಪರ ಸಂಘಟನೆಗಳ ಆಗ್ರಹ



ತಿಪಟೂರು

ಬಕ್ರೀದ್ ಹಬ್ಬ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಹಬ್ಬದ ಸಂದರ್ಭ ಯಾವುದೇ ರೀತಿಯ ಗೋಹತ್ಯೆ ಹಾಗೂ ಅನಧಿಕೃತ ಗೋ ಸಾಗಾಣಿಕೆಗೆ ಅವಕಾಶ ನೀಡಬಾರದು ಎಂದು ವಿಶ್ವ ಹಿಂದೂ ಪರಿಷತ್ ಜಿಲ್ಲಾ ಅಧ್ಯಕ್ಷ ಬಾಳೇಕಾಯಿ ನಟರಾಜು ಸರ್ಕಾರ ಹಾಗೂ ಜಿಲ್ಲಾ ತಾಲೂಕು ಆಡಳಿತಕ್ಕೆ ಒತ್ತಾಯಿಸಿದ್ದಾರೆ.

ನಗರದ ಹೋಟೆಲ್ ಶಿವಂ ಕೆಫೆ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಈಗಾಗಲೇ ಗೋಹತ್ಯೆ ನಿಷೇಧ ಕಾನೂನು ಜಾರಿಯಲ್ಲಿದ್ದು, ಹಬ್ಬದ ಹೆಸರಿನಲ್ಲಿ ಅಕ್ರಮ ಗೋ ಸಾಗಾಣಿಕೆ ಮತ್ತು ಕಸಾಯಿಖಾನೆಗಳಲ್ಲಿ ಗೋವಧೆ ನಡೆಯದಂತೆ ಪೊಲೀಸರು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಒಂದು ವಾರ ಅತ್ಯಂತ ಮಹತ್ವದ್ದಾಗಿದ್ದು, ಗೋರಕ್ಷಣೆಗೆ ಪೊಲೀಸರು ಆಧುನಿಕ ತಂತ್ರಜ್ಞಾನ ಬಳಸಬೇಕು. ಟೋಲ್‌ಗೇಟ್‌ಗಳು ಹಾಗೂ ಆಯಕಟ್ಟಿನ ಸ್ಥಳಗಳಲ್ಲಿ ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಿ ವಾಹನಗಳ ಪರಿಶೀಲನೆ ನಡೆಸಬೇಕು ಎಂದು ಅವರು ಹೇಳಿದರು. ಎಲೆಕ್ಟ್ರಾನಿಕ್ ಸ್ಕ್ಯಾನರ್ ಹಾಗೂ ಡ್ರೋನ್ ತಂತ್ರಜ್ಞಾನ ಬಳಸಿ ಗೋ ಸಾಗಾಣಿಕೆ ತಡೆಯಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಅನಧಿಕೃತ ಚಟುವಟಿಕೆಗಳನ್ನು ತಡೆಯುವ ರೀತಿಯಲ್ಲಿ ಪೊಲೀಸರು ಯುಗಾದಿ ಹಬ್ಬದ ವೇಳೆ ಕೈಗೊಳ್ಳುವಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಈ ಸಂದರ್ಭದಲ್ಲಿಯೂ ಕೈಗೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಮುಖಂಡ ಮುರಳೀಧರ್ ವಿ. ಮಲ್ಲೇನಹಳ್ಳಿ ಮಾತನಾಡಿ, ಅಕ್ರಮ ಕಸಾಯಿಖಾನೆಗಳಿಗೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು. ಲೈಸೆನ್ಸ್ ಪಡೆದ ಕಸಾಯಿಖಾನೆಗಳ ಪಟ್ಟಿಯನ್ನು ಸಾರ್ವಜನಿಕವಾಗಿ ಪ್ರಕಟಿಸಿ ಅಲ್ಲಿ ಪೊಲೀಸ್ ಭದ್ರತೆ ಒದಗಿಸಬೇಕು ಎಂದು ಹೇಳಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಹಿಂದೂ ಪರ ಸಂಘಟನೆ ಮುಖಂಡ ಕೃಷ್ಣ (ಶಿವಾಜಿ), ಪ್ರಜ್ವಲ್, ಗೋಪಿ, ಗೌತಮ್ ಹಾಗೂ ಮಧು ಸೇರಿದಂತೆ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಬಾಲಪುರಸ್ಕಾರ್ ಪ್ರಶಸ್ತಿಗೆ ಅರ್ಜಿ ಆಹ್ವಾನ

ಕೋಲಾರ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ವತಿಯಿಂದ ಪ್ರಧಾನ ಮಂತ್ರಿ ರಾಷ್ಟ್ರೀಯ ಬಾಲಪುರಸ್ಕಾರ ಪ್ರಶಸ್ತಿಯಡಿ ಕ್ರೀಡೆ, ಸಮಾಜಸೇವೆ, ವಿಜ್ಞಾನ, ತಂತ್ರಜ್ಞಾನ, ಪರಿಸರ, ಕಲೆ, ಸಾಂಸ್ಕೃತಿಕ ಹಾಗೂ ಅನ್ವೇಷಣೆ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿರುವ 18ವರ್ಷದೊಳಗಿನ ಮಕ್ಕಳು ಪ್ರಸಕ್ತ ಸಾಲಿನ ರಾಷ್ಟ್ರೀಯ ಬಾಲಪುರಸ್ಕಾರ ಪ್ರಶಸ್ತಿಗೆ ಅರ್ಜಿಗಳನ್ನು ಜುಲೈ 31 ರೊಳಗೆ https://awards.gov.in ರಲ್ಲಿ ಸಲ್ಲಿಸಬಹುದು.

ಭಾರತದ ನಾಗರೀಕರಾಗಿರಬೇಕು ಹಾಗೂ ಭಾರತದಲ್ಲಿ ವಾಸವಿರಬೇಕು. ಒಂದು ಮಗು ಒಂದು ಕ್ಷೇತ್ರದಲ್ಲಿ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಹಿಂದಿನ ವರ್ಷಗಳಲ್ಲಿ ಪ್ರಶಸ್ತಿ ಪಡೆದಿರುವ ಮಕ್ಕಳು ಅರ್ಜಿ ಸಲ್ಲಿಸುವಂತಿಲ್ಲ. ಕಳೆದ 2ವರ್ಷಗಳಲ್ಲಿ ಸಾಧನೆ ಮಾಡಿರುವ ಮಕ್ಕಳನ್ನು ಪರಿಗಣಿಸಲಾಗುವುದು. ಶೌರ್ಯ ಪ್ರಶಸ್ತಿಗೆ 18 ವರ್ಷದೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣ ರಕ್ಷಣೆಗಾಗಿ ಧೈರ್ಯ, ಸಾಹಸ ಪ್ರದರ್ಶನ ಮಾಡಿದ ಮಕ್ಕಳಿಗೆ ಶೌರ್ಯ ಪ್ರಶಸ್ತಿ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.08152-222753, 223665, 9663294415 ಯನ್ನು ಸಂಪರ್ಕಿಸಬಹುದೆಂದು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂಕ್ರಷ್ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಕೋಲಾರ

ಕೋಲಾರ ಜಿಲ್ಲೆಯ, ಮುಳಬಾಗಿಲು ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆಯ 06 ಅಂಗನವಾಡಿ ಕಂಕ್ರಷ್ ಕೇಂದ್ರಗಳಾದ ಮುತ್ಯಾಲಪೇಟೆ-ಬಿ, ಉತ್ತನೂರು-ಎ, ಮೆಹಬೂಬ್ ನಗರ-ಎ, ರೆಹಮತ್ ನಗರ-ಬಿ ಮತ್ತು ಸಿ, ಹೈದರೀನಗರ-ಇ ಗಳಲ್ಲಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಖಾಲಿಯಿರುವ ಹುದ್ದೆಗಳಿಗೆ ಗೌರವಧನ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಜೂನ್ 30 ರೊಳಗೆ ಸಲ್ಲಿಸಬಹುದಾಗಿದ್ದು, ಶಿಶುವಿಹಾರದ ಕೆಲಸಕ್ಕೆ ಪಿ.ಯು.ಸಿ 2ನೇ ವರ್ಷ ಪಾಸಾಗಿರಬೇಕು. ಈ ವಿದ್ಯಾರ್ಹತೆಯ ಅಭ್ಯರ್ಥಿಯು ಲಭ್ಯವಿಲ್ಲದಿದ್ದಲ್ಲಿ, ಕನಿಷ್ಠ 10ನೇ ತರಗತಿ ಪಾಸಾಗಿರುವ ಅಭ್ಯರ್ಥಿಯನ್ನು ಪರಿಗಣಿಸಬಹುದು. ಗರಿಷ್ಠ ವಯೋಮಿತಿ 35 ವರ್ಷದೊಳಗಿರಬೇಕು.

ಶಿಶುವಿಹಾರದ ಸಹಾಯಕ್ಕೆ ಕನಿಷ್ಠ 10ನೇ ತರಗತಿ ಪಾಸಾಗಿರಬೇಕು. ಈ ವಿದ್ಯಾರ್ಹತೆಯ ಅಭ್ಯರ್ಥಿಯು ಲಭ್ಯವಿಲ್ಲದಿದ್ದಲ್ಲಿ, ಕನಿಷ್ಠ 7ನೇ ತರಗತಿ ಪಾಸಾಗಿರುವ ಅಭ್ಯರ್ಥಿಯನ್ನು ಪರಿಗಣಿಸಬಹುದು. ವಯೋಮಿತಿ 35 ವರ್ಷದೊಳಗಿರಬೇಕು. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದೆಂದು ಮುಳಬಾಗಿಲು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ, ಕೆ.ಜಿ.ಎಫ್ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆಯ 06 ಅಂಗನವಾಡಿ ಕಂಕ್ರಷ್ ಕೇಂದ್ರಗಳಾದ ಬೇತಮಂಗಲ-2, ದಯಮಾನಹಳ್ಳಿ, ಕ್ಯಾಸಂಬಳ್ಳಿ-1, ಬಡಮಾಕನಹಳ್ಳಿ-1, ಬುಲೆನ್ಸ್ ಮಾಡೆಲ್ ಹೌಸ್, ಸ್ವರ್ಣನಗರ ಬಡಾವಣೆ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಗೌರವಧನ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಜೂನ್ 30 ರೊಳಗೆ ಸಲ್ಲಿಸಬಹುದಾಗಿದ್ದು, ಶಿಶುವಿಹಾರದ ಕೆಲಸಕ್ಕೆ ಪಿ.ಯು.ಸಿ 2ನೇ ವರ್ಷ ಪಾಸಾಗಿರಬೇಕು. ಈ ವಿದ್ಯಾರ್ಹತೆಯ ಅಭ್ಯರ್ಥಿಯು ಲಭ್ಯವಿಲ್ಲದಿದ್ದಲ್ಲಿ, ಕನಿಷ್ಠ 10ನೇ ತರಗತಿ ಪಾಸಾಗಿರುವ ಅಭ್ಯರ್ಥಿಯನ್ನು ಪರಿಗಣಿಸಬಹುದು. ಗರಿಷ್ಠ ವಯೋಮಿತಿ 35 ವರ್ಷದೊಳಗಿರಬೇಕು.

ಶಿಶುವಿಹಾರದ ಸಹಾಯಕ್ಕೆ ಕನಿಷ್ಠ 10ನೇ ತರಗತಿ ಪಾಸಾಗಿರಬೇಕು. ಈ ವಿದ್ಯಾರ್ಹತೆಯ ಅಭ್ಯರ್ಥಿಯು ಲಭ್ಯವಿಲ್ಲದಿದ್ದಲ್ಲಿ, ಕನಿಷ್ಠ 7ನೇ ತರಗತಿ ಪಾಸಾಗಿರುವ ಅಭ್ಯರ್ಥಿಯನ್ನು ಪರಿಗಣಿಸಬಹುದು. ವಯೋಮಿತಿ 35 ವರ್ಷದೊಳಗಿರಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಆಡಳಿತ ಭವನದ 2ನೇ ಮಹಡಿ ಅಂಬೇಡ್ಕರ್ ನಗರದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದೆಂದು ಕೆ.ಜಿ.ಎಫ್‌ನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಡಿಲು ಬಡಿದು ಅಡಿಕೆ ತೋಟಕ್ಕೆ ಹಾನಿ



ವೈ.ಎನ್.ಹೊಸಕೋಟೆ

ಮಂಗಳವಾರ ರಾತ್ರಿ ಸುರಿದ ಮಳೆಯ ವೇಳೆ ಸಿಡಿಲು ಬಡಿದು ಅಡಿಕೆ ತೋಟದಲ್ಲಿ ತೆಂಗಿನ ಮರ ಹಾಗೂ ಅಡಿಕೆ ಮರಗಳಿಗೆ ಹಾನಿಯಾದ ಘಟನೆ ನಡೆದಿದೆ. ಹೊಸದುರ್ಗ ಗ್ರಾಮದ ಸರ್ವೆ ನಂ. 72/1ರಲ್ಲಿ ಹೆಚ್.ಎಂ. ಮಾರಣ್ಣ ಅವರ ಅಡಿಕೆ ತೋಟದಲ್ಲಿ ಬೆಳೆಯುತ್ತಿದ್ದ ದೊಡ್ಡ ತೆಂಗಿನ ಮರದ ಕೊನೆ ಭಾಗಕ್ಕೆ ಸಿಡಿಲು ಬಡಿದಿದ್ದು, ಮರದ ಗರಿಗಳು ಹಾಗೂ ಮೇಲ್ಭಾಗ ಸುಟ್ಟುಹೋಗಿದೆ.

ಅಕ್ಕಪಕ್ಕದಲ್ಲಿದ್ದ ಫಸಲು ನೀಡುತ್ತಿದ್ದ ಸುಮಾರು 20 ಅಡಿಕೆ ಮರಗಳು ತಲೆಮುರಿದು ಬಾಗಿರುವುದಾಗಿ ತಿಳಿದುಬಂದಿದೆ.

ಘಟನೆ ಸ್ಥಳಕ್ಕೆ ಕಂದಾಯ ಇಲಾಖೆಯ ಗ್ರಾಮಲೆಕ್ಕಿಗ ಗುರುಕಿಶೋರ್ ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ಸಲ್ಲಿಸಿದ್ದಾರೆ.

# ಸಾಧಕರಿಂದ ಅರ್ಜಿ ಆಹ್ವಾನ

ರಾಮನಗರ

ವಿಕಲಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಸಬಲೀಕರಣ, ಪುನರ್ವಸತಿ, ಶಿಕ್ಷಣ, ಕೌಶಲ್ಯ, ಅಭಿವೃದ್ಧಿ, ಉದ್ಯೋಗ ಸೃಷ್ಟಿ, ತಡೆರಹಿತ ವಾತಾವರಣ, ಸಂಶೋಧನೆ, ನಾವಿನ್ಯತೆ, ಕ್ರೀಡೆ, ಕಲೆ ಸಾಹಿತ್ಯ ಮತ್ತು ಇತರೆ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಜಿಲ್ಲೆಯ ಸಾಧಕರಿಂದ 2026-27ನೇ ಸಾಲಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು 2026ರ ಜುಲೈ 18ರೊಳಗೆ ಅಗತ್ಯ ದಾಖಲಾತಿಗಳೊಂದಿಗೆ ಭಾರತ ಸರ್ಕಾರದ ಜಾಲತಾಣ: www.awards.gov.in ನಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ: 107, ನೆಲ ಮಹಡಿ, ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ, ಬಿ.ಎಂ. ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ.

# ‘ಮತದಾರರ ಪಟ್ಟಿ ರಚನೆಗೆ ಪ್ರತಿಯೊಬ್ಬರ ಸಹಕಾರ ಅಗತ್ಯ’



ಬೆಂಗಳೂರು

ಮತದಾರರ ಪಟ್ಟಿ ರಚನೆಗೆ ಪ್ರತಿಯೊಬ್ಬರ ಸಹಕಾರ ಅಗತ್ಯ ಎಂದು ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದರು.

ಅವರು ವಾರ್ತಾ ಸೌಧದ ಮಹಾತ್ಮಗಾಂಧಿ ಸಭಾಂಗಣದಲ್ಲಿ ರಾಜ್ಯ ಚುನಾವಣಾ ಆಯೋಗದಿಂದ ಆಯೋಜಿಸಲಾಗಿದ್ದ ಮಾಧ್ಯಮ ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ವಂಚಿತರಾಗಬಾರದು. ಅನರ್ಹ ಮತದಾರರು ಪಟ್ಟಿಯಲ್ಲಿ ಇರಬಾರದು ಎಂಬ ಉದೇಶದಿಂದ ಲೋಪದೋಷಗಳಿಲ್ಲದ ವಿನೂತನ ಸಮಗ್ರ ಮತದಾರರ ಪಟ್ಟಿಯನ್ನು ಸಿದ್ಧ ಪಡಿಸುವುದೇ “ಮತದಾರ ಪಟ್ಟಿಗಳ ವಿಶೇಷ ಸಮಗ್ರ ಪರಷ್ಕರಣೆ(ಎಸ್‌ಐಆರ್)-2026”. ಈ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ಮತದಾರನಿಂದ ಅವರದ್ದೇ ಸಹಿಯಡಿ ಸಮಗ್ರ ಮಾಹಿತಿಯನ್ನು ಪಡೆದು ಮತದಾರರ ಪಟ್ಟಿಯನ್ನು ಪರಿಷ್ಕರಿಸಲಾಗುವುದು ಎಂದರು.

ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯದಲ್ಲಿ ಮತದಾರರ ಪಟ್ಟಿಯ ಸಮಗ್ರ ಪರಿಷ್ಕರಣೆ ನಡೆಯುತ್ತಿದ್ದು, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡುವ ಹೊಣೆ ಪ್ರತಿಯೊಬ್ಬ ಭಾರತೀಯನದ್ದಾಗಿದೆ.ಇದು ಕೇವಲ ಚುನಾವಣಾ ಆಯೋಗದ ಹೊಣೆಯಷ್ಟೆ ಅಲ್ಲ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದ್ದು ಬಿ ಎಲ್ ಒ ಗಳು ಪ್ರತಿ ಮನೆಗೆ ಭೇಟಿ ನೀಡಿ ಮತದಾರರಿಗೆ ಎಣಿಕೆ ಫಾರ್ಮ್ (ಎನ್ಯುಮರೇಷನ್ ಫಾರ್ಮ್) ಜೊತೆಗೆ ಎಲ್ಲ ಮಾಹಿತಿಗಳನ್ನು ಮನೆ ಮನೆ ಭೇಟಿಯಲ್ಲಿ ಪಡೆಯಲಿದ್ದಾರೆ.

ಇದಲ್ಲದೆ ಈ ಸಂಬಂಧ ಉದ್ಭವಿಸುವ ಸಮಸ್ಯೆಗಳು, ಪ್ರಶ್ನೆಗಳ ನಿವಾರಣೆಗೆ ಪಂಚಾಯಿತಿಗೊಂದು ಫೆಸಿಲಿಟೇಟಿಂಗ್ ಕೇಂದ್ರಗಳನ್ನು ನೀಡಲಾಗುವುದು. ಒಟ್ಟಿನಲ್ಲಿ ಸ್ವಚ್ಛ ಮತ್ತು ವಿನೂತನ ಮತದಾರರ ಪಟ್ಟಿ ತಯಾರಿಕೆ ಸದ್ಯ ರಾಜ್ಯ ಚುನಾವಣಾ ಆಯೋಗದ ಪ್ರಮುಖ ಕರ್ತವ್ಯ ಎಂದರು.

ಮುಕ್ತ ಮತ್ತು ನಿಷ್ಪಕ್ಷಪಾತ ಚುನಾವಣೆಗಳನ್ನು ನಡೆಸಲು ಮತದಾರರ ಪಟ್ಟಿಗಳ ವಿಶ್ವಾಸರ್ಹತೆಯನ್ನು ಕಾಪಾಡಿಕೊಳ್ಳುವುದು ಮೂಲಭೂತ ಅಗತ್ಯ ಈ ನಿಟ್ಟಿನಲ್ಲಿ ಈಗಾಗಲೇ ನಿಗದಿಯಾದ ಮಾರ್ಗಸೂಚಿ ಮತ್ತು ವೇಳಾಪಟ್ಟಿಗನುಗುಣವಾಗಿ ಮತದಾರರ ಪಟ್ಟಿಯ ಸಮಗ್ರ ಪರಿಷ್ಕರಣೆ ನಡೆಯಲಿದೆ.

# ‘ಹಿರಿಯ ನಾಗರಿಕರು ಸಮಾಜದ ಅಮೂಲ್ಯ ಸಂಪತ್ತು’

ಬೂದಿಕೋಟೆ

ಹಿರಿಯ ನಾಗರಿಕರು ಸಮಾಜದ ಅಮೂಲ್ಯ ಸಂಪತ್ತಾಗಿದ್ದು, ಅವರ ಅನುಭವ ಹಾಗೂ ಮಾರ್ಗದರ್ಶನ ಯುವ ಪೀಳಿಗೆಗೆ ದಾರಿದೀಪವಾಗಿದೆ ಎಂದು ಬೂದಿಕೋಟೆ ಪೊಲೀಸ್ ಠಾಣೆಯ ಪಿಎಸ್‌ಐ ಗುರುರಾಜ್ ಚಿಂತಕಲ್ ಹೇಳಿದರು.

ಹಿರಿಯ ನಾಗರಿಕರ ಸಮಸ್ಯೆಗಳಿಗೆ ಸ್ಪಂದಿಸಿ ಅವರ ಸುರಕ್ಷತೆ ಹಾಗೂ ಗೌರವ ಕಾಪಾಡುವ ಉದ್ದೇಶದಿಂದ ಪೊಲೀಸ್ ಠಾಣೆಯಲ್ಲಿ ವಿಶೇಷ ಸಭೆಯನ್ನು ಆಯೋಜಿಸಲಾಗಿತ್ತು. ಈ ವೇಳೆ ಹಿರಿಯ ನಾಗರಿಕರೊಂದಿಗೆ ನೇರ ಸಂವಾದ ನಡೆಸಿ ಅವರ ಕುಂದುಕೊರತೆಗಳನ್ನು ಆಲಿಸಲಾಯಿತು.

ಸಮಸ್ಯೆಗಳ ಪರಿಹಾರಕ್ಕೆ ತಕ್ಷಣ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ ಪಿಎಸ್‌ಐ ಅವರು, ಹಿರಿಯ ನಾಗರಿಕರು ಯಾವುದೇ ಭಯ ಅಥವಾ ಸಂಕೋಚವಿಲ್ಲದೆ ಪೊಲೀಸ್ ಇಲಾಖೆಯನ್ನು ಸಂಪರ್ಕಿಸಬಹುದು ಎಂದು ಹೇಳಿದರು. ಆಸ್ತಿ ವಿವಾದ, ಕುಟುಂಬ ಕಲಹ, ವಂಚನೆ, ಸೈಬರ್ ಅಪರಾಧ ಹಾಗೂ ಹಣಕಾಸು ಮೋಸ ಸೇರಿದಂತೆ ಯಾವುದೇ ಸಮಸ್ಯೆಗಳಿಗೆ ಪೊಲೀಸ್ ಇಲಾಖೆ ಸದಾ ಬೆಂಬಲವಾಗಿ ನಿಲ್ಲಲಿದೆ ಎಂದು ತಿಳಿಸಿದರು.



ಗ್ರಾಮಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಹಾಗೂ ಹಿರಿಯ ನಾಗರಿಕರ ಸುರಕ್ಷತೆಗೆ ವಿಶೇಷ ಗಮನ ನೀಡಲಾಗುವುದು ಎಂದು ಅವರು ಹೇಳಿದರು.

ಸಭೆಯ ವೇಳೆ ಸೈಬರ್ ಅಪರಾಧಗಳ ಬಗ್ಗೆ ಜಾಗೃತಿ ಮೂಡಿಸಲಾಗಿದ್ದು, ಅಪರಿಚಿತ ಕರೆಗಳು, ಬ್ಯಾಂಕ್ ವಿವರ ಹಂಚಿಕೆ ಹಾಗೂ ಆನ್‌ಲೈನ್ ವಂಚನೆಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕೆಂದು ಸಲಹೆ ನೀಡಲಾಯಿತು.

ಸಭೆಯ ಅಂತ್ಯದಲ್ಲಿ ಹಿರಿಯ ನಾಗರಿಕರು ಪೊಲೀಸ್ ಇಲಾಖೆಯ ಜನಸ್ನೇಹಿ ಕಾರ್ಯವನ್ನು ಶ್ಲಾಘಿಸಿ, ಇಂತಹ ಕಾರ್ಯಕ್ರಮಗಳು ಗ್ರಾಮೀಣ ಜನರಿಗೆ ಧೈರ್ಯ ತುಂಬುತ್ತಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

# ಸರ್ಕಾರಿ ಜಾಗ ಒತ್ತುವರಿ: ಸ್ಥಳ ಪರಿಶೀಲನೆ



ಬೇತಮಂಗಲ

ಸಮೀಪದ ಕ್ಯಾಸಂಬಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗಾನಹಳ್ಳಿ ಗ್ರಾಮದ ಸರ್ವೆ ನಂ. 49ರಲ್ಲಿ 1.14 ಎಕರೆ ಕೋಟ್ಯಾಂತರ ರೂ. ಮೌಲ್ಯದ ಸರ್ಕಾರಿ ಜಾಗವನ್ನು ಆಂಧ್ರ ಮೂಲದವರು ಅಕ್ರಮವಾಗಿ ಒತ್ತುವರಿ ಮಾಡಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಕಂದಾಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದ್ದಾರೆ.

ಈ ಕುರಿತು ಡಾ. ಬಿ.ಆರ್.ಅಂಬೇಡ್ಕರ್ ಯುವ ವೇದಿಕೆ ಕರ್ನಾಟಕ ಅಧ್ಯಕ್ಷ ಜೈಭೀಮ್ ಶ್ರೀನಿವಾಸ್ ನೀಡಿದ ಪತ್ರಿಕಾ ಹೇಳಿಕೆ ಹಾಗೂ ಸಲ್ಲಿಸಿದ ಅರ್ಜಿಯ ಆಧಾರದಲ್ಲಿ ಕಂದಾಯ ವೃತ್ತ ನಿರೀಕ್ಷಕ ಮಂಜುನಾಥ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪರಿಶೀಲನೆಯ ನಂತರ ಮಾತನಾಡಿದ ಮಂಜುನಾಥ್, ನಕ್ಷೆ ದಾಖಲೆಗಳ ಪ್ರಕಾರ 1.14 ಎಕರೆ ಜಮೀನು ಸರ್ಕಾರಿ ಬೀಡು ಎಂದು ಗುರುತಿಸಲಾಗಿದ್ದು, ಸಂಬಂಧಿತ ದಾಖಲೆಗಳನ್ನು ಸಂಪೂರ್ಣವಾಗಿ ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಒತ್ತುವರಿ ದೃಢಪಟ್ಟರೆ ತಕ್ಷಣ ತೆರವು ಕಾರ್ಯಾಚರಣೆ ನಡೆಸಲಾಗುವುದು ಎಂದು ಅವರು ಭರವಸೆ ನೀಡಿದರು.

ಈ ವೇಳೆ ಮಾತನಾಡಿದ ಜೈಭೀಮ್ ಶ್ರೀನಿವಾಸ್, ಸರ್ಕಾರಿ ಆಸ್ತಿ ಸಾರ್ವಜನಿಕ ಹಿತಕ್ಕಾಗಿ ಮೀಸಲಾಗಿದ್ದು, ಅದನ್ನು ಖಾಸಗಿ ವ್ಯಕ್ತಿಗಳು ಅಕ್ರಮವಾಗಿ ವಶಪಡಿಸಿಕೊಳ್ಳುವುದು ಕಾನೂನುಬಾಹಿರವಾಗಿದೆ ಎಂದು ಆರೋಪಿಸಿದರು. ಕಳೆದ 15 ದಿನಗಳ ಹಿಂದೆ ಈ ಕುರಿತು ಪತ್ರಿಕಾ ಹೇಳಿಕೆ ನೀಡಲಾಗಿದ್ದು, ಈಗ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿರುವುದು ಮಹತ್ವದ ಬೆಳವಣಿಗೆ ಎಂದು ಹೇಳಿದರು.

ಸ್ಥಳ ಪರಿಶೀಲನೆಯ ವೇಳೆ ಕಂದಾಯ ಅಧಿಕಾರಿಗಳು, ಸಂಘಟನೆಯ ಪದಾಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

## ಸಹಾಯಧನ ಯೋಜನೆಗೆ ಅರ್ಜಿ ಆಹ್ವಾನ


ಬೆಂಗಳೂರು

ಬಂಜಾರ ಸಂಸ್ಕೃತಿ, ಭಾಷೆ, ಕಲೆ, ಸಾಹಿತ್ಯ ಕುರಿತ 2024-25 ಮತ್ತು 2025-26ನೇ ಸಾಲಿನಲ್ಲಿ ಪಿ.ಹೆಚ್.ಡಿ ಪದವಿ ಪಡೆದ ಬಂಜಾರ ಜನಾಂಗದ ಅಭ್ಯರ್ಥಿಗಳಿಗೆ ಪಿ.ಹೆಚ್.ಡಿ ಪದವಿಗೆ ಆಯ್ಕೆಯಾದ ಪುಸ್ತಕ ಪ್ರಕಟಣೆಗಾಗಿ 40 ಸಾವಿರ ರೂ.ಗಳ ಸಹಾಯಧನ ನೀಡುವ ಯೋಜನೆಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಜೂನ್ 15ರ ಸಂಜೆ 5.00 ಗಂಟೆಯೊಳಗಾಗಿ ರಿಜಿಸ್ಟ್ರಾರ್, ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ, ಚಾಲುಕ್ಯ ವಿಭಾಗ, 1ನೇ ಮಹಡಿ, ಕನ್ನಡ ಭವನ, ಜೆ.ಸಿ ರಸ್ತೆ, ಬೆಂಗಳೂರು-560002 ಇಲ್ಲಿಗೆ ಪೂರ್ಣ ವಿವರಗಳೊಂದಿಗೆ ಅರ್ಜಿ ನಮೂನೆ ಮತ್ತು ನಿಯಮಗಳಂತೆ ಅರ್ಜಿಯನ್ನು ಸಲ್ಲಿಸಬೇಕು.



ನೇಪಾಳದ ಕಾಠ್ಮಂಡುವಿನ ಶ್ರೀ ಪಶುಪತಿನಾಥ ದೇವಾಲಯದ ನೈಋತ್ಯಕ್ಕೆ ಒಂದು ಕಿಲೋ ಮೀಟರ್ ದೂರದಲ್ಲಿರುವ ಐತಿಹಾಸಿಕ ರಾಮಮಂದಿರಕ್ಕೆ ಶೃಂಗೇರಿ ಜಗದ್ಗುರು ಶ್ರೀ ಶ್ರೀ ವಿಧುಶೇಖರಭಾರತೀ ಮಹಾಸ್ವಾಮಿಗಳವರು ಭೇಟಿ ನೀಡಿ ದೇವರ ದರ್ಶನ ಪಡೆದರು.



ಮೈಸೂರಿನ ಸಪ್ನಾ ಬುಕ್ ಹೌಸ್‌ನಲ್ಲಿ ನಡೆದ ಸರಳ ಸಮಾರಂಭದಲ್ಲಿ ನಿವೃತ್ತ ಐಪಿಎಸ್ ಅಧಿಕಾರಿ ಡಿ.ವಿ. ಗುರುಪ್ರಸಾದ್ ಅವರ ವಿರಚಿತ “ಪಾಕ್‌ನಲ್ಲಿ ಧುರಂಧರರು” ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಲೇಖಕ ಡಿ.ವಿ. ಗುರುಪ್ರಸಾದ್, ಮೈಸೂರು ಪೋಲಿಸ್ ಆಯುಕ್ತೆ ಶ್ರೀಮತಿ ಸೀಮಾ ಲಾಟ್ಕರ್, ಶ್ರೀಮತಿ ರೇಣುಕಾ ಮಂಜುನಾಥ್, ಜಯಪ್ರಕಾಶ್ ಪುತ್ತೂರ್, ಡಿಎಸ್‌ಪಿ ಗಜೇಂದ್ರ ಪ್ರಸಾದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿಶ್ವ ಜೇನುನೊಣ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ

ಕೋಲಾರ

ಜೇನುನೊಣಗಳು ಪ್ರಕೃತಿಯ ಅತ್ಯಂತ ಪರಿಣಾಮಕಾರಿ ಪರಾಗಸ್ಪರ್ಶಕಗಳಾಗಿ ಕಾರ್ಯನಿರ್ವಹಿಸುವ ಮೂಲಕ ಅಡ್ಡ-ಪರಾಗಸ್ಪರ್ಶ ಹಣ್ಣುಗಳು, ತರಕಾರಿಗಳು ಮತ್ತು ಎಣ್ಣೆಬೀಜಗಳ ಇಳುವರಿ ಮತ್ತು ಗುಣಮಟ್ಟವನ್ನು ನೇರವಾಗಿ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ ಎಂದು ಗಾರ್ಡನ್ ಸಿಟಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಮತ್ತು ಭಾರತದ ಜೇನುನೊಣ ಚಿಕಿತ್ಸಾ ಸಂಘದ ನಿರ್ದೇಶಕ ಡಾ. ಎಚ್. ಆರ್. ಭಾರ್ಗವ ತಿಳಿಸಿದರು.

ಜಿಲ್ಲಾ ತೋಟಗಾರಿಕೆ ಇಲಾಖೆ, ಭಾರತದ ಜೇನುನೊಣಗಳ ಚಿಕಿತ್ಸಾ ಸಂಘದ ಸಹಯೋಗದೊಂದಿಗೆ ನಗರದ ತೋಟಗಾರಿಕಾ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ನಡೆದ ವಿಶ್ವ ಜೇನುನೊಣ ದಿನಾಚರಣೆ ಕಾರ್ಯಕ್ರಮ, ಹಾಗೂ ವಿಶೇಷ ತರಬೇತಿ ಮತ್ತು ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ಈ ಕಾರ್ಯಕ್ರಮ ‘ರೈತರ ಸಮೃದ್ಧಿಗೆ ನಮ್ಮ ಬದ್ಧತೆ’ ಎಂಬ ವಿಷಯದ ಮೇಲೆ ನಡೆಯುತ್ತಿದ್ದು,ಜೇನುನೊಣಗಳ ಪ್ರಾಥಮಿಕ ಮೌಲ್ಯವು ಜೇನು ಉತ್ಪಾದನೆಗೆ ಮಾತ್ರವೇ ಸೀಮಿತವಲ್ಲ, ಮಾನವನ ಉಳಿವು ಜೇನುನೊಣಗಳನ್ನು ರಕ್ಷಿಸುವುದರ ಮೇಲೆ ಅವಲಂಬಿತವಾಗಿದೆ ಎಂದು ಅಭಿಪ್ರಾಯಪಟ್ಟರು.

ಬೃಹತ್ ವಸಾಹತು ಕುಸಿತವನ್ನು ತಡೆಗಟ್ಟಲು ರಾಸಾಯನಿಕ ಕೀಟನಾಶಕಗಳ ಬಳಕೆಯನ್ನು ಕಡಿಮೆ ಮಾಡಲು ಕರೆ ನೀಡಿದ ಅವರು, ರಸಾಯನಿಕ ಕೀಟನಾಶಕಗಳ ಬದಲಾಗಿ, ಜೇನುನೊಣಗಳ ಜನಸಂಖ್ಯೆಯನ್ನು ಮಾರಕ ರಾಸಾಯನಿಕ ಒಡ್ಡುವಿಕೆಯಿಂದ ರಕ್ಷಿಸಲು ಪರಿಸರ ಸ್ನೇಹಿ ಜೈವಿಕ-ಕೀಟನಾಶಕಗಳನ್ನು ಬೆಳೆಗಳಿಗೆ ಬಳಸಲು ಕರೆ ನೀಡಿದರು.



ಜೇನುನೊಣಗಳ ಜೀವನ ಶೈಲಿ,ಬದುಕಿನ ಕುರಿತು ವಿವರವಾಗಿ ತಿಳಿಸಿದ ಡಾ.ಭಾರ್ಗವ, ರಾಣಿ ಜೇನುನೊಣ ಪ್ರತಿದಿನ 2 ಸಾವಿರ ಮೊಟ್ಟೆಗಳನ್ನು ಇಡುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸುತ್ತದೆ ಅದೇ ರೀತಿ ಡ್ರೋನ್ ಜೇನುನೊಣವಾದ ಫಲವತ್ತಾದ ಗಂಡು ಜೇನುನೊಣಗಳು ಏಕೈಕ ಜೈವಿಕ ಉದ್ದೇಶ ಸಂಯೋಗದ ಕಾರ್ಯವನ್ನು ನಿರ್ವಹಿಸುತ್ತವೆ ಎಂದರು.

ಉಳಿದಂತೆ ಕೆಲಸಗಾರ ಜೇನುನೊಣಗಳು ಹೂಗಳನ್ನು ಹಾಗೂ ಮಕರಂದವನ್ನು ಹುಡುಕುವ ಮತ್ತು ಜೇನುಗೂಡಿನ ಕಾವಲು ಕಾಯುವ ಫಲವತ್ತಾದ ಹೆಣ್ಣುಗಳು ಒಂದು ಗುಂಪು ಇರುತ್ತದೆ, ಜತೆಗೆ ನರ್ಸ್ ಜೇನುನೊಣಗಳು ಲಾರ್ವಾಗಳು ಮತ್ತು ರಾಣಿಗೆ ಆಹಾರವನ್ನು ನೀಡುವ ಕಾರ್ಯವನ್ನು ಹೊಂದಿರುವ ಯುವ ಕೆಲಸಗಾರರರಂತೆ ಕೆಲಸ ಮಾಡುತ್ತವೆ ಎಂದು ತಿಳಿಸಿದರು.

ತೋಟಗಾರಿಕಾ ಇಲಾಖೆ ಉಪನಿರ್ದೇಶಕ ಕುಮಾರ್ ಸ್ವಾಮಿ ಮಾತನಾಡಿ, ಜೇನುನೊಣ ಭೂಮಿಯ ಮೇಲ್ಮೈಯಿಂದ ಕಣ್ಮರೆಯಾದರೆ, ಮನುಷ್ಯನಿಗೆ ನಾಲ್ಕು ವರ್ಷಗಳಿಗಿಂತ ಹೆಚ್ಚು ಕಾಲ ಬದುಕಲು ಸಾಧ್ಯವಿಲ್ಲ ಎಂಬ ಸತ್ಯ ಅರಿಯಬೇಕು ಎಂದು ಸ್ಪಷ್ಟ ಸಂದೇಶ ನೀಡಿದ ಅವರು, ಸುಸ್ಥಿರ ಭವಿಷ್ಯವನ್ನು ಖಚಿತಪಡಿಸಿಕೊಳ್ಳಲು ಪ್ರತಿಯೊಬ್ಬರೂ ಜೇನುನೊಣ ಸ್ನೇಹಿ ಹೂವುಗಳನ್ನು ನೆಡಬೇಕು ಮತ್ತು ನೈಸರ್ಗಿಕ ಆವಾಸಸ್ಥಾನಗಳನ್ನು ರಕ್ಷಿಸಬೇಕು ಎಂದು ಸಲಹೆ ನೀಡಿದರು.

ತೋಟಗಾರಿಕಾ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಡಾ.ಶಿವಾರೆಡ್ಡಿ ಮಾತನಾಡಿ, ಜೇನು ಕೃಷಿ ಹೆಚ್ಚು ಲಾಭದಾಯಕವಾಗಿದೆ ಎಂಬುದು ಮಾತ್ರವಲ್ಲ, ರೈತರ ಸ್ನೇಹಿಯಾಗಿ ಈ ನೊಣಗಳು ಕೆಲಸ ಮಾಡುತ್ತಿದ್ದು, ರೈತರು ಬೆಳೆಯುವ ಬೆಳೆಗಳಲ್ಲಿ ಪರಾಗಸ್ಪರ್ಶ ನಡೆಸಿ ಉತ್ತಮ ಇಳುವರಿಗೆ ಕಾರಣವಾಗಿವೆ ಎಂದು ತಿಳಿಸಿದರು.

ಜೇನು ನೊಣಗಳು ಜೇನು ಉತ್ಪಾದನೆಗೆ ಸೀಮಿತವಲ್ಲ, ಇವು ನಮ್ಮ ಆಹಾರ ಉತ್ಪಾದನೆಯ ಮೇಲೆ ಅತಿ ಹೆಚ್ಚು ಪರಿಣಾಮ ಬೀರುತ್ತವೆ, ಇವುಗಳನ್ನು ಇಂದು ಬಳಸುವ ಕೀಟನಾಶಗಳು, ಪರಿಸರ ಮಾಲಿನ್ಯದಿಂದ ರಕ್ಷಿಸುವ ಕೆಲಸವನ್ನು ರೈತರು ಮಾಡಬೇಕು, ಅವುಗಳಿಗೆ ಪೂರಕವಾದ ವಾತಾವರಣವನ್ನು ಸೃಷ್ಟಿಸಬೇಕು ಎಂದು ಕೋರಿದರು.

ಇದೇ ಸಂದರ್ಭದಲ್ಲಿ ಸ್ಥಳೀಯ ರೈತರು, ಜೇನುಸಾಕಣೆದಾರರು ಮತ್ತು ವಿದ್ಯಾರ್ಥಿಗಳ ಜೊತೆಗೆ ಸಂವಾದವನ್ನು ನಡೆಸಲಾಯಿತು. ತರಬೇತಿ ಅಧಿವೇಶನದಲ್ಲಿ ಜೇನುನೊಣಗಳ ಜೀವನ ಶೈಲಿ, ಅವುಗಳ ರಕ್ಷಣೆ, ಜೇನು ಉತ್ಪಾದನೆ ಹೆಚ್ಚಿಸುವುದು ಮತ್ತಿತರ ಅಂಶಗಳ ಕುರಿತು ಚರ್ಚಿಸಲಾಯಿತು.

ಕಾರ್ಯಾಗಾರದಲ್ಲಿ ವೈವಿಧ್ಯಮಯ, ಹೆಚ್ಚಿನ ಮೌಲ್ಯದ ಜೇನುಸಾಕಣೆ ಉತ್ಪನ್ನಗಳನ್ನು ಕೊಯ್ಲು ಮಾಡುವ ಬಗ್ಗೆ ಪ್ರಾಯೋಗಿಕ ಮಾರ್ಗದರ್ಶನವನ್ನು ನೀಡಲಾಯಿತು.

ಇವುಗಳಲ್ಲಿ ಜೇನುನೊಣ ಪರಾಗ ಜೇನುಮೇಣದಿಂದ ಸೌಂದರ್ಯವರ್ಧಕಗಳು ಮತ್ತು ಮೇಣದಬತ್ತಿಗಳು, ರಾಯಲ್ ಜೆಲ್ಲಿ ಪ್ರೋಪೋಲಿಸ್ ಬ್ಯಾಕ್ಟೀರಿಯಾ ವಿರೋಧಿ ರಾಳ, ಮತ್ತು ಜೇನುನೊಣ ವಿಷ ಸಂಧಿವಾತಕ್ಕೆ ಅಪಿಥೆರಪಿಯಲ್ಲಿ ಬಳಸುವ ಜೇನುನೊಣದ ವಿಷ ಮತ್ತಿತರ ಅಂಶಗಳ ಕುರಿತು ತಿಳಿಸಿಕೊಡಲಾಯಿತು.

ಕಾರ್ಯಕ್ರಮದಲ್ಲಿ ಮುಳಬಾಗಿಲು ತಾಲೂಕು ತೋಟಗಾರಿಕಾ ಸಹಾಯಕ ನಿರ್ದೇಶಕ ಎಸ್.ಎ.ರವಿಕುಮಾರ್, ಸಹಾಯಕ ತೋಟಗಾರಿಕೆ ಅಧಿಕಾರಿ ಎಂ.ಲಾವಣ್ಯ, ಸಂದೀಪ್, ಪುನೀತ್, ಸೌಮ್ಯ, ರಾಘವೇಂದ್ರ, ಕೆ.ಸಿ.ವಿನಯ್ ಕುಮಾರ್ ಇತರರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy